VOLUME: 16 | 23 MAY 2026 | ಶನಿವಾರ | RS: 2 | PAGE: 06 ISSUE: 103 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com



ಕಳೆದ ಕೆಲವು ದಿನಗಳಿಂದ ಭಾರೀ ಚರ್ಚೆಯಲ್ಲಿರುವ ನಟಿ ತ್ರಿಷಾ, ಸೋಷಿಯಲ್ ಮೀಡಿಯಾದಲ್ಲಿ ಹಾಟ್ ಟಾಪಿಕ್ ಆಗಿದ್ದಾರೆ. ತ್ರಿಷಾ ಮತ್ತು ತಮಿಳುನಾಡು ಸಿಎಂ ವಿಜಯ್ ಅವರ ಕುರಿತಾಗಿ ಹರಿದಾಡುತ್ತಿರುವ ಡೇಟಿಂಗ್ ವದಂತಿಗಳಿಂದ ನಟಿ ಸೋಷಿಯಲ್ ಮೀಡಿಯಾದಲ್ಲಿ ಪೋಸ್ಟ್ ಮಾಡಿದ ಪ್ರತಿಯೊಂದು ವಿಷಯಗಳು ಭಾರೀ ವೈರಲ್ ಆಗುತ್ತಿವೆ.

BHARATHA SARATHI
KANNADA DAILY NEWS PAPER

CALL 9740160669

# ಭಾರತ ಸಾರಥಿ

RNI KARKAN2011/44806

prabhavaa.com

ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



9ನೇ ತರಗತಿಯಲ್ಲಿ ಎರಡು ಹೆಚ್ಚುವರಿ ಭಾಷೆಗಳನ್ನು ಕಲಿಯುವ ಹಠಾತ್ ಅಗತ್ಯವು 10ನೇ ತರಗತಿಯ ಬೋರ್ಡ್ ಪರೀಕ್ಷೆಗಳ ತಯಾರಿಗೆ ಅಡ್ಡಿಯಾಗುತ್ತದೆ ಮತ್ತು ವಿದ್ಯಾರ್ಥಿಗಳ ಮೇಲೆ ಅಸಮಂಜಸ ಹೊರೆಯನ್ನು ಹೇರುತ್ತದೆ ಎಂದು ರೋಹಟಗಿ ವಾದಿಸಿದರು. ಇದ್ದಕ್ಕಿದ್ದಂತೆ ಕಲಿತು 10ನೇ ತರಗತಿಯಲ್ಲಿ ಕಾಣಿಸಿಕೊಳ್ಳುವುದು ಹೇಗೆ? ಇದು ಅವ್ಯವಸ್ಥೆಯನ್ನು ಸೃಷ್ಟಿಸುತ್ತದೆ ಎಂದು ರೋಹಟಗಿ ವಾದಿಸಿದರು. ವಾದ ಆಲಿಸಿದ ಬಳಿಕ ಪೀಠವು, ಮುಂದಿನ ವಾರ ವಿಚಾರಣೆಗೆ ಈ ವಿಷಯವನ್ನು ಪಟ್ಟಿ ಮಾಡುವುದಾಗಿ ಹೇಳಿದೆ.

# ತ್ರಿಭಾಷಾ ನೀತಿ ಪ್ರಶ್ನಿಸಿ ಸುಪ್ರೀಂನಲ್ಲಿ ಅರ್ಜಿ

ನವದೆಹಲಿ: 9ನೇ ತರಗತಿಯ ವಿದ್ಯಾರ್ಥಿಗಳಿಗೆ ಮೂರು ಭಾಷೆಗಳನ್ನು ಕಡ್ಡಾಯಗೊಳಿಸುವ ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿಯ ಹೊಸ ನೀತಿಯನ್ನು ಪ್ರಶ್ನಿಸಿ ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಲಾಗಿದೆ. ವಿದ್ಯಾರ್ಥಿಗಳು ಮತ್ತು ಪೋಷಕರು ಸಲ್ಲಿಸಿದ್ದ ಅರ್ಜಿಯನ್ನು ಹಿರಿಯ ವಕೀಲ ಮುಕುಲ್ ರೋಹಟಗಿ ಅವರು ಸಿಜೆಐ ಸೂರ್ಯ ಕಾಂತ್ ನೇತೃತ್ವದ ತ್ರಿ ಸದಸ್ಯ ಪೀಠದ ಮುಂದೆ ಪ್ರಸ್ತಾಪಿಸಿದರು.

9ನೇ ತರಗತಿಯಲ್ಲಿ ಎರಡು ಹೆಚ್ಚುವರಿ ಭಾಷೆಗಳನ್ನು ಕಲಿಯುವ ಹಠಾತ್ ಅಗತ್ಯವು 10ನೇ ತರಗತಿಯ ಬೋರ್ಡ್ ಪರೀಕ್ಷೆಗಳ ತಯಾರಿಗೆ ಅಡ್ಡಿಯಾಗುತ್ತದೆ ಮತ್ತು ವಿದ್ಯಾರ್ಥಿಗಳ ಮೇಲೆ ಅಸಮಂಜಸ ಹೊರೆಯನ್ನು ಹೇರುತ್ತದೆ ಎಂದು ರೋಹಟಗಿ ವಾದಿಸಿದರು.



ಇದ್ದಕ್ಕಿದ್ದಂತೆ ಕಲಿತು 10ನೇ ತರಗತಿಯಲ್ಲಿ ಕಾಣಿಸಿಕೊಳ್ಳುವುದು ಹೇಗೆ? ಇದು ಅವ್ಯವಸ್ಥೆಯನ್ನು ಸೃಷ್ಟಿಸುತ್ತದೆ ಎಂದು ರೋಹಟಗಿ ವಾದಿಸಿದರು. ವಾದ ಆಲಿಸಿದ ಬಳಿಕ ಪೀಠವು, ಮುಂದಿನ ವಾರ ವಿಚಾರಣೆಗೆ ಈ ವಿಷಯವನ್ನು ಪಟ್ಟಿ ಮಾಡುವುದಾಗಿ ಹೇಳಿದೆ.

ತ್ರಿಭಾಷಾ ಸೂತ್ರಕ್ಕೆ ಒತ್ತು ನೀಡುವ ರಾಷ್ಟ್ರೀಯ ಶಿಕ್ಷಣ ನೀತಿ 2020 ನೊಂದಿಗೆ ಹೊಂದಿಕೊಂಡ ವಿಶಾಲ ಬದಲಾವಣೆಯ ಭಾಗವಾಗಿದೆ. ಈ ನೀತಿಯು ವಿದ್ಯಾರ್ಥಿಗಳು ಕನಿಷ್ಠ ಎರಡು ಭಾರತೀಯ ಭಾಷೆಗಳನ್ನು ಒಳಗೊಂಡಂತೆ ಬಹು ಭಾಷೆಗಳನ್ನು ಕಲಿಯಲು ಪ್ರೋತ್ಸಾಹಿಸುತ್ತದೆ.

ರಾಜ್ಯಗಳು ಮತ್ತು ಶಾಲೆಗಳಿಗೆ ಆದ್ಯತೆ ಬಿಡಲಾಗಿದೆ.

ವಿದ್ಯಾರ್ಥಿಗಳು 10 ನೇ ತರಗತಿಯವರೆಗೆ ಎರಡು ಭಾಷೆಗಳನ್ನು ಅಧ್ಯಯನ ಮಾಡುತ್ತಿದ್ದರು.

ಈ ಭಾಷೆಗಳು ಸಾಮಾನ್ಯವಾಗಿ ಇಂಗ್ಲಿಷ್ ಮತ್ತು ಎರಡನೇ ಭಾಷೆ (ಹಿಂದಿ ಅಥವಾ ಪ್ರಾದೇಶಿಕ ಭಾಷೆಯಂತಹವು) ಆಗಿದ್ದವು.

ಆದಾಗ್ಯೂ, ಹೊಸ ಚೌಕಟ್ಟು 9 ನೇ ತರಗತಿಗೆ ಪ್ರವೇಶಿಸುವ ವಿದ್ಯಾರ್ಥಿಗಳು ಹೆಚ್ಚುವರಿ ಭಾಷಾ ಘಟಕವನ್ನು ತೆಗೆದುಕೊಳ್ಳುವ ಅಗತ್ಯವನ್ನು ಹೆಚ್ಚಿಸುವ ಮೂಲಕ ಇದನ್ನು ವಿಸ್ತರಿಸುತ್ತದೆ ಎಂದು ವರದಿಯಾಗಿದೆ. ಇದು ಮಾಧ್ಯಮಿಕ ಹಂತದಲ್ಲಿ ಅಧ್ಯಯನ ಮಾಡುವ ಭಾಷೆಗಳ ಸಂಖ್ಯೆಯನ್ನು ಪರಿಣಾಮಕಾರಿಯಾಗಿ ಹೆಚ್ಚಿಸುತ್ತದೆ.

## ಒಲೈಕೆ ರಾಜಕಾರಣ: ಆಕ್ರೋಶ

ವಿಜಯಪುರ: ಮುಸ್ಲಿಮರ ಓಲೈಕೆ ಈ ಮಟ್ಟಕ್ಕೆ ಮಾಡುತ್ತಿರುವುದು ತಪ್ಪು, ಸಿದ್ದರಾಮಯ್ಯ ಅವರದ್ದು ಅತಿರೇಕ ಆಯ್ತು ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಆಕ್ರೋಶ ಹೊರಹಾಕಿದ್ದಾರೆ.

ಜಿಲ್ಲೆಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಸಿಎಂ ಸಿದ್ದರಾಮಯ್ಯ ಅವರದ್ದು ಅತಿರೇಕ ಆಯ್ತು. ಮುಸ್ಲಿಮರ ಓಲೈಕೆ ಈ ಮಟ್ಟಕ್ಕೆ ಮಾಡುತ್ತಿರುವುದು ತಪ್ಪು. ಮಾಜಿ ಸಂಸದರ ಮೇಲೆ ಕಲ್ಲು ತೂರಾಟ ಮಾಡಿದವರು, ಕೆಜಿ ಹಳ್ಳಿ, ಡಿಜೆ ಹಳ್ಳಿಯಲ್ಲಿ ಗಲಾಟೆ ಮಾಡಿದವರು, ಹುಬ್ಬಳ್ಳಿಯಲ್ಲಿ ಪೊಲೀಸ್ ಠಾಣೆಗೆ ಬೆಂಕಿ ಹಚ್ಚಿದವರ ಕೇಸ್ ಹಿಂಪಡೆದಿದ್ದಾರೆ. ಈಗ ರಾಜ್ಯ ಸರ್ಕಾರ ಲಾಡ್ಲೆ ಮಶಾಕ್ ಕೇಸ್ ಹಿಂಪಡೆದ ವಿಚಾರಕ್ಕೆ ಕಿಡಿಕಾರಿದ್ದಾರೆ.

ಇದು ಮತ್ತಷ್ಟು ಕ್ರೈಂಗೆ ಉತ್ತೇಜನ ಕೊಟ್ಟಂತಾಗುತ್ತೆ. ಇದನ್ನ ವಿರೋಧಿಸಬೇಕಾದ ರಾಜ್ಯ ಬಿಜೆಪಿಯಲ್ಲಿ ನಾಯಕತ್ವದ ಕೊರತೆ ಇದೆ. ವಿಜಯೇಂದ್ರ ಕೂಡ ಅನೇಕ ವಂಚನೆ, ನಕಲಿ ಸಹಿ ಮಾಡಿ ಹಣ ಲೂಟಿ ಹೊಡೆಸಿದ್ದಾನೆ. ಹೀಗಾಗಿ ಇಂತಹ ವಿಷಯಗಳ ಬಗ್ಗೆ ವಿರೋಧ ಮಾಡುವ ನೈತಿಕತೆ ವಿಜಯೇಂದ್ರ ಬಳಿ ಇಲ್ಲ ಎಂದಿದ್ದಾರೆ. ಇನ್ನು ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನದ ಆಯ್ಕೆ ವಿಚಾರಕ್ಕೆ ಪ್ರತಿಕ್ರಿಯಿಸಿ, ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನದ ಆಯ್ಕೆ ಸಮೀಕ್ಷೆಗೆ ಇಬ್ಬರು ಬಂದಿದ್ದಾರೆ. ಅವರಿಬ್ಬರು ಪ್ರಾಮಾಣಿಕರಿದ್ದಾರೆ. ಪ್ರಾಮಾಣಿಕವಾಗಿ ಸಮೀಕ್ಷೆ ಮಾಡಿ ವರದಿ ಕೊಟ್ರೆ ಒಳ್ಳೆಯದಾಗುತ್ತೆ. ಇಲ್ಲಂದ್ರೆ ಮತ್ತೆ ವಿಜಯೇಂದ್ರನನ್ನೇ ಮುಂದುವರೆಸಿದ್ರೆ ಏನು ಮಾಡೋಕಾಗಲ್ಲ ಎಂದು ಹೇಳಿದ್ದಾರೆ.

## ಕಾಕ್ರೋಚ್‌ಗೆ ಲಕ್ಷ್ಮಣ ರೇಖೆ

ಬೆಂಗಳೂರು: ಕಾಕ್ರೋಚ್ ಜನತಾ ಪಾರ್ಟಿ ದೇಶಾದ್ಯಂತ ಭಾರೀ ಸದ್ದು ಮಾಡುತ್ತಿದೆ. ಇದರ ಮಧ್ಯೆ ಇತ್ತ ಕಾಕ್ರೋಚ್ ಜನತಾ ಪಾರ್ಟಿ ಕರ್ನಾಟಕ, ಇದೇ ಮೇ.24 ರಂದು ಬೆಂಗಳೂರಿನ ಟೌನ್ ಹಾಲ್ ಮುಂಭಾಗದಲ್ಲಿ ಕಾರ್ಯಕ್ರಮ ಆಯೋಜಿಸಿದ್ದು, ಶಾಂತಿಯುತ ಮಾನವ ಸರಪಳಿ ನಿರ್ಮಾಣ ಕುರಿತು ಸಾಮಾಜಿಕ ಜಾಲತಾಣಗಳಲ್ಲಿ ಪೋಸ್ಟ್ ಹರಿದಾಡುತ್ತಿದೆ.

ಕಾಕ್ರೋಚ್ ಜನತಾ ಪಾರ್ಟಿಯ ಪೋಸ್ಟ್ ವೈರಲ್ ಆಗುತ್ತಿದ್ದಂತೆಯೇ ಎಚ್ಚೆತ್ತ ಬೆಂಗಳೂರು ಪೊಲೀಸರು, ಇಂತಹ ಕಾರ್ಯಕ್ರಮ ಆಯೋಜನೆಗೆ ಮನವಿ ಬಂದಿಲ್ಲ.

ಒಂದು ವೇಳೆ ಮನವಿ ಬಂದರೂ ಟೌನ್ ಹಾಲ್ ಬಳಿ ಅನುಮತಿ ನೀಡಲ್ಲ ಎಂದು ಸ್ಪಷ್ಟಪಡಿಸಿದೆ.

ಕಾಕ್ರೋಚ್ ಜನತಾ ಪಾರ್ಟಿಯಿಂದ ಬೆಂಗಳೂರಿನ ಟೌನ್ ಹಾಲ್ ಬಳಿ ಮಾನವ ಸರಪಳಿ ಪೋಸ್ಟ್‌ಗೆ ಪ್ರತಿಕ್ರಿಯಿಸಿರುವ ಬೆಂಗಳೂರು ಪೊಲೀಸರು, ಟೌನ್ ಹಾಲ್ ಬಳಿ ಕಾರ್ಯಕ್ರಮ ಆಯೋಜನೆಗೆ ಯಾವುದೇ ವ್ಯಕ್ತಿ, ಸಂಘಟನೆ, ಪಕ್ಷದಿಂದ ಅನುಮತಿ ಕೋರಿರುವ ಯಾವುದೇ ಅರ್ಜಿಯನ್ನು ಸ್ವೀಕರಿಸಿಲ್ಲ. ಈ ಸಂಬಂಧ ಯಾವುದೇ ಅಧಿಕೃತ ಅನುಮತಿ ನೀಡಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.



ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರು ಶುಕ್ರವಾರ ಕೇರಳಂನ ಕಾಲಮಸ್ಸೇರಿಯ ಹೆಚ್‌ಎಂಟಿ ಮಷಿನ್ & ಟೂಲ್ಸ್ ಲಿಮಿಟೆಡ್ ಕಾರ್ಖಾನೆಗೆ ಭೇಟಿ ನೀಡಿ ಪರಿಶೀಲನೆ ವಿಸ್ತೃತ ನಡೆಸಿದರು. ಕುಮಾರಸ್ವಾಮಿ ಅವರು ಕೇಂದ್ರದ ಬೃಹತ್ ಕೈಗಾರಿಕೆ ಮಂತ್ರಿಗಳಾದ ಮೇಲೆ ಕಾಲಮಸ್ಸೇರಿ ಘಟಕಕ್ಕೆ ಎರಡನೇ ಸಲ ಭೇಟಿ ನೀಡಿದ್ದು, ಒಟ್ಟಾರೆ ಹೆಚ್‌ಎಂಟಿ ಕಾರ್ಖಾನೆಯನ್ನು ಪುನಶ್ಚೇತನಗೊಳಿಸುವ ಕಾರ್ಯವ್ಯೂಹದ ಭಾಗ ಇದಾಗಿದೆ.

ಕನ್ನಡ ಪರ ಹೋರಾಟಗಾರರ ವಿರುದ್ಧದವು ಸೇರಿದಂತೆ 52 ಕ್ರಿಮಿನಲ್ ಪ್ರಕರಣ ಹಿಂಪಡೆಯಲು ಸಚಿವ ಸಂಪುಟ ತೀರ್ಮಾನಿಸಿದೆ. ಕನ್ನಡ ಹೋರಾಟಗಾರ ವಾಟಾಳ್ ನಾಗರಾಜ್ ವಿರುದ್ಧದ 10 ಪ್ರಕರಣಗಳು, ಕಾವೇರಿ ಹೋರಾಟಗಾರರ ವಿರುದ್ಧದ ಪ್ರಕರಣಗಳು, ಕನ್ನಡ ಪರ ಹೋರಾಟ, ಕಳಸಾ-ಬಂಡೂರಿ ಯೋಜನೆ ಹೋರಾಟಕ್ಕೆ ಸಂಬಂಧಿಸಿದ ಪ್ರಕರಣಗಳು ಸೇರಿದಂತೆ ರೈತರು ಹಾಗೂ ದಲಿತ ಹೋರಾಟಗಾರರ ವಿರುದ್ಧ ದಾಖಲಾಗಿದ್ದ ಪ್ರಕರಣಗಳನ್ನೂ ಹಿಂಪಡೆಯಲು ಸರ್ಕಾರ ನಿರ್ಧಾರ ಕೈಗೊಂಡಿದೆ ಎಂದು ತಿಳಿದುಬಂದಿದೆ.

# ಕ್ರಿಮಿನಲ್ ಕೇಸ್ ವಾಪಸ್‌ಗೆ ಆಕ್ರೋಶ

ಬೆಂಗಳೂರು: ಕಲಬುರಗಿ ಜಿಲ್ಲೆಯ ಆಳಂದದ ವಿವಾದಿತ ಲಾಡ್ಲೆ ಮಶಾಕ್ ದರ್ಗಾ ಗಲಭೆ ಪ್ರಕರಣಕ್ಕೆ ಸಂಬಂಧಿಸಿದಂತೆ ದಾಖಲಾಗಿದ್ದ ಕ್ರಿಮಿನಲ್ ಮೊಕದ್ದಮೆಗಳನ್ನು ಹಿಂಪಡೆಯಲು ಕರ್ನಾಟಕ ಸರ್ಕಾರ ಅಧಿಕೃತವಾಗಿ ಸಚಿವ ಸಂಪುಟ ಸಭೆಯಲ್ಲಿ ಒಪ್ಪಿಗೆ ನೀಡಿದೆ.

ಗುರುವಾರ (ಮೇ 21) ನಡೆದ ಸಚಿವ ಸಂಪುಟ ಸಭೆಯಲ್ಲಿ ಕಲಬುರಗಿಯ ಆಳಂದದ ಲಾಡ್ಲೆ ಮಶಾಕ್ ದರ್ಗಾ ಗಲಾಟೆ ಕೇಸ್ ವಾಪಸ್ ಪಡೆದಿದೆ. ಇದೇ ವಿಚಾರಕ್ಕೆ ಇತ್ತ ಬಿಜೆಪಿ ತೀವ್ರ ಆಕ್ರೋಶ ವ್ಯಕ್ತಪಡಿಸಿದೆ.

ವಿಧಾನಸಭಾ ಸಭಾಧ್ಯಕ್ಷರಾದ ಯು.ಟಿ. ಖಾದರ್ ಅವರ ಲಿಖಿತ ಶಿಫಾರಸಿನ ಮೇರೆಗೆ ಸರ್ಕಾರ ಈ ನಿರ್ಧಾರ ಕೈಗೊಂಡಿದ್ದು, ಇದು ರಾಜ್ಯ ರಾಜಕಾರಣದಲ್ಲಿ ತೀವ್ರ ಸಂಚಲನ ಮೂಡಿಸಿದೆ.

2022ರ ಮಹಾಶಿವರಾತ್ರಿಯಂದು ದರ್ಗಾ ಆವರಣದಲ್ಲಿರುವ ರಾಘವ ಚೈತನ್ಯ ಶಿವಲಿಂಗದ ಪೂಜೆ ವೇಳೆ ಭಾರಿ ಕೋಮು ಗಲಭೆ ನಡೆದಿತ್ತು. ಈ ವೇಳೆ ಕಲ್ಲು ತೂರಾಟ, ಪೊಲೀಸರ ಮೇಲಿನ ಹಲ್ಲೆ ಮತ್ತು ಸಾರ್ವಜನಿಕ ಆಸ್ತಿ ಪಾಸ್ತಿ ಹಾನಿಯಾಗಿತ್ತು. ಈ ಸಂಬಂಧ ದಾಖಲಾಗಿದ್ದ ಒಟ್ಟು 13 ಪ್ರಕರಣಗಳನ್ನು ರಾಜ್ಯ ಸರ್ಕಾರ ಹಿಂಪಡೆದಿದೆ.

ಇದರಂತೆ ಗಲಭೆಯಲ್ಲಿ ಭಾಗಿಯಾಗಿದ್ದವರ ಮೇಲಿನ ಕೇಸ್‌ಗಳನ್ನು ಕೈಬಿಟ್ಟಿರುವುದಕ್ಕೆ ಹಿಂದೂ ಸಂಘಟನೆಗಳು ಹಾಗೂ ವಿರೋಧ ಪಕ್ಷಗಳು ತೀವ್ರ ಆಕ್ರೋಶ ಹೊರಹಾಕಿದ್ದು, ಸರ್ಕಾರದ ವಿರುದ್ಧ ಪ್ರತಿಭಟನೆಯ ಎಚ್ಚರಿಕೆ ನೀಡಿವೆ.

ಇದಲ್ಲದೆ, ಕನ್ನಡ ಪರ ಹೋರಾಟಗಾರರ ವಿರುದ್ಧದವು ಸೇರಿದಂತೆ 52 ಕ್ರಿಮಿನಲ್ ಪ್ರಕರಣ ಹಿಂಪಡೆಯಲು ಸಚಿವ ಸಂಪುಟ ತೀರ್ಮಾನಿಸಿದೆ.

ಕನ್ನಡ ಹೋರಾಟಗಾರ ವಾಟಾಳ್ ನಾಗರಾಜ್ ವಿರುದ್ಧದ 10 ಪ್ರಕರಣಗಳು, ಕಾವೇರಿ ಹೋರಾಟಗಾರರ ವಿರುದ್ಧದ ಪ್ರಕರಣಗಳು, ಕನ್ನಡ ಪರ ಹೋರಾಟ, ಕಳಸಾ–ಬಂಡೂರಿ ಯೋಜನೆ ಹೋರಾಟಕ್ಕೆ ಸಂಬಂಧಿಸಿದ ಪ್ರಕರಣಗಳು ಸೇರಿದಂತೆ ರೈತರು ಹಾಗೂ ದಲಿತ ಹೋರಾಟಗಾರರ ವಿರುದ್ಧ ದಾಖಲಾಗಿದ್ದ ಪ್ರಕರಣಗಳನ್ನೂ ಹಿಂಪಡೆಯಲು ಸರ್ಕಾರ ನಿರ್ಧಾರ ಕೈಗೊಂಡಿದೆ ಎಂದು ತಿಳಿದುಬಂದಿದೆ.

ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ರಾಜ್ಯ ಸರ್ಕಾರ ಒಂದು ಕಡೆ ಹಿಂದೂ ಕಾರ್ಯಕರ್ತರನ್ನ ಗುರಿ ಮಾಡಿ ಸುಳ್ಳು ಮೊಕದ್ದಮೆ ದಾಖಲಿಸುವ ಜೊತೆಗೆ ರೌಡಿಶೀಟ್ ತೆರೆದು ಪೊಲೀಸ್ ಇಲಾಖೆಯ ಮೂಲಕ ಕಿರುಕುಳ ಕೊಡುವ ಕೆಲಸ ಮಾಡುತ್ತಿದೆ. ಮತ್ತೊಂದು ಕಡೆ ಮುಸ್ಲಿಮರ ಮೇಲಿನ ಕ್ರಿಮಿನಲ್ ಕೇಸ್ ವಾಪಸ್ ಪಡೆಯುವ ಕೆಲಸ ಮಾಡುತ್ತಿದೆ.

ಕೆಲವು ಬೆಂಕಿ ಹಚ್ಚಿದ ಪ್ರಕರಣ, ಆಸ್ತಿ–ಪಾಸ್ತಿ ನಷ್ಟ ಮಾಡಿದ ಪ್ರಕರಣ ಸೇರಿದಂತೆ ಗಂಭೀರ ಕೇಸ್ ವಾಪಸ್ ಪಡೆದುಕೊಂಡು ನಾವು ಕ್ರಿಮಿನಲ್ ಪರ ಎಂಬ ಕೆಟ್ಟ ಸಂದೇಶ ಕೂಡಲು ಸರ್ಕಾರ ಹೊರಟಿದೆ ಎಂದು ಆರೋಪಿಸಿದ್ದಾರೆ.

ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರು ಪ್ರತಿಕ್ರಿಯೆ ನೀಡಿ, ಕನ್ನಡ ಸಂಘಟನೆಗಳು, ರೈತರ ಮೇಲೆ ಇದ್ದ ಕೇಸ್ ಬಗ್ಗೆ ಸಂಪುಟ ಉಪ ಸಮಿತಿ ರಾಜ್ಯ ಸರ್ಕಾರ ಶಿಫಾರಸು ಮಾಡಿತ್ತು. ಕಾನೂನಾತ್ಮಕವಾಗಿ ಕೇಸ್ ಹಿಂಪಡೆಯಲು ತೀರ್ಮಾನ ಆಗಿದೆ ಹೇಳಿದ್ದಾರೆ. ಲಾಡ್ಲೆ ಮಶಾಕ್ ದರ್ಗಾ ವಿವಾದಕ್ಕೆ ಸಂಬಂಧಿಸಿದ ಪ್ರಕರಣ ಹಿಂಪಡೆಯುವ ಕುರಿತ ಪ್ರಶ್ನೆಗೆ ಉತ್ತರಿಸಿ, ಅದರ ಬಗ್ಗೆ ಸಂಕ್ಷಿಪ್ತವಾಗಿ ಹೇಳಲು ಹೋಗಲ್ಲ. ಎಲ್ಲವೂ ಚರ್ಚೆ ಮಾಡಿಯೇ ತೀರ್ಮಾನ ಮಾಡಲಾಗಿದೆ. ಇದು ಏಕಾಏಕಿ ತೀರ್ಮಾನವಲ್ಲ ಎಂದು ತಿಳಿಸಿದ್ದಾರೆ.

## ಎಸ್‌ಐಆರ್‌ಗೆ ಆಕ್ಷೇಪ

ಬೆಂಗಳೂರು: ರಾಜ್ಯದ ಯಾವುದೇ ನಾಗರಿಕನ ಮತದಾನದ ಹಕ್ಕು ಅನಾವಶ್ಯಕವಾಗಿ ಕಸಿದುಕೊಳ್ಳುವಂತಹ ಪರಿಸ್ಥಿತಿ ಉಂಟಾದರೆ, ಅಂತಹ ಸಂದರ್ಭಗಳಲ್ಲಿ ನಾಗರಿಕರ ಹಕ್ಕುಗಳನ್ನು ರಕ್ಷಿಸಲು ಸರ್ಕಾರ ಸರ್ವಪ್ರಯತ್ನಗಳನ್ನು ಕೈಗೊಳ್ಳಲಿದೆ ಎಂದು ಕಾನೂನು ಮತ್ತು ಪ್ರವಾಸೋದ್ಯಮ ಸಚಿವ ಹೆಚ್.ಕೆ. ಪಾಟೀಲ್ ತಿಳಿಸಿದ್ದಾರೆ.

ವಿಧಾನಸೌಧದಲ್ಲಿ ನಡೆದ ಸಚಿವ ಸಂಪುಟ ಸಭೆಯ ನಂತರ ಮಾತನಾಡಿದ ಅವರು, ವಿಶೇಷ ತೀವ್ರ ಪರಿಷ್ಕರಣೆ (ಎಸ್.ಐ.ಆರ್.) ಪ್ರಕ್ರಿಯೆ ಕುರಿತು ಸಂಪುಟದಲ್ಲಿ ಸುದೀರ್ಘ ಚರ್ಚೆ ನಡೆದಿದೆ ಎಂದು ಹೇಳಿದರು. ಪಶ್ಚಿಮ ಬಂಗಾಳ ಸೇರಿದಂತೆ ಕೆಲ ರಾಜ್ಯಗಳಲ್ಲಿ ಈ ಪ್ರಕ್ರಿಯೆಯಿಂದ ಲಕ್ಷಾಂತರ ಜನರ ಮತದಾರ ಹಕ್ಕುಗಳ ಮೇಲೆ ಪರಿಣಾಮ ಬಿದ್ದಿರುವ ಉದಾಹರಣೆಗಳನ್ನು ಉಲ್ಲೇಖಿಸಲಾಗಿದ್ದು, ಈ ಕುರಿತು ಗಂಭೀರ ಆಕ್ಷೇಪಗಳು ವ್ಯಕ್ತವಾಗಿವೆ ಎಂದರು.

ಈ ಹಿನ್ನೆಲೆಯಲ್ಲಿ ಎಸ್.ಐ.ಆರ್. ಪ್ರಕ್ರಿಯೆಯ ಪಾರದರ್ಶಕತೆ, ಅಂತಿಮ ಮತದಾರ ಪಟ್ಟಿ ಹಾಗೂ ಅದರ ಪರಿಣಾಮಗಳ ಕುರಿತು ಮತ್ತಷ್ಟು ವಿವರವಾದ ಚರ್ಚೆ ಅಗತ್ಯವಿದ್ದು, ಅಗತ್ಯವಿದ್ದರೆ ಈ ವಿಷಯವನ್ನು ಸರ್ವೋಚ್ಚ ನ್ಯಾಯಾಲಯದ ಮೆಟ್ಟಿಲೇರಿಸುವ ಬಗ್ಗೆಯೂ ಚಿಂತನೆ ನಡೆಸಲಾಗಿದೆ ಎಂದು ಅವರು ತಿಳಿಸಿದರು. ಶೀಘ್ರದಲ್ಲೇ ಈ ಕುರಿತು ಅಂತಿಮ ನಿರ್ಣಯ ಕೈಗೊಳ್ಳಲಾಗುವುದು ಎಂದು ಹೇಳಿದರು. ಇದೇ ವೇಳೆ 21–05–2026ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಹಲವು ಮಹತ್ವದ ನಿರ್ಣಯಗಳನ್ನು ಕೈಗೊಳ್ಳಲಾಗಿದೆ.

ಎನ್.ಜಿ.ಇ.ಎಫ್. (ಹುಬ್ಬಳ್ಳಿ) ಲಿಮಿಟೆಡ್ ಸಂಸ್ಥೆಗೆ ನೀಡಿದ್ದ ದುಡಿಯುವ ಬಂಡವಾಳ ಸಾಲ ರೂ.2 ಕೋಟಿ ಹಾಗೂ ಅದರ ಮೇಲಿನ ಬಡ್ಡಿ ರೂ.4 ಕೋಟಿ ಸೇರಿ ಒಟ್ಟು ರೂ.6 ಕೋಟಿ ಹಾಗೂ ರೂ.10 ಕೋಟಿ ಬಡ್ಡಿರಹಿತ ಸಾಲವನ್ನು ಈಕ್ವಿಟಿಯಾಗಿ ಪರಿವರ್ತಿಸಲು ಸಂಪುಟ ಒಪ್ಪಿಗೆ ನೀಡಿದೆ. ಯಾದಗಿರಿ ಜಿಲ್ಲೆಯ ಶಹಾಪುರ ಹಾಗೂ ರಾಯಚೂರು ಜಿಲ್ಲೆಯ ದೇವದುರ್ಗದಲ್ಲಿ ತಲಾ ಐವತ್ತು ಹಾಸಿಗೆಗಳ ತಾಯಿ ಮತ್ತು ಮಕ್ಕಳ ಆಸ್ಪತ್ರೆ ನಿರ್ಮಾಣಕ್ಕೆ ಒಟ್ಟಾರೆ ರೂ.ಮೂವತ್ತೆಂಟು ಕೋಟಿ ಅಂದಾಜು ವೆಚ್ಚಕ್ಕೆ ಅನುಮೋದನೆ ನೀಡಲಾಗಿದೆ.

ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ನಗರ ಸಮುದಾಯ ಆರೋಗ್ಯ ಕೇಂದ್ರಗಳು ಹಾಗೂ ನಮ್ಮ ಕ್ಲಿನಿಕ್‌ಗಳಿಗೆ ಅಗತ್ಯವಿರುವ ಪ್ರಯೋಗಾಲಯ ಉಪಭೋಗ್ಯ ಸಾಮಗ್ರಿಗಳು ಮತ್ತು ವಿವಿಧ ಉಪಕರಣಗಳನ್ನು ರೂ. ಇಪ್ಪತ್ತೆರಡು ಕೋಟಿ ಅಂದಾಜು ವೆಚ್ಚದಲ್ಲಿ ಖರೀದಿಸಲು ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ.

ಬೆಂಗಳೂರು ಕೇಂದ್ರ, ಧಾರವಾಡ, ಬೆಳಗಾವಿ ಮತ್ತು ಬಳ್ಳಾರಿ ಕೇಂದ್ರ ಕಾರಾಗೃಹಗಳ ಆವರಣದಲ್ಲಿ ಕ್ರಮವಾಗಿ ಭಾರತೀಯ ತೈಲ ನಿಗಮ, ಹಿಂದೂಸ್ತಾನ್ ಪೆಟ್ರೋಲಿಯಂ ನಿಗಮ ಮತ್ತು ಭಾರತ್ ಪೆಟ್ರೋಲಿಯಂ ನಿಗಮ ಸಂಸ್ಥೆಗಳ ಮೂಲಕ ಡೀಲರ್‌ಶಿಪ್ ಮಾದರಿಯಲ್ಲಿ ಪೆಟ್ರೋಲ್ ಬಂಕ್ ಹಾಗೂ ಮಾರಾಟ ಮಳಿಗೆ ಸ್ಥಾಪನೆಗೆ ಸಂಪುಟ ಒಪ್ಪಿಗೆ ನೀಡಿದೆ. ಮಂಡ್ಯ ಜಿಲ್ಲೆಯ ಕೆ.ಆರ್. ಪೇಟೆ ತಾಲ್ಲೂಕಿನ ಮಾಕವಳ್ಳಿ ಗ್ರಾಮದ ನೂರು ಎಕರೆ ಜಮೀನನ್ನು ಸಂಬಂಧಿತ ಕಂಪನಿಗೆ ಕೆಲವು ಷರತ್ತುಗಳೊಂದಿಗೆ ಮಾರಾಟ ಮಾಡಲು ಅನುಮೋದನೆ ನೀಡಲಾಗಿದೆ.

ಮೂವತ್ತೆರಡು ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರಗಳಿಗೆ ಹೊಸ ಯಂತ್ರೋಪಕರಣಗಳ ಖರೀದಿಗೆ ತೊಂಬತ್ತು ಕೋಟಿ ವೆಚ್ಚಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಕನಕಪುರ ನಗರಸಭೆ ವ್ಯಾಪ್ತಿಯಲ್ಲಿ ಮಳೆ ನೀರು ಚರಂಡಿ ಕಾಮಗಾರಿಗಳಿಗೆ ಇಪ್ಪತ್ತು ಕೋಟಿ ವೆಚ್ಚಕ್ಕೆ ಅನುಮೋದನೆ ನೀಡಲಾಗಿದೆ. ಮೈಸೂರು ಅಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯ ಹದಿನೇಳು ದಶಮಲವ ಮೂವತ್ತೈದು ಎಕರೆ ಜಮೀನನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಹಸ್ತಾಂತರಿಸಲು ಸಂಪುಟ ಒಪ್ಪಿಗೆ ನೀಡಿದೆ. ಮೈಸೂರು ಜಿಲ್ಲೆ ನಂಜನಗೂಡು ತಾಲ್ಲೂಕಿನಲ್ಲಿ ಕಬಿನಿ ನದಿಗೆ ಅಡ್ಡಲಾಗಿ ವಿಯರ್ ನಿರ್ಮಾಣಕ್ಕೆ ಹದಿನೈದು ಕೋಟಿ ವೆಚ್ಚಕ್ಕೆ ಅನುಮೋದನೆ ನೀಡಲಾಗಿದೆ.

ನಾಗಮಂಗಲ ತಾಲ್ಲೂಕಿನಲ್ಲಿ ದಾಸನಕೆರೆ ಅಭಿವೃದ್ಧಿ ಹಾಗೂ ವಿದ್ಯುದ್ದೀಕರಣಕ್ಕೆ ಇಪ್ಪತ್ತೈದು ಕೋಟಿ ವೆಚ್ಚಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಕೇಂದ್ರ ಆಡಳಿತ ನ್ಯಾಯಮಂಡಳಿ ಆದೇಶದ ಹಿನ್ನೆಲೆಯಲ್ಲಿ ಮೂವರು ಕೆ.ಎ.ಎಸ್. ಅಧಿಕಾರಿಗಳನ್ನು ಐ.ಎ.ಎಸ್. ವೃಂದಕ್ಕೆ ಮುಂಬಡ್ತಿಗೆ ಪರಿಗಣಿಸುವ ಕುರಿತು ಕಾನೂನು ಇಲಾಖೆ ಪರಿಶೀಲನೆ ನಂತರ ಸಂಪುಟಕ್ಕೆ ಮಂಡಿಸಲು ನಿರ್ಣಯಿಸಲಾಗಿದೆ. ಕಾರವಾರ ಬಂದರಿನಲ್ಲಿ ತೈಲ ಸೋರಿಕೆ ತುರ್ತು ನಿರ್ವಹಣೆಗೆ ಹದಿಮೂರು ಕೋಟಿ ವೆಚ್ಚದಲ್ಲಿ ಉಪಕರಣಗಳ ಖರೀದಿಗೆ ಒಪ್ಪಿಗೆ ನೀಡಲಾಗಿದೆ.

# ಜೆಡಿಎಸ್ ಮುಖಂಡನಿಗೆ ಹನಿಟ್ರ್ಯಾಪ್‌ಗೆ ಯತ್ನ...?

ತುಮಕೂರು ನಗರದ ಜೆಡಿಎಸ್ ಕಚೇರಿಯಲ್ಲಿ ತುರ್ತು ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಜೆಡಿಎಸ್ ಮುಖಂಡ ಸಿ.ಎಸ್. ಪುರ ನಾಗರಾಜು, 'ಮುಂದಿನ ಚುನಾವಣೆಯನ್ನು ದೃಷ್ಟಿಯಲ್ಲಿಟ್ಟುಕೊಂಡು ನನ್ನನ್ನು ಟ್ರಾಪ್ ಮಾಡಲು ವ್ಯವಸ್ಥಿತ ಸಂಚು ರೂಪಿಸಲಾಗಿದೆ. ನನ್ನ ವೈಯಕ್ತಿಕ ಚಲನವಲನಗಳ ಮೇಲೆ ಗೂಢಾಚಾರಿಕೆ ನಡೆಸಲಾಗುತ್ತಿದೆ' ಎಂದು ಆರೋಪಿಸಿದರು. ಚಾಲಕ ಸಂತೋಷ್ ಹಾಗೂ ಆಪ್ತ ಸಹಾಯಕ ಚಂದು ಅವರನ್ನು ಹಣದ ಆಮಿಷವೊಡ್ಡಿ ಸಂಪರ್ಕ ಮಾಡಲಾಗುತ್ತಿದೆ ಎಂದು ದೂರಿದ್ದಾರೆ.

ತುಮಕೂರು: ಜಿಲ್ಲಾ ರಾಜಕೀಯದಲ್ಲಿ ಇದೀಗ ಹನಿಟ್ರ್ಯಾಪ್ ಆರೋಪದ ಮಾತು ಹೊಸ ಸಂಚಲನ ಸೃಷ್ಟಿಸಿದೆ. ಗುಬ್ಬಿ ಕಾಂಗ್ರೆಸ್ ಶಾಸಕ ಎಸ್‌ಆರ್ ಶ್ರೀನಿವಾಸ್ ಹಾಗೂ ಪುತ್ರ ದುಷ್ಯಂತ್ ವಿರುದ್ಧ ಜೆಡಿಎಸ್ ಮುಖಂಡ ನಾಗರಾಜು ಗಂಭೀರ ಆರೋಪ ಮಾಡಿದ್ದಾರೆ.

ತನ್ನ ಚಲನವಲನದ ಮೇಲೆ ಗೂಢಚಾರಿಕೆ ನಡೆಸಲಾಗುತ್ತಿದೆ ಎಂದು ಆರೋಪಿಸಿರುವ ಅವರು ಈ ಸಂಬಂಧ ಕೆಲ ಆಡಿಯೋ ಬಿಡುಗಡೆ ಕೂಡ ಮಾಡಿದ್ದಾರೆ. ಸದ್ಯ ಈ ವಿಚಾರ ಜಿಲ್ಲೆಯ ರಾಜಕೀಯದಲ್ಲಿ ಹೊಸ ಚರ್ಚೆಗೆ ಕಾರಣವಾಗಿದೆ.

ತುಮಕೂರು ನಗರದ ಜೆಡಿಎಸ್ ಕಚೇರಿಯಲ್ಲಿ ತುರ್ತು ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಜೆಡಿಎಸ್ ಮುಖಂಡ ಸಿ.ಎಸ್. ಪುರ ನಾಗರಾಜು, 'ಮುಂದಿನ ಚುನಾವಣೆಯನ್ನು ದೃಷ್ಟಿಯಲ್ಲಿಟ್ಟುಕೊಂಡು ನನ್ನನ್ನು ಟ್ರಾಪ್ ಮಾಡಲು ವ್ಯವಸ್ಥಿತ ಸಂಚು ರೂಪಿಸಲಾಗಿದೆ. ನನ್ನ ವೈಯಕ್ತಿಕ ಚಲನವಲನಗಳ ಮೇಲೆ ಗೂಢಾಚಾರಿಕೆ ನಡೆಸಲಾಗುತ್ತಿದೆ' ಎಂದು ಆರೋಪಿಸಿದರು. ಚಾಲಕ ಸಂತೋಷ್ ಹಾಗೂ ಆಪ್ತ ಸಹಾಯಕ ಚಂದು ಅವರನ್ನು ಹಣದ ಆಮಿಷವೊಡ್ಡಿ ಸಂಪರ್ಕ ಮಾಡಲಾಗುತ್ತಿದೆ ಎಂದು ದೂರಿದ್ದಾರೆ.

ನನ್ನ ಚಲನವಲನದ ಮೇಲೆ ಗೂಢಚಾರಿಕೆ ನಡೆಸಲಾಗುತ್ತಿದೆ ಎಂದು ನಾಗರಾಜು ಆರೋಪಿಸಿದ್ದು, ಬೆಂಗಳೂರಿನಲ್ಲಿರುವ ಶಾಸಕ ಎಸ್.ಆರ್. ಶ್ರೀನಿವಾಸ್ ಅವರ ಫ್ಲ್ಯಾಟ್‌ಗೆ ನನ್ನ ಚಾಲಕನನ್ನು ಕರೆಸಿಕೊಂಡು ಮಾಹಿತಿ ಕಲೆಹಾಕುವ ಪ್ರಯತ್ನ ನಡೆದಿದೆ. 'ನನಗೆ ಎಲ್ಲಾದರೂ ಅಕ್ರಮ ಸಂಬಂಧ ಇದೆಯಾ? ಎಂದು ಚಾಲಕನನ್ನು ವಿಚಾರಿಸಿದ್ದಾರೆ. ನನ್ನ ವ್ಯವಹಾರಗಳನ್ನು ಕಟ್ಟಿಹಾಕಿ, ಬ್ಯುಸಿನೆಸ್ ಲಾಸ್ ಮಾಡಿಸಿ ನನ್ನನ್ನು ಬೀದಿಗೆ ನಿಲ್ಲಿಸಬೇಕೆಂಬುದು ಇವರ ಕುತಂತ್ರ' ಎಂದು ನಾಗರಾಜು ವಾಗ್ದಾಳಿ ಮಾಡಿದ್ದಾರೆ.

ಇದೇ ವೇಳೆ ಶಾಸಕರ ಪುತ್ರ ದುಷ್ಯಂತ್‌ರದ್ದು ಎನ್ನಲಾದ ಆಡಿಯೋ ಒಂದನ್ನು ನಾಗರಾಜು ಮಾಧ್ಯಮಗಳಿಗೆ ಬಿಡುಗಡೆ ಮಾಡಿದರು. 'ನನಗೇನಾದರೂ ಆದರೆ ಅದಕ್ಕೆ ಶಾಸಕ ಶ್ರೀನಿವಾಸ್ ಅವರೇ ನೇರ ಹೊಣೆ' ಎಂದಿದ್ದಾರೆ.

ಇನ್ನು ಇದೇ ವೇಳೆ ಜೆಡಿಎಸ್ ಮುಖಂಡ ಹೊನ್ನಗಿರಿಗೌಡ ಸಹ ಕಾಂಗ್ರೆಸ್ ನಾಯಕರ ವಿರುದ್ಧ ವಾಗ್ದಾಳಿ ಮಾಡಿದ್ದಾರೆ. 'ಗೆದ್ದಿದ್ದಾರೆಂದು ಎದುರಾಳಿ ಅಭ್ಯರ್ಥಿಗೆ ತೊಂದರೆ ಕೊಡುವುದು ಸರಿಯಲ್ಲ. ಹನಿಟ್ರ್ಯಾಪ್ ರಾಜಕಾರಣ ರಾಜ್ಯದಲ್ಲಿ ಅಪಾಯಕಾರಿ ಬೆಳವಣಿಗೆ' ಎಂದು ಆತಂಕ ವ್ಯಕ್ತಪಡಿಸಿದ್ದಾರೆ. ಜೊತೆಗೆ ಪ್ರಜ್ವಲ್ ರೇವಣ್ಣ ಹಾಗೂ ರಮೇಶ್ ಜಾರಕಿಹೊಳಿ ಪ್ರಕರಣಗಳನ್ನೂ ಉಲ್ಲೇಖಿಸಿದ ಹೊನ್ನಗಿರಿಗೌಡ, 'ಕೀಳು ಮಟ್ಟದ ರಾಜಕಾರಣ ನಿಲ್ಲಬೇಕು' ಎಂದು ಆಗ್ರಹಿಸಿದರು.

ಸದ್ಯ ಗುಬ್ಬಿಯ ಜೆಡಿಎಸ್ ಮುಖಂಡ ಸಿಎಸ್ ಪುರ ನಾಗರಾಜು ಆರೋಪ ಬೆನ್ನಲ್ಲೇ ತುಮಕೂರಿನ ರಾಜಕೀಯದಲ್ಲಿ ಹೊಸ ಚರ್ಚೆ ಆರಂಭವಾಗಿದೆ. ಇನ್ನು ನಾಗರಾಜು ಮಾಡಿದ ಈ ಆರೋಪಗಳಿಗೆ ಇನ್ನಷ್ಟೇ ಶಾಸಕ ಶ್ರೀನಿವಾಸ್ ಪ್ರತಿಕ್ರಿಯೆ ನೀಡಬೇಕಾಗಿದ್ದು, ಈ ಬೆಳವಣಿಗೆ ಮುಂದೆ ಯಾವ ತಿರುವು ಪಡೆದುಕೊಳ್ಳುತ್ತೆ ಕಾದು ನೋಡಬೇಕಿದೆ.

ಭಾರತ ಸಾರಥಿ
23/05/2026
BHARATHA SARATHI KANNADA DAILY NEWS PAPER
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com



ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಬೆಂಗಳೂರಿನಲ್ಲಿ ಭೇಟಿ ಮಾಡಿದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು, ಬೀದರ್ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾದ ಆನಂದ್ ದೇವಪ್ಪ ಹಾಗೂ ಸಂಘದ ಪದಾಧಿಕಾರಿಗಳು ಬೀದರನಲ್ಲಿ ನಡೆದ ರಾಜ್ಯ ಸಮ್ಮೇಳನದ ಗೌರವವನ್ನು ಸಮರ್ಪಿಸಿದರು. ಸಮ್ಮೇಳನಕ್ಕೆ ಅನಿವಾರ್ಯ ಕಾರಣಗಳಿಂದ ಬರಲಾಗಲಿಲ್ಲ ಎಂದ ಅವರು, ಸಮ್ಮೇಳನ ಯಶಸ್ವಿಯಾಗಿ ನಡೆದಿರುವುದಕ್ಕೆ ಅಭಿನಂದನೆ ಸಲ್ಲಿಸಿದರು.

# ಸೇಲ್ಸ್‌ಫೋರ್ಸ್ ನಡುವೆ ಮಹತ್ವದ ತಾಂತ್ರಿಕ ಸಹಕಾರ ಜಾರಿ

ಬೆಂಗಳೂರು

ಟಾಟಾ ಸನ್ಸ್‌ನ ಪ್ರಮುಖ ಅಂಗಸಂಸ್ಥೆಯಾದ ಟಾಟಾ ರಿಯಾಲ್ಟಿ ಅಂಡ್ ಇನ್ಫ್ರಾಸ್ಟ್ರಕ್ಚರ್ ಲಿಮಿಟೆಡ್ (ಟಿಆರ್‌ಐಎಲ್) ಮತ್ತು ಜಾಗತಿಕ ಮಟ್ಟದ ಪ್ರಮುಖ ಗ್ರಾಹಕ ಸಂಬಂಧ ನಿರ್ವಹಣಾ ತಂತ್ರಜ್ಞಾನ ಸಂಸ್ಥೆಯಾದ ಸೇಲ್ಸ್‌ಫೋರ್ಸ್ ನಡುವೆ ಮಹತ್ವದ ತಾಂತ್ರಿಕ ಸಹಕಾರ ಜಾರಿಗೊಂಡಿದ್ದು, ಟಿಆರ್‌ಐಎಲ್‌ನ ಎಲ್ಲಾ ವಿಭಾಗಗಳಲ್ಲಿ ಗ್ರಾಹಕ ಸಂಪರ್ಕವನ್ನು ಮತ್ತಷ್ಟು ಪರಿಣಾಮಕಾರಿಯಾಗಿ ರೂಪಿಸಲು ಸೇಲ್ಸ್‌ಫೋರ್ಸ್‌ನ 'ಏಜೆಂಟ್‌ಫೋರ್ಸ್' ವೇದಿಕೆಯನ್ನು ಯಶಸ್ವಿಯಾಗಿ ಅಳವಡಿಸಲಾಗಿದೆ ಎಂದು ಸಂಸ್ಥೆಗಳು ಪ್ರಕಟಿಸಿವೆ.

ಈ ಹೊಸ ವ್ಯವಸ್ಥೆಯ ಪರಿಣಾಮವಾಗಿ ಗ್ರಾಹಕರ ಪ್ರಶ್ನೆಗಳಿಗೆ ನೀಡುವ ಪ್ರತಿಕ್ರಿಯಾ ವೇಗದಲ್ಲಿ ಗಮನಾರ್ಹ ಸುಧಾರಣೆ ಕಂಡುಬಂದಿದೆ. ಹಿಂದೆ ಹಲವು ದಿನಗಳನ್ನು ತೆಗೆದುಕೊಳ್ಳುತ್ತಿದ್ದ ಪ್ರಾಥಮಿಕ ಪ್ರತಿಕ್ರಿಯೆ ಈಗ ಸರಾಸರಿ ಕೇವಲ ಎಂಟು ಗಂಟೆಗಳ ಒಳಗೆ ನೀಡಲಾಗುತ್ತಿದೆ ಎಂದು ತಿಳಿಸಲಾಗಿದೆ. ಇದರೊಂದಿಗೆ ಏಕಕಾಲದಲ್ಲಿ




ಸಾವಿರಾರು ಗ್ರಾಹಕರನ್ನು ಸಮರ್ಥವಾಗಿ ನಿರ್ವಹಿಸುವ ಸಾಮರ್ಥ್ಯವೂ ಸಂಸ್ಥೆಗೆ ಲಭ್ಯವಾಗಿದೆ.

ವ್ಯವಹಾರಿಕ ಫಲಿತಾಂಶಗಳಲ್ಲಿಯೂ ಈ ತಂತ್ರಜ್ಞಾನ ಮಹತ್ವದ ಬದಲಾವಣೆ ತಂದಿದೆ. ಪರಿವರ್ತನಾ ದರಗಳಲ್ಲಿ ಶೇಕಡಾ ಹತ್ತು ಹೆಚ್ಚಳ, ಲೀಡ್‌ಗಳ ಗುಣಮಟ್ಟ ನಿರ್ಣಯದಲ್ಲಿ ಶೇಕಡಾ ಮತ್ತು ಸುಧಾರಣೆ ಹಾಗೂ ಕಳುಹಿಸಲಾದ ಇಮೇಲ್‌ಗಳನ್ನು ಓದುವ ಪ್ರಮಾಣದಲ್ಲಿ ಶೇಕಡಾ ಐವತ್ತು ರಿಂದ ಅರವತ್ತು ರಷ್ಟು ವೃದ್ಧಿ ಕಂಡುಬಂದಿದೆ ಎಂದು ಸಂಸ್ಥೆ ತಿಳಿಸಿದೆ. ಇದರಿಂದ ರಿಯಲ್ ಎಸ್ಟೇಟ್ ಕ್ಷೇತ್ರದಲ್ಲಿ ಕೃತಕ ಬುದ್ಧಿಮತ್ತೆ ಆಧಾರಿತ ವ್ಯವಸ್ಥೆಗಳು ಮತ್ತು ಸಂಯೋಜಿತ ಡೇಟಾ ಗ್ರಾಹಕ ಅನುಭವವನ್ನು ಹೇಗೆ ಸಂಪೂರ್ಣವಾಗಿ ಪರಿವರ್ತಿಸುತ್ತಿವೆ ಎಂಬುದು ಸ್ಪಷ್ಟವಾಗುತ್ತದೆ.

ಟಿಆರ್‌ಐಎಲ್ ಸಂಸ್ಥೆಯು 'ಡೇಟಾ 360' ವ್ಯವಸ್ಥೆಯ ಮೂಲಕ ಸಂಯೋಜಿತವಾಗಿ ಕಾರ್ಯನಿರ್ವಹಿಸುವ ಏಜೆಂಟ್‌ಫೋರ್ಸ್ ಮಾರುಕಟ್ಟೆ, ಮಾರಾಟ ಮತ್ತು ಸೇವಾ ತಂತ್ರಜ್ಞಾನಗಳನ್ನು ಅಳವಡಿಸಿಕೊಂಡಿದೆ.

ಇದರ ಮೂಲಕ ಗ್ರಾಹಕರು ಮೊದಲ ಬಾರಿಗೆ ವಿಚಾರಣೆ ಮಾಡುವ ಹಂತದಿಂದ ಹಿಡಿದು ಖರೀದಿ ನಂತರದ ಸೇವಾ ಹಂತದವರೆಗೆ ಅವರ ಸಂಪೂರ್ಣ ಪ್ರಯಾಣವನ್ನು ಒಂದೇ ವೇದಿಕೆಯಲ್ಲಿ ನೈಜ ಕಾಲದಲ್ಲಿ ವೀಕ್ಷಿಸಲು ಸಾಧ್ಯವಾಗುತ್ತಿದೆ.

ಈ ಸಂಯೋಜಿತ ವ್ಯವಸ್ಥೆಯಲ್ಲಿ ಕೃತಕ ಬುದ್ಧಿಮತ್ತೆ ಆಧಾರಿತ ಏಜೆಂಟ್‌ಗಳು ಹಾಗೂ ಮಾನವ ತಂಡಗಳು ಒಟ್ಟಾಗಿ ಕಾರ್ಯನಿರ್ವಹಿಸುತ್ತಿದ್ದು, ಗ್ರಾಹಕರ ಅಗತ್ಯಕ್ಕೆ ಅನುಗುಣವಾದ ವೈಯಕ್ತಿಕ ಸೇವೆಯನ್ನು ದೊಡ್ಡ ಪ್ರಮಾಣದಲ್ಲಿಯೂ ನಿರಂತರವಾಗಿ ಒದಗಿಸಲು ಸಾಧ್ಯವಾಗುತ್ತಿದೆ.

ವಾಟ್ಸಾಪ್, ಎಸ್‌ಎಂಎಸ್ ಮತ್ತು ಇಮೇಲ್ ಸೇರಿದಂತೆ ವಿವಿಧ ಸಂವಹನ ಮಾಧ್ಯಮಗಳ ಮೂಲಕ ದಿನದ ಇಪ್ಪತ್ತನಾಲ್ಕು ಗಂಟೆಗಳ ಕಾಲ ಲೀಡ್‌ಗಳ ಗುಣಮಟ್ಟ ಪರಿಶೀಲನೆ ನಡೆಯುತ್ತಿದೆ. ಜೊತೆಗೆ ಮಾರಾಟ ತಂಡಗಳಿಗೆ ತಕ್ಷಣದ ಸಲಹೆಗಳು ಮತ್ತು ಶಿಫಾರಸುಗಳು ಲಭ್ಯವಾಗುತ್ತಿವೆ.

ಸಂಕೀರ್ಣ ಸ್ವಭಾವದ ಗ್ರಾಹಕ ಪ್ರಶ್ನೆಗಳನ್ನು ಸ್ವಯಂಚಾಲಿತವಾಗಿ ಸಂಬಂಧಿತ ತಜ್ಞರಿಗೆ ವರ್ಗಾಯಿಸುವ ವ್ಯವಸ್ಥೆಯೂ ಇದರಲ್ಲಿ ಅಳವಡಿಸಲಾಗಿದೆ. ಸಂಸ್ಥೆಯ ನಾಯಕತ್ವಕ್ಕೆ ಗ್ರಾಹಕ ಸಂಭಾಷಣೆಗಳ ಸಂಪೂರ್ಣ ಚಟುವಟಿಕೆಗಳನ್ನು ನೈಜ ಕಾಲದಲ್ಲಿ ಗಮನಿಸಲು ಸಹಾಯ ಮಾಡುವ ಲೈವ್ ಡ್ಯಾಶ್‌ಬೋರ್ಡ್ ಸೌಲಭ್ಯವೂ ಲಭ್ಯವಾಗಿದೆ.

ಒಟ್ಟಾರೆ, ಈ ತಾಂತ್ರಿಕ ಪರಿವರ್ತನೆ ಟಿಆರ್‌ಐಎಲ್ ಸಂಸ್ಥೆಯ ಗ್ರಾಹಕ ಸೇವಾ ಮಾದರಿಯಲ್ಲಿ ಹೊಸ ಹಂತವನ್ನು ಆರಂಭಿಸಿದ್ದು, ರಿಯಲ್ ಎಸ್ಟೇಟ್ ಕ್ಷೇತ್ರದಲ್ಲಿ ಕೃತಕ ಬುದ್ಧಿಮತ್ತೆಯ ಪಾತ್ರವನ್ನು ಮತ್ತಷ್ಟು ಗಟ್ಟಿಗೊಳಿಸಿದೆ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

# ಗೃಹಲಕ್ಷ್ಮಿ: ಸರ್ಕಾರಕ್ಕೆ ನೋಟೀಸ್

ಬೆಂಗಳೂರು

ರಾಜ್ಯ ಕಾಂಗ್ರೆಸ್ ಸರ್ಕಾರದ ಮಹತ್ವಾಕಾಂಕ್ಷಿ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಗೃಹಲಕ್ಷ್ಮಿ ಯೋಜನೆಯ ಮಾಸಿಕ ಧನಸಹಾಯ ಸರಿಯಾಗಿ ತಲುಪುತ್ತಿಲ್ಲ ಎಂದು ಬೇಸತ್ತ ಬೆಂಗಳೂರಿನ ಇಬ್ಬರು ಮಹಿಳೆಯರು ಇದೀಗ ನೇರವಾಗಿ ಹೈಕೋರ್ಟ್ ಮೆಟ್ಟಿಲೇರಿದ್ದಾರೆ.

ಯೋಜನೆ ಅಡಿ ಬರಬೇಕಿರುವ ಬಾಕಿ ಹಣವನ್ನು ತಕ್ಷಣವೇ ಬಿಡುಗಡೆ ಮಾಡಲು ಸರ್ಕಾರಕ್ಕೆ ನಿರ್ದೇಶನ ನೀಡಬೇಕು ಎಂದು ಕೋರಿ ಮಹಿಳೆಯರು ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ್ದು, ಹೈಕೋರ್ಟ್ ಈ ಕುರಿತು ರಾಜ್ಯ ಸರ್ಕಾರಕ್ಕೆ ನೋಟಿಸ್ ಜಾರಿ ಮಾಡಿದೆ. ಬೆಂಗಳೂರಿನ ಬಸವೇಶ್ವರ ನಗರದ ನಿವಾಸಿ ಆರ್. ಗಂಗಾ ಹಾಗೂ ನಂದಿನಿ ಲೇಔಟ್ ನಿವಾಸಿ ಜಿ.ಡಿ. ಪವಿತ್ರಾ ಅವರು ಜಂಟಿಯಾಗಿ ಈ ಕಾನೂನು ಹೋರಾಟಕ್ಕೆ ಮುಂದಾದ ಮಹಿಳೆಯರಾಗಿದ್ದಾರೆ.

ಅರ್ಜಿದಾರರ ಪರವಾಗಿ ವಾದ ಮಂಡಿಸಿದ ವಕೀಲರು, ಸರ್ಕಾರದ ಗ್ಯಾರಂಟಿ ನಿರ್ವಹಣೆಯ ವೈಫಲ್ಯವನ್ನು ನ್ಯಾಯಪೀಠದ ಮುಂದೆ ತಂದಿಟ್ಟರು.

ಅರ್ಜಿದಾರರಿಗೆ ಕಳೆದ 2025ರ ಫೆಬ್ರವರಿ ತಿಂಗಳಿನಿಂದ ಇಂದಿನವರೆಗೂ (ಮೇ 2026) ಗೃಹಲಕ್ಷ್ಮಿ ಯೋಜನೆಯ ಯಾವುದೇ ಕಂತಿನ ಹಣ ಜಮೆಯಾಗಿಲ್ಲ. ಕೇವಲ ಈ ಇಬ್ಬರು ಮಹಿಳೆಯರಷ್ಟೇ ಅಲ್ಲದೆ, ರಾಜ್ಯದಾದ್ಯಂತ ಲಕ್ಷಾಂತರ ಅರ್ಹ ಫಲಾನುಭವಿಗಳಿಗೆ ಕಳೆದ ಹಲವು ತಿಂಗಳುಗಳಿಂದ ಹಣ ತಲುಪಿಲ್ಲ.

# 'ಈಜೀಪುರ ಮೇಲ್ಸೇತುವೆ ಕಾಮಗಾರಿ ಪೂರ್ಣಗೊಳಿಸಿ'

ಬೆಂಗಳೂರು

ಹೆಚ್ಚುವರಿ ಸಿಬ್ಬಂದಿಗಳನ್ನು ಹಾಗೂ ಕಾರ್ಮಿಕರನ್ನು ನಿಯೋಜಿಸಿಕೊಂಡು ಅಂತಿಮ ಗಡುವಿನೊಳಗಾಗಿ ಈಜೀಪುರ ಮೇಲ್ಸೇತುವೆ ಕಾಮಗಾರಿಯನ್ನು ಪೂರ್ಣಗೊಳಿಸಲು ಮುಖ್ಯ ಆಯುಕ್ತರಾದ ಮಹೇಶ್ವರ್ ರಾವ್ ರವರು ಗುತ್ತಿಗೆದಾರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯ ಬೆಂಗಳೂರು ದಕ್ಷಿಣ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೈಗೆತ್ತಿಕೊಂಡಿರುವ ಈಜೀಪುರ ಮೇಲ್ಸೇತುವೆ ಕಾಮಗಾರಿಗೆ ಸಂಬಂಧಿಸಿದಂತೆ ಅಧಿಕಾರಿಗಳು ಹಾಗೂ ಗುತ್ತಿಗೆದಾರರ ಜೊತೆ ಇಂದು ನಡೆಸಿದ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಈಜೀಪುರ ಮೇಲ್ಸೇತುವೆಯನ್ನು ನಿಗದಿತ ಗುಡುವಿನೊಳಗಾಗಿ ಪೂರ್ಣಗೊಳಿಸಲು ಎಲ್ಲಾ ರೀತಿಯ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು. ಈ ಸಂಬಂಧ ಮಡಿವಾಳ ಕಡೆಯ ಸೈಡ್ ರ್‍ಯಾಂಪ್ ಕಾಮಗಾರಿ ನಡೆಸುವ ಸ್ಥಳದಲ್ಲಿ ಬೆಸ್ಕಾಂನ ಆರ್.ಎಂ.ಯು ಅನ್ನು ನಾಳೆಯೇ ಸ್ಥಳಾಂತರ ಮಾಡಬೇಕು. ಆ ಬಳಿಕ ಕೇಂದ್ರೀಯ ಸದನದ ಎದುರಿರುವ ಮೂರು ಮರಗಳನ್ನು 4 ದಿನಗಳ ಒಳಗಾಗಿ ಕಟಾವು ಮಾಡಿ ರ್‍ಯಾಂಪ್ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಸೂಚನೆ ನೀಡಿದರು.



ದೊಮ್ಮಲೂರು ಕಡೆಯ ಡೌನ್ ರ್‍ಯಾಂಪ್ ಕಾಮಗಾರಿ ಶೇ. 70 ರಷ್ಟು ಪೂರ್ಣಗೊಂಡಿದ್ದು, ಹೆಚ್ಚುವರಿ ಸಿಬ್ಬಂದಿಗಳನ್ನು ನಿಯೋಜಿಸಿಕೊಂಡು 15 ದಿನಗಳ ಒಳಗಾಗಿ ಬಾಕಿ ಡೌನ್ ರ್‍ಯಾಂಪ್ ಕಾಮಗಾರಿಯನ್ನು ಪೂರ್ಣಗೊಳಿಸಬೇಕು. ಅದಾದ ಬಳಿಕ ಸರ್ಜಾಪುರ ಕಡೆಯ ಡೌನ್ ರ್‍ಯಾಂಪ್ ಕಾಮಗಾರಿಯನ್ನು 15 ದಿನಗಳ ಒಳಗಾಗಿ ಕೈಗೆತ್ತಿಕೊಳ್ಳಲು ಸೂಚನೆ ನೀಡಿದರು.

ಈಜೀಪುರ ಸಿಗ್ನಲ್ ಕಡೆಯಲ್ಲಿ ಅಳವಡಿಸುತ್ತಿರುವ 4 ಸ್ಪ್ಯಾನ್ಸ್ ಲಾಂಚಿಂಗ್ ಕಾರ್ಯವನ್ನು ನಿನ್ನೆ ಆರಂಭಿಸಲಾಗಿದ್ದು, 2 ತಿಂಗಳಲ್ಲಿ ಅದನ್ನು ಪೂರ್ಣಗೊಳಿಸಬೇಕು. 5 ಪೋರ್ಟಲ್ ಫ್ರೇಮ್ ಗಳ ಕಾರ್ಯವನ್ನು ತ್ವರಿತವಾಗಿ ಪೂರ್ಣಗೊಳಿಸಿ ಅಕ್ಟೋಬರ್ ಅಂತ್ಯದೊಳಗಾಗಿ ಪ್ರಮುಖ ಮೇಲ್ಸೇತುವೆ ಕಾಮಗಾರಿಯನ್ನು ಪೂರ್ಣಗೊಳಿಸಲು ಗುತ್ತಿಗೆದಾರರಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

# ಕೆ.ವಿ.ಪ್ರಭಾಕರ್ ಅವರೊಂದಿಗೆ ಇಂದು ಮಾಧ್ಯಮ ಸಂವಾದ

ಬೆಂಗಳೂರು

ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾಗಿ ಯಶಸ್ವಿಯಾಗಿ ಮೂರು ವರ್ಷ ಪೂರೈಸುತ್ತಿರುವ ಕೆ.ವಿ.ಪ್ರಭಾಕರ್ ಅವರೊಂದಿಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ವತಿಯಿಂದ ಮಾಧ್ಯಮ-ಸಂವಾದ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಈ ಕಾರ್ಯಕ್ರಮವು ಮೇ 22, 2026ರ ಶುಕ್ರವಾರ ಬೆಳಿಗ್ಗೆ 11 ಗಂಟೆಗೆ ಬೆಂಗಳೂರಿನ ಕೆಜಿ ರಸ್ತೆಯ ಕಂದಾಯ ಭವನದ 3ನೇ ಮಹಡಿಯಲ್ಲಿರುವ ಕೆಯುಡಬ್ಲ್ಯೂಜೆ ಸಭಾಂಗಣದಲ್ಲಿ ನಡೆಯಲಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ವಹಿಸಲಿದ್ದು, ಕರ್ನಾಟಕ ಮಾಧ್ಯಮ ಅಕಾಡೆಮಿಯ ಅಧ್ಯಕ್ಷರಾದ ಆಯೇಶಖಾನಂ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾಗಿ ಮೂರು ವರ್ಷಗಳ ಅವಧಿಯಲ್ಲಿ ಕೈಗೊಂಡ ಕಾರ್ಯಚಟುವಟಿಕೆಗಳು, ಮಾಧ್ಯಮ ಕ್ಷೇತ್ರದ ಬೆಳವಣಿಗೆಗಳು ಹಾಗೂ ಸಮಕಾಲೀನ ವಿಚಾರಗಳ ಕುರಿತು ಈ ಸಂವಾದದಲ್ಲಿ ಚರ್ಚೆ ನಡೆಯಲಿದೆ.



ರಾಜ್ಯದ ಪತ್ರಕರ್ತರು, ಮಾಧ್ಯಮ ಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

# 63 ಮಿಲಿಯನ್ ಡಾಲರ್ ಹೂಡಿಕೆ ಸಂಗ್ರಹ

ಬೆಂಗಳೂರು

ಭಾರತದ ಪ್ರಮುಖ ಪ್ರಯಾಣ-ಹಣಕಾಸು ತಂತ್ರಜ್ಞಾನ ಕಂಪನಿಗಳಲ್ಲಿ ಒಂದಾದ ಸ್ಕ್ಯಾಪಿಯಾ ಸಂಸ್ಥೆ, ಜನರಲ್ ಕ್ಯಾಟಲಿಸ್ಟ್ ನೇತೃತ್ವದಲ್ಲಿ 63 ಮಿಲಿಯನ್ ಡಾಲರ್ ಹೂಡಿಕೆಯನ್ನು ಸಂಗ್ರಹಿಸಿದೆ.

ಈ ಹೂಡಿಕೆ ಸುತ್ತಿನಲ್ಲಿ ಈಗಿನ ಹೂಡಿಕೆದಾರರಾದ ಪೀಕ್ ಎಕ್ಸ್‌ವೈ ಪಾರ್ಟ್ನರ್ಸ್ ಮತ್ತು ಝುಡ್ 47 ಕೂಡ ಭಾಗವಹಿಸಿದ್ದು, ಸಂಸ್ಥೆಯ ಬೆಳವಣಿಗೆಗೆ ಮತ್ತಷ್ಟು ಬಲ ನೀಡಿದೆ.

ಈ ಹೊಸ ಹೂಡಿಕೆಯೊಂದಿಗೆ ಸ್ಕ್ಯಾಪಿಯಾ ಭಾರತಾದ್ಯಂತ ಲಕ್ಷಾಂತರ ಗ್ರಾಹಕರನ್ನು ತಲುಪುವ ಗುರಿಯನ್ನು ಹೊಂದಿದ್ದು, ಕೃತಕ ಬುದ್ಧಿಮತ್ತೆ ಆಧಾರಿತ ವಿಧಾನವನ್ನು ಬಳಸಿ ತನ್ನ ಉತ್ಪನ್ನಗಳು ಮತ್ತು ತಂಡಗಳನ್ನು ಮತ್ತಷ್ಟು ವೇಗವಾಗಿ ವಿಸ್ತರಿಸಲು ಯೋಜಿಸಿದೆ.

ಸಂಸ್ಥೆಯ ಸಂಸ್ಥಾಪಕ ಮತ್ತು ಮುಖ್ಯ ಕಾರ್ಯನಿರ್ವಹಣಾಧಿಕಾರಿ ಅನಿಲ್ ಗೊಟೇಟಿ ಅವರು ಮಾತನಾಡಿ, ಜನರಲ್ ಕ್ಯಾಟಲಿಸ್ಟ್ ನಮ್ಮ ಜೊತೆಗೆ ಪಾಲುದಾರರಾಗಿ ಸೇರುತ್ತಿರುವುದು ಅತ್ಯಂತ ಉತ್ಸಾಹದ ಸಂಗತಿಯಾಗಿದೆ ಎಂದು ತಿಳಿಸಿದ್ದಾರೆ. ಪೀಕ್ ಎಕ್ಸ್‌ವೈ ಮತ್ತು ಝುಡ್ 47 ಅವರ ನಿರಂತರ ಹೂಡಿಕೆ ನಮ್ಮ ದೃಷ್ಟಿಕೋನ ಮತ್ತು ನಾವು ಸಾಗುತ್ತಿರುವ ದಿಕ್ಕಿಗೆ ದೊರೆತ ಬಲವಾದ ಮಾನ್ಯತೆ ಎಂದು ಅವರು ಹೇಳಿದರು.

ಪ್ರಯಾಣವನ್ನು ಜೀವನದ ಒಂದು ಭಾಗವಾಗಿ ಪರಿಗಣಿಸುವ ಭಾರತೀಯ ಪೀಳಿಗೆಗಾಗಿ ಸ್ಕ್ಯಾಪಿಯಾ ಸಮಗ್ರ ಪ್ರಯಾಣ ಪರಿಸರ ವ್ಯವಸ್ಥೆಯನ್ನು ನಿರ್ಮಿಸುತ್ತಿದ್ದು, ಅದರ ಮೂಲದಲ್ಲಿ ಹಣಕಾಸು ಉತ್ಪನ್ನವನ್ನು ಹೊಂದಿದೆ ಎಂದು ಅವರು ವಿವರಿಸಿದರು. ಈ ಹೂಡಿಕೆ ಮೂಲಕ ಉತ್ಪನ್ನ ಶ್ರೇಣಿಯನ್ನು ವಿಸ್ತರಿಸುವುದು, ಗ್ರಾಹಕರಿಗೆ ಹೆಚ್ಚುವರಿ ಮೌಲ್ಯ ಒದಗಿಸುವುದು, ಬ್ರ್ಯಾಂಡ್ ವಿಸ್ತರಣೆ ಹಾಗೂ ಉತ್ತಮ ಪ್ರತಿಭೆಗಳನ್ನು ಆಕರ್ಷಿಸುವುದು ಸಾಧ್ಯವಾಗಲಿದೆ ಎಂದು ಅವರು ತಿಳಿಸಿದರು.



ಡಾ.ಎರಮ್ಯಾರಮೇಶ್ ರವರನ್ನು ಬೆಂಗಳೂರಿನ ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರನ್ನಾಗಿ ನೇಮಕ ಮಾಡಲಾಗಿದೆ. ಈ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯದ ಘನತೆವೆತ್ತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ರವರನ್ನು ಲೋಕಭವನದಲ್ಲಿ ಭೇಟಿ ಮಾಡಿದ ಮಾಜಿ ಶಾಸಕರು ಹಾಗೂ ಗ್ರೇಟರ್ ಬೆಂಗಳೂರಿನ ಜೆಡಿಎಸ್ ಅಧ್ಯಕ್ಷರಾದ ಹೆಚ್.ಎಂ.ರಮೇಶ್ ಗೌಡ ಅವರು ತಮ್ಮ ಧರ್ಮಪತ್ನಿ ಡಾ. ರಮ್ಯಾ ಅವರೊಡಗೂಡಿ ರಾಜ್ಯಪಾಲರಿಗೆ ಪುಷ್ಪಗುಚ್ಛ ನೀಡಿ ಧನ್ಯವಾದಗಳನ್ನು ತಿಳಿಸಿದರು.

# 'ಎಬೋಲಾ ವೈರಸ್, ರಾಜ್ಯದಲ್ಲಿ ಕಟ್ಟೆಚ್ಚರ'

ಬೆಂಗಳೂರು



"ಎಬೊಲಾ ವೈರಸ್ ಭೀತಿಯ ಹಿನ್ನೆಲೆಯಲ್ಲಿ ರಾಜ್ಯ ಆರೋಗ್ಯ ಇಲಾಖೆ ಸೋಂಕು ನಿಯಂತ್ರಣಕ್ಕೆ ಸನ್ನದ್ಧವಾಗಿದ್ದು, ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಕ್ರಮ ಕೈಗೊಳ್ಳಲಾಗುವುದು ಎಂದು ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ಜಾಗತಿಕ ಮಟ್ಟದಲ್ಲಿ ಆಫ್ರಿಕಾ ಖಂಡದ ಕೆಲವು ದೇಶಗಳಲ್ಲಿ ಎಬೊಲಾ ಸೋಂಕು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ದೇಶಾದ್ಯಂತ ಮುನ್ನೆಚ್ಚರಿಕೆ ವಹಿಸಲು ಕೇಂದ್ರ ಆರೋಗ್ಯ ಸಚಿವಾಲಯ ಸೂಚಿಸಿದ್ದು, ರಾಜ್ಯದಲ್ಲಿ ಕಟ್ಟೆಚ್ಚರ ವಹಿಸಲಾಗಿದೆ ಎಂದಿದ್ದಾರೆ.

ಸುದ್ದಿಗಾರರ ಜೊತೆ ಮಾತನಾಡಿದ ಅವರು, ಆರೋಗ್ಯ ಸೇವೆಗಳ ನಿರ್ದೇಶನಾಲಯ ರೋಗಪೀಡಿತ ದೇಶಗಳಿಗೆ ಸಂಚರಿಸುವ ಪ್ರಯಾಣಿಕರಿಗೆ ಎಬೋಲಾ ಸೋಂಕಿನ ಬಗ್ಗೆ ಮಾಹಿತಿ ನೀಡಿದೆ. ಡೆಮಾಕ್ರಟಿಕ್ ರಿಪಬ್ಲಿಕ್ ಆಫ್ ಕಾಂಗೋ, ಉಗಾಂಡಾ ಮತ್ತು ದಕ್ಷಿಣ ಸುಡಾನ್ ಸೇರಿದಂತೆ ಹೆಚ್ಚಿನ ಅಪಾಯದ ದೇಶಗಳಿಗೆ ಭೇಟಿ ನೀಡಿದ ಮತ್ತು ಜ್ವರ, ತಲೆನೋವು, ಸ್ನಾಯುಸೆಳೆತ, ರಕ್ತಸ್ರಾವ ಮತ್ತು ವಾಂತಿಯಂತಹ ರೋಗಲಕ್ಷಣಗಳು ಕಂಡುಬಂದಿರುವ ಪ್ರಯಾಣಿಕರಿಗೆ ತಕ್ಷಣ ವೈದ್ಯಕೀಯ ಚಿಕಿತ್ಸೆ ನೀಡಲು ಸೂಚಿಸಲಾಗಿದೆ ಎಂದರು.



ಗುರುವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ನವರು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಭಯೋತ್ಪಾದನಾ ವಿರೋಧಿ ದಿನ ಆಚರಣೆ ಅಂಗವಾಗಿ ಭಯೋತ್ಪಾದನಾ ವಿರೋಧಿ ದಿನದ ಪ್ರತಿಜ್ಞಾ ವಚನವನ್ನು ಬೋಧನೆ ಮಾಡಿದರು. ಈ ಸಂದರ್ಭದಲ್ಲಿ ಸಚಿವರಾದ ಪರಮೇಶ್ವರ್, ಸರ್ಕಾರದ ಮುಖ್ಯಕಾರ್ಯದರ್ಶಿ ಶಾಲಿನಿ ರಜನೀಶ್ ಸೇರಿದಂತೆ ಹಲವರಿದ್ದರು.

# ಧರ್ಮಸ್ಥಳ ಪ್ರಕರಣ ಮತ್ತೆ ಚುರುಕು

ಬೆಂಗಳೂರು

ಧರ್ಮಸ್ಥಳ ಗ್ರಾಮದ ಬುರುಡೆ ರಹಸ್ಯ ಪ್ರಕರಣದ ತನಿಖೆ ಮತ್ತೆ ಚುರುಕು ಪಡೆದುಕೊಂಡಿದೆ. 4 ತಿಂಗಳ ಹಿಂದೆ 7 ಅಸ್ಥಿಪಂಜರ ಪತ್ತೆಯಾಗಿದ್ದ ಬಂಗ್ಲೆಗುಡ್ಡೆ ಕಾಡಿಗೆ ವಿಧಿವಿಜ್ಞಾನ ಪ್ರಯೋಗಾಲಯ ತಂಡ ಭೇಟಿ ನೀಡಿದೆ.

ಮೂವರು ಅಧಿಕಾರಿಗಳನ್ನೊಳಗೊಂಡ ಎಫ್‌ಎಸ್‌ಎಲ್ ಅಧಿಕಾರಿಗಳ ತಂಡ ಇಂದು ಬೆಂಗಳೂರಿನಿಂದ ಎಸ್‌ಐಟಿ ಅಧಿಕಾರಿಗಳೊಂದಿಗೆ ಬಂಗ್ಲೆಗುಡ್ಡೆ ಅರಣ್ಯ ಪ್ರದೇಶಕ್ಕೆ ಭೇಟಿ ನೀಡಿದೆ. 4 ತಿಂಗಳ ಹಿಂದೆ 4 ತಿಂಗಳ ಹಿಂದೆ 7 ಅಸ್ಥಿಪಂಜರ ಸಿಕ್ಕಿದ್ದ ಜಾಗದಲ್ಲಿ ಪರಿಶೀಲನೆ ನಡೆಸಿದೆ. ಅಲ್ಲದೇ ಆರೋಪಿ ಪ್ರದೀಪ್ ಕುಲಾಲ್‌ನನ್ನ ಸ್ಥಳಕ್ಕೆ ಕರೆತಂದು ಪರಿಶೀಲನೆ ನಡೆಸಲಾಗಿದೆ.

ಬುರುಡೆ ಷಡ್ಯಂತ್ರ ಪ್ರಕರಣದಲ್ಲಿ ಭಾಗಿಯಾಗಿದ್ದ ಪ್ರದೀಪ್ ಕುಲಾಲ್ ಬಿಎನ್‌ಎಸ್ ಸೆಕ್ಷನ್ 183 ಅಡಿ ತಪ್ಪೊಪ್ಪಿಗೆ ನೀಡಿದ್ದ. ರಾತ್ರಿ ಹೊತ್ತು ಕಾಡಿನಲ್ಲಿ ಬುರುಡೆ ತೆಗೆಯುತ್ತಿದ್ದ ವಿಡಿಯೋದಲ್ಲೂ ಪ್ರದೀಪ್ ಕಾಣಿಸಿಕೊಂಡಿದ್ದ.



ನಗರಾಭಿವೃದ್ಧಿ ಮತ್ತು ನಗರ ಯೋಜನಾ ಸಚಿವ ಹಾಗೂ ಹೆಬ್ಬಾಳ ವಿಧಾನಸಭಾ ಕ್ಷೇತ್ರದ ಶಾಸಕ ಬೈರತಿ ಸುರೇಶ್ ಗುರುವಾರ ಹೆಬ್ಬಾಳದ ಪಿಳೇಕಮ್ಮ ದೇವಸ್ಥಾನ ಹತ್ತಿರ ವೈಟ್ ಟಾಪಿಂಗ್ ರಸ್ತೆ ನಿರ್ಮಾಣದ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ, ಸನ್ ರೈಸ್ ಶಾಲೆ ಬಳಿಯ ವಿನಾಯಕ ಬಡಾವಣೆಯ ನವೀಕರಣಗೊಂಡಿರುವ ಉದ್ಯಾನವನ, ಯುಎಎಸ್ ಬಡಾವಣೆಯ ವಿನಾಯಕ ದೇವಸ್ಥಾನದ ಬಳಿಯ ಉದ್ಯಾನವನ ಸೇರಿದಂತೆ ಐದು ನವೀಕೃತ ಉದ್ಯಾನವನಗಳನ್ನು ಲೋಕಾರ್ಪಣೆ ಮಾಡಿದರು. ಈ ಸಂದರ್ಭದಲ್ಲಿ ಮಾಜಿ ಬಿಬಿಎಂಪಿ ಸದಸ್ಯರು, ವಾರ್ಡ್ ಅಧ್ಯಕ್ಷರು, ಮುಖಂಡರು, ಕಾರ್ಯಕರ್ತರು, ಸ್ಥಳೀಯ ನಿವಾಸಿಗಳು ಇದ್ದರು.

# ನಗರಗಳ ಬಳಿಯ ಅರಣ್ಯ ಭೂಮಿಗೆ ಬೇಲಿ ಹಾಕಿ: ಈಶ್ವರಖಂಡ್ರೆ

ಬೆಂಗಳೂರು

ಕಾಂಪಾ ನಿಧಿಯಲ್ಲಿ ಅರಣ್ಯ ಭೂಮಿ ರಕ್ಷಣೆಗೆ ಹಣ ಒದಗಿಸಲು ಅವಕಾಶವಿದ್ದು, ನಗರ ಮತ್ತು ಪಟ್ಟಣದ ಸಮೀಪ ಇರುವ ಕೋಟ್ಯಂತರ ರೂ. ಬೆಲೆ ಬಾಳುವ ಅರಣ್ಯ ಭೂಮಿ ಒತ್ತುವರಿ ಆಗದಂತೆ ಬೇಲಿ ಹಾಕಲು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಅರಣ್ಯಾಧಿಕಾರಿಗಳಿಗೆ ಸೂಚಿಸಿದ್ದಾರೆ.

ಬೆಂಗಳೂರಿನಲ್ಲಿ ಉನ್ನತಾಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಇತ್ತೀಚೆಗೆ ತಾವು ಹಾಸನ ನಗರಕ್ಕೆ ಹೊಂದಿಕೊಂಡಿರುವ ಮಡೆನೂರು ಅರಣ್ಯ ಪ್ರದೇಶಕ್ಕೆ ಭೇಟಿ ನೀಡಿದ್ದು, ಇಲಾಖೆ ಹೆಸರಲ್ಲಿ ಆರ್.ಟಿ.ಸಿ. ಇದ್ದರೂ ಅಲ್ಲಿ ಅರಣ್ಯ ಬೆಳೆಸಿಲ್ಲ. ಹೀಗಾಗಿ ಒತ್ತುವರಿ ನಡೆಯುತ್ತದೆ. ಕೂಡಲೇ ಇಂತಹ ಭೂಮಿ ಗುರುತಿಸಿ ಬೇಲಿಹಾಕಿ, ಸ್ಥಳೀಯ ಪ್ರಭೇದದ ಸಸಿಗಳನ್ನು ನೆಟ್ಟು ನೆಡುತೋಪು ಅಭಿವೃದ್ಧಿಪಡಿಸಿ ಎಂದು ಸೂಚಿಸಿದರು.

ಸರ್ಕಾರದಿಂದ ಮತ್ತು ಹಿಂದೆ ರಾಜರ ಆಳ್ವಿಕೆ ಕಾಲದಲ್ಲಿ ಅರಣ್ಯ ಎಂದು ಗೆಜೆಟ್ ಅಧಿಸೂಚನೆ ಆಗಿದ್ದರೂ ಅರಣ್ಯ ಸ್ವರೂಪವಿದ್ದರೂ ಇನ್ನೂ ಕೆಲವು ಕಡೆ ಅರಣ್ಯ ಎಂದು ಇಂಡೀಕರಣ ಆಗದೆ, ಆರ್.ಟಿ.ಸಿ.ಯಲ್ಲಿ ಅರಣ್ಯ ಎಂದು ದಾಖಲಾಗದ ಕಾರಣ ಅಕ್ರಮ ಮಂಜೂರಾತಿ, ಒತ್ತುವರಿ ಆಗುತ್ತಿದ್ದು, ಕೂಡಲೇ ಇಂಡೀಕರಣಕ್ಕೆ (ಮ್ಯುಟೇಷನ್) ಕ್ರಮ ವಹಿಸುವಂತೆ ಈಶ್ವರ ಖಂಡ್ರೆ ನಿರ್ದೇಶನ ನೀಡಿದರು.



ತುಮಕೂರು ಜಿಲ್ಲೆಯಲ್ಲಿ ಊರಿನತ್ತ ಚಿರತೆಗಳು ಬರುವುದು ಹೆಚ್ಚಾಗಿದ್ದು, ಚಿರತೆಗಳನ್ನು ಹಿಡಿದು ಕಾಡಿಗೆ ಮರಳಿಸಲು ಅಥವಾ ಪುನರ್ವಸತಿ ಕೇಂದ್ರಗಳಿಗೆ ಸ್ಥಳಾಂತರಿಸಲು ಚಿರತೆ ಕಾರ್ಯಪಡೆ ರಚನೆಗೆ ಕೂಡಲೆ ಪ್ರಕ್ರಿಯೆ ಆರಂಭಿಸುವಂತೆ ತಿಳಿಸಿದರು.

ಚಿರತೆಗಳು ನಾಡಿಗೆ ಬಂದಾಗ ಜನರು ಭಯಭೀತರಾಗುತ್ತಾರೆ. ಹೀಗಾಗಿ ತಕ್ಷಣ ಸ್ಪಂದಿಸುವ ಅಗತ್ಯವಿದ್ದು, ಅವುಗಳನ್ನು ಸೆರೆ ಹಿಡಿಯಲು ಸಿಬ್ಬಂದಿಗೆ ಸುರಕ್ಷತಾ ಉಪಕರಣಗಳು, ಬೋನುಗಳು ಮತ್ತು ವಾಹನ ಒದಗಿಸುವಂತೆಯೂ ಈಶ್ವರ ಖಂಡ್ರೆ ಸೂಚಿಸಿದರು. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಅರಣ್ಯ ಕಾರ್ಯಪಡೆ ಮುಖ್ಯಸ್ಥರಾದ ಮೀನಾಕ್ಷಿ ನೇಗಿ, ಮುಖ್ಯ ವನ್ಯಜೀವಿ ಪರಿಪಾಲಕರಾದ ಕುಮಾರ್ ಪುಷ್ಕರ್, ಕಾಂಪಾ ವಿಭಾಗದ ಪಿಸಿಸಿಎಫ್ ರಾಧಾದೇವಿ ಮತ್ತಿತರರು ಪಾಲ್ಗೊಂಡಿದ್ದರು.

# 860 ಗ್ರಾಂ ಒಣ ಗಾಂಜಾ ವಶ, ಆರೋಪಿ ಬಂಧನ

ಬೆಂಗಳೂರು

ಆಂಧ್ರ ಪ್ರದೇಶದಿಂದ ಒಣ ಗಾಂಜಾವನ್ನು ತಂದು ಸ್ಥಳೀಯವಾಗಿ ಮಾರಾಟ ಮಾಡಲು ಯತ್ನಿಸಿದ್ದ ವ್ಯಕ್ತಿಯನ್ನು ದೊಡ್ಡಬಳ್ಳಾಪುರ ಗ್ರಾಮಾಂತರ ಪೊಲೀಸ್ ಠಾಣೆ ಪೊಲೀಸರು ಬಂಧಿಸಿ, ಸುಮಾರು 860 ಗ್ರಾಂ ಒಣ ಗಾಂಜಾವನ್ನು ವಶಕ್ಕೆ ಪಡೆದಿದ್ದಾರೆ.

ಪೊಲೀಸ್ ಇನ್ಸ್‌ಪೆಕ್ಟರ್ ಡಾ. ನವೀನ್ ಕುಮಾರ್ ಎಂ.ಬಿ. ಅವರ ನೇತೃತ್ವದಲ್ಲಿ ಕಾರ್ಯಾಚರಣೆ ನಡೆಸಿದ ಪೊಲೀಸ್ ತಂಡ ಆರೋಪಿಯನ್ನು ಬಂಧಿಸುವಲ್ಲಿ ಯಶಸ್ವಿಯಾಗಿದೆ.

ಬಂಧಿತನು ದೊಡ್ಡಬಳ್ಳಾಪುರ ತಾಲೂಕಿನ ಕಂಟನಕುಂಟೆ ಗ್ರಾಮದ ತನ್ನ ಮನೆಯಲ್ಲಿ ಮಾರಾಟ ಮಾಡುವ ಉದ್ದೇಶದಿಂದ ಒಣ ಗಾಂಜಾವನ್ನು ಸಂಗ್ರಹಿಸಿಟ್ಟಿದ್ದ ಎಂದು ಪೊಲೀಸರು ತಿಳಿಸಿದ್ದಾರೆ.

ಖಚಿತ ಮಾಹಿತಿಯ ಮೇರೆಗೆ ದಾಳಿ ನಡೆಸಿದ ಪೊಲೀಸರು ಗಾಂಜಾವನ್ನು ವಶಪಡಿಸಿಕೊಂಡಿದ್ದು, ಈ ಸಂಬಂಧ ದೊಡ್ಡಬಳ್ಳಾಪುರ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಆರೋಪಿಯನ್ನು ಪೊಲೀಸರು ವಿಚಾರಣೆಗೆ ಒಳಪಡಿಸಿದ್ದು, ಕಾರ್ಯಾಚರಣೆಯಲ್ಲಿ ಪಿಎಸ್‌ಐಗಳಾದ ಸುಮಂತ್, ಪ್ರೀತಿ ಹಾಗೂ ಸಿಬ್ಬಂದಿಗಳಾದ ಚಂದ್ರು, ಸುನಿಲ್ ಬಾಸಗಿ, ನಟರಾಜ್ ಮತ್ತು ಪ್ರವೀಣ್ ಭಾಗವಹಿಸಿದ್ದರು.

# ಪ್ರಗತಿ ಪರಿಶೀಲನೆ ಸಭೆ



ಬೆಂಗಳೂರು

ಬೆಂಗಳೂರು ಪಶ್ಚಿಮ ನಗರ ಪಾಲಿಕೆ ಆಯುಕ್ತರಾದ ಡಾ. ರಾಜೇಂದ್ರ ಕೆ.ವಿ. ರವರು ಮೇ 20ರಂದು ಪಶ್ಚಿಮ ನಗರ ಪಾಲಿಕೆ ವ್ಯಾಪ್ತಿಯಲ್ಲಿ ವಿವಿಧ ಕಾಮಗಾರಿ ಕೆಲಸಗಳು ಸಿಎಂಐಡಿಪಿ, ಸಿಎಸ್‌ಎಸ್‌ಐಪಿ ಯೋಜನೆಗಳು, ಮಳೆಗಾಲ ಮುಂಜಾಗ್ರತಾ ಸಮನ್ವಯತೆ ಹಾಗೂ ಸ್ವಚ್ಛತೆ, ತ್ಯಾಜ್ಯ ನಿರ್ವಹಣೆ ಸಂಬಂಧಿಸಿದಂತೆ ಕಾಮಗಾರಿ ಇಲಾಖೆ ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನೆ ಸಭೆ ನಡೆಸಿದರು.

ಮುಖ್ಯಮಂತ್ರಿಗಳ ಮೂಲಸೌಕರ್ಯ ಅಭಿವೃದ್ಧಿ ಯೋಜನೆ ಹಾಗೂ ಕ್ಯಾಪಿಟಲ್ ಸಪೋರ್ಟ್ ಫಾರ್ ಸ್ಪೆಷಲ್ ಇನ್ಫ್ರಾಸ್ಟ್ರಕ್ಚರ್ ಪ್ರಾಜೆಕ್ಟ್ ಸಂಬಂಧಿತ ಕಾಮಗಾರಿಗಳು ಸೇರಿದಂತೆ ಮಳೆನೀರುಗಾಲುವೆ, ಅರಣ್ಯ, ಪ್ರಮುಖ ರಸ್ತೆಗಳ ಚರಂಡಿ ಹೂಳೆತ್ತುವಿಕೆ, ಸ್ಕೈವಾಕ್ ಮತ್ತು ಅಂಡರ್ ಪಾಸ್ ನಿರ್ವಹಣೆ, ಬಸ್ ನಿಲ್ದಾಣ, ರಸ್ತೆ ಉಬ್ಬು, ನಿಯಂತ್ರಣ ಕೊಠಡಿ, ರಸ್ತೆ ಗುಂಡಿ ಇತ್ಯಾದಿ ವಿವಿಧ ಮೂಲಸೌಕರ್ಯ ವಿಚಾರಗಳಿಗೆ ಸಂಬಂಧಿಸಿದಂತೆ ಅಧಿಕಾರಿಗಳಿಗೆ ಸೂಚನೆಗಳನ್ನು ನೀಡಿದರು.

ಕಾಮಗಾರಿಗಳನ್ನು ಗುಣಮಟ್ಟ ಕಾಯ್ದುಕೊಂಡು ತ್ವರಿತಗತಿಯಲ್ಲಿ ಪೂರ್ಣಗೊಳಿಸುವ ಜೊತೆಗೆ ಮೂಲಸೌಕರ್ಯಗಳ ಸಮರ್ಪಕ ನಿರ್ವಹಣೆ ನಡೆಸುವಂತೆ ಸೂಚಿಸಿದರು. ಮುಂಗಾರು ಆರಂಭದೊಳಗೆ ಸಿಎಂಐಡಿಪಿ–ಸಿಎಸ್‌ಎಸ್‌ಐಪಿ ಯೋಜನೆಗಳಡಿಯಲ್ಲಿ ರಸ್ತೆಗಳ ಅಭಿವೃದ್ಧಿ ಪೂರ್ಣಗೊಳ್ಳಬೇಕು. ಲೇನ್ ಮಾರ್ಕಿಂಗ್, ಕ್ಯಾಟ್ ಐ, ಹಂಪ್ ಸಿದ್ಧವಾಗಬೇಕು. ಎಲ್ಲಾ ನಿಯಮಗಳು ಮತ್ತು ಮಾನದಂಡಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ಗುಣಮಟ್ಟದ ಕಾಮಗಾರಿ ನಡೆಸಬೇಕು ಎಂದು ಆಯುಕ್ತರು ನಿರ್ದೇಶನ ನೀಡಿದರು.

ಟಿಇಸಿ: ಟ್ರಾಫಿಕ್ ಇಂಜಿನಿಯರಿಂಗ್ ಕೋಶ (ಟಿಇಸಿ)ದಿಂದ ನಿರ್ವಹಿಸಬೇಕಾಗಿರುವ ಎಲ್ಲಾ ಕಾಮಗಾರಿಗಳನ್ನು ಆಯಾಯ ವಿಭಾಗದಿಂದಲೇ ನಿರ್ವಹಿಸಲು ಸೂಚಿಸಿದರು.

# ಗೊಲ್ಲರಹಟ್ಟಿ, ಮಜರೆ ಹಾಗೂ ತಾಂಡ ಪ್ರದೇಶದ 286 ಕುಟುಂಬಗಳಿಗೆ ಹಕ್ಕುಪತ್ರ ವಿತರಣೆ

ಬೆಂಗಳೂರು

ಮಧುಗಿರಿ ತಾಲೂಕಿನ ಐ.ಡಿ.ಹಳ್ಳಿ ಹಾಗೂ ಕೊಡಿಗೇನಹಳ್ಳಿ ಹೋಬಳಿ ವ್ಯಾಪ್ತಿಯ ವಿವಿಧ ಗ್ರಾಮಗಳಲ್ಲಿ 286 ಕುಟುಂಬಗಳಿಗೆ ಮನೆ ಹಕ್ಕುಪತ್ರಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಕೆ.ಎನ್. ರಾಜಣ್ಣ, "ಗ್ರಾಮಗಳಲ್ಲಿ ಗುಂಪುಗಾರಿಕೆ ಹಾಗೂ ಮನಸ್ತಾಪಗಳು ಇರಬಾರದು. ಜನರು ಒಗ್ಗಟ್ಟಾಗಿ ಇದ್ದಾಗ ಮಾತ್ರ ಗ್ರಾಮಗಳ ಅಭಿವೃದ್ಧಿ ಸಾಧ್ಯವಾಗುತ್ತದೆ" ಎಂದು ತಿಳಿಸಿದರು.

ತಿಗಳರಹಳ್ಳಿ, ಬೂದೇನಹಳ್ಳಿ, ಭೈರಾಪುರ ತಾಂಡ, ರಾಮನಾಯಕನ ತಾಂಡ ಹಾಗೂ ಜಲತಿಮ್ಮನಹಳ್ಳಿ ಗ್ರಾಮಗಳಲ್ಲಿ ಹಕ್ಕುಪತ್ರಗಳನ್ನು ವಿತರಿಸಿ ಮಾತನಾಡಿದ ಅವರು, ಕಂದಾಯ ಇಲಾಖೆ ಅಧಿಕಾರಿಗಳು ಮನೆ ಮನೆಗೆ ತೆರಳಿ ಅಳತೆ, ವಿಳಾಸ ಹಾಗೂ ಮಾಲೀಕರ ಮಾಹಿತಿಯನ್ನು ಸಂಗ್ರಹಿಸಿ ಹಕ್ಕುಪತ್ರಗಳನ್ನು ಸಿದ್ಧಪಡಿಸಿದ್ದಾರೆ ಎಂದರು. "ವರ್ಷಗಳಿಂದ ಮಜರೆ ಗ್ರಾಮಗಳು ಹಾಗೂ ತಾಂಡ ಪ್ರದೇಶಗಳಲ್ಲಿ ವಾಸವಿದ್ದರೂ ಸರ್ಕಾರಿ ಸೌಲಭ್ಯಗಳಿಂದ ಜನರು ವಂಚಿತರಾಗಿದ್ದರು. ಈಗ ಅವುಗಳನ್ನು ಕಂದಾಯ ಗ್ರಾಮಗಳಾಗಿ ಪರಿವರ್ತಿಸಿರುವುದರಿಂದ ನಿವಾಸಿಗಳಿಗೆ ಸ್ವತ್ತಿನ ಹಕ್ಕು ದೊರೆಯಲಿದೆ" ಎಂದು ಹೇಳಿದರು.

ಬಡ ಮಕ್ಕಳ ಶಿಕ್ಷಣಕ್ಕಾಗಿ ಸರ್ಕಾರ ಹಲವು ಯೋಜನೆಗಳನ್ನು ಜಾರಿಗೆ ತಂದಿದ್ದು,



ಯಾವುದೇ ಕಾರಣಕ್ಕೂ ಮಕ್ಕಳನ್ನು ಶಿಕ್ಷಣದಿಂದ ವಂಚಿಸಬಾರದು ಎಂದು ಅವರು ಪೋಷಕರಿಗೆ ಮನವಿ ಮಾಡಿದರು.

ಈ ವೇಳೆ ಮಾತನಾಡಿದ ಶ್ರೀನಿವಾಸ್, "ಹಿಂದೆ ಶಾಸಕರಾಗಿದ್ದ ವೇಳೆ ರಾಜಣ್ಣನವರು ಮಜರೆ ಮತ್ತು ತಾಂಡ ಪ್ರದೇಶಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸಲು ವಿಧಾನಸಭೆಯಲ್ಲಿ ವಿಶೇಷ ಪ್ರಯತ್ನ ಮಾಡಿದ್ದರು. ಇದೀಗ ಹಲವು ತಲೆಮಾರುಗಳಿಂದ ವಾಸಿಸುತ್ತಿರುವ ಕುಟುಂಬಗಳಿಗೆ ಹಕ್ಕುಪತ್ರಗಳನ್ನು ವಿತರಿಸಲಾಗುತ್ತಿದೆ" ಎಂದು ಹೇಳಿದರು.

ತಿಗಳರಹಳ್ಳಿ ಗ್ರಾಮದಲ್ಲಿ 72, ಅಕ್ಕಲಾಪುರ ಹಾಗೂ ರಂಗನಹಳ್ಳಿಯಲ್ಲಿ 30, ಬೂದೇನಹಳ್ಳಿಯಲ್ಲಿ 46, ಭೈರಾಪುರ ತಾಂಡದಲ್ಲಿ 8, ಮೌಲಾಬೇಗ್ ಪಾಳ್ಯದಲ್ಲಿ 11, ಗುಂಡಗಲ್ಲಿನಲ್ಲಿ 21 ಹಾಗೂ ಜಲತಿಮ್ಮನಹಳ್ಳಿಯಲ್ಲಿ 37 ಕುಟುಂಬಗಳಿಗೆ ಹಕ್ಕುಪತ್ರ ವಿತರಿಸಲಾಯಿತು.

ಕಾರ್ಯಕ್ರಮದ ವೇಳೆ ಗ್ರಾಮಸ್ಥರು ಸಿಸಿ ರಸ್ತೆ, ಚರಂಡಿ, ಕುಡಿಯುವ ನೀರಿನ ಘಟಕ, ತಂಗುದಾಣ, ಸೇವಾಲಾಲ್ ಭವನ ಹಾಗೂ ದೇವಸ್ಥಾನ ಅಭಿವೃದ್ಧಿಗೆ ಅನುದಾನ ನೀಡುವಂತೆ ಶಾಸಕರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಗೋಟೂರು ಶಿವಪ್ಪ, ಧನಂಜಯ್, ನಾಗೇಶ್ ಬಾಬು ಸೇರಿದಂತೆ ವಿವಿಧ ಅಧಿಕಾರಿಗಳು ಹಾಗೂ ಮುಖಂಡರು ಉಪಸ್ಥಿತರಿದ್ದರು.

# ಲಕ್ಕೇನಹಳ್ಳಿ ಜಲಾಶಯ ನಿರ್ಮಾಣಕ್ಕೆ ರೈತರ ತೀವ್ರ ವಿರೋಧ

ದೊಡ್ಡಬಳ್ಳಾಪುರ

ಸಾಸಲು ಹೋಬಳಿಯ ಲಕ್ಕೇನಹಳ್ಳಿ ಗ್ರಾಮದಲ್ಲಿ ಎತ್ತಿನಹೊಳೆ ಯೋಜನೆಯಡಿ ಉದ್ದೇಶಿತ ಜಲಾಶಯ ನಿರ್ಮಾಣಕ್ಕೆ ವಿರೋಧ ವ್ಯಕ್ತಪಡಿಸಿ ಸ್ಥಳೀಯ ರೈತರು ಹಾಗೂ ಗ್ರಾಮಸ್ಥರು ದೊಡ್ಡಬಳ್ಳಾಪುರ ತಾಲೂಕು ಕಚೇರಿ ಎದುರು ಭಾರಿ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯಲ್ಲಿ ಮಾತನಾಡಿದ ಹೋರಾಟಗಾರರು, ಲಕ್ಕೇನಹಳ್ಳಿಯಲ್ಲಿ ಜಲಾಶಯ ನಿರ್ಮಾಣವಾದರೆ ಸುತ್ತಮುತ್ತಲಿನ ಹಲವು ಗ್ರಾಮಗಳು ಮುಳುಗಡೆಯಾಗಲಿದ್ದು, ಅಲ್ಲಿನ ಜನರು ತಮ್ಮ ನೆಲೆ ಕಳೆದುಕೊಳ್ಳಬೇಕಾಗುತ್ತದೆ ಎಂದು ಆತಂಕ ವ್ಯಕ್ತಪಡಿಸಿದರು.

"ಸರ್ಕಾರ ಪರ್ಯಾಯವಾಗಿ ಮನೆ ಮತ್ತು ಜಮೀನು ನೀಡುವುದಾಗಿ ಹೇಳುತ್ತಿದೆ. ಆದರೆ ನಮಗೆ ಸರ್ಕಾರ ಕೊಡುವ ಭೂಮಿ ಬೇಡ, ನಾವು ಹುಟ್ಟಿ ಬೆಳೆದ ಊರು ಮತ್ತು ಜಮೀನು ಬಿಡುವುದಿಲ್ಲ" ಎಂದು ಗ್ರಾಮಸ್ಥರು ಒಕ್ಕೊರಲಿನಿಂದ ಹೇಳಿದರು.

ಸಾಸಲು ಹೋಬಳಿಯ ಜನರು ಕೃಷಿಯನ್ನೇ ಅವಲಂಬಿಸಿ ಬದುಕುತ್ತಿದ್ದು, ವಿಶೇಷವಾಗಿ ಅಡಿಕೆ ಬೆಳೆಯಿಂದ ಕೋಟ್ಯಂತರ ರೂಪಾಯಿ ವಹಿವಾಟು ನಡೆಯುತ್ತಿದೆ. ಜಲಾಶಯ ನಿರ್ಮಾಣದಿಂದ ನಮ್ಮ ಬದುಕೇ ನಾಶವಾಗುತ್ತದೆ ಎಂದು ರೈತರು ಆಕ್ರೋಶ




ವ್ಯಕ್ತಪಡಿಸಿದರು.

"ಎತ್ತಿನಹೊಳೆ ಯೋಜನೆಗೆ ನಮ್ಮ ವಿರೋಧವಿಲ್ಲ. ಆದರೆ ಲಕ್ಕೇನಹಳ್ಳಿಯಲ್ಲೇ ಜಲಾಶಯ ನಿರ್ಮಿಸುವುದಕ್ಕೆ ತೀವ್ರ ವಿರೋಧವಿದೆ. ಬೇಕಾದರೆ ನಮ್ಮ ಪ್ರಾಣ ಬಿಡುತ್ತೇವೆ, ಆದರೆ ಡ್ಯಾಂ ನಿರ್ಮಾಣಕ್ಕೆ ಅವಕಾಶ ನೀಡುವುದಿಲ್ಲ" ಎಂದು ಪ್ರತಿಭಟನಾಕಾರರು ಎಚ್ಚರಿಕೆ ನೀಡಿದರು.

ಜೂನ್ 21ರಂದು ಡಿ.ಕೆ. ಶಿವಕುಮಾರ್ ಅವರು ಲಕ್ಕೇನಹಳ್ಳಿಯಲ್ಲಿ ಯೋಜನೆ ಸ್ಥಳ ಪರಿಶೀಲನೆ ನಡೆಸಿ ಗ್ರಾಮಸ್ಥರೊಂದಿಗೆ ಮಾತುಕತೆ ನಡೆಸಿದ್ದರೂ, ನಮ್ಮ ಅಹವಾಲುಗಳನ್ನು ಸಮರ್ಪಕವಾಗಿ ಆಲಿಸಲಿಲ್ಲ ಎಂದು ಪ್ರತಿಭಟನಾಕಾರರು ಆರೋಪಿಸಿದರು.

"ಈ ಜಲಾಶಯ ಯಾವುದೇ ನದಿಗೆ ಅಡ್ಡಲಾಗಿ ನಿರ್ಮಾಣವಾಗುವುದಿಲ್ಲ. ಪೈಪ್ ಮೂಲಕ ತರಲಾಗುವ ನೀರನ್ನು ಸಂಗ್ರಹಿಸಲು ಬಳಸಲಾಗುತ್ತಿದೆ. ಹೀಗಾಗಿ ಬರಡು ಅಥವಾ ಸರ್ಕಾರಿ ಜಮೀನು ಇರುವ ಕಡೆ ಜಲಾಶಯ ನಿರ್ಮಿಸಬಹುದು" ಎಂದು ಗ್ರಾಮಸ್ಥರು ಆಗ್ರಹಿಸಿದರು. ಜಲಾಶಯ ನಿರ್ಮಾಣದಿಂದ ಮುಳುಗಡೆಯಾಗುವ ದಾಸರಪಾಳ್ಯ, ಶ್ರೀರಾಮನಹಳ್ಳಿ ಸೇರಿದಂತೆ ಹಲವು ಗ್ರಾಮಗಳ ಮಹಿಳೆಯರು ಕೂಡ ಪ್ರತಿಭಟನೆಯಲ್ಲಿ ಭಾಗವಹಿಸಿ, "ತಲೆತಲಾಂತರಗಳಿಂದ ಬದುಕು ಕಟ್ಟಿಕೊಂಡಿರುವ ಊರು ತೊರೆದು ಎಲ್ಲಿಗೂ ಹೋಗುವುದಿಲ್ಲ. ನಮ್ಮ ಮನೆಗಳನ್ನು ಉಳಿಸಿಕೊಳ್ಳಲು ಕೊನೆಯವರೆಗೂ ಹೋರಾಟ ಮಾಡುತ್ತೇವೆ" ಎಂದು ಹೇಳಿದರು.

ಈ ಸಂದರ್ಭದಲ್ಲಿ ರಾಮಣ್ಣ, ನರಸಿಂಹ ಗೌಡ, ನಂದಿನಿ ಪ್ರಸನ್ನ, ಗೋವಿಂದರಾಜ್ ಸೇರಿದಂತೆ ರೈತ ಮುಖಂಡರು ಹಾಗೂ

# ಪ್ರಾದೇಶಿಕ ಮೀಸಲಾತಿ ಅನ್ಯಾಯ ಸರಿಪಡಿಸಲು ಸರ್ಕಾರಕ್ಕೆ ಒತ್ತಾಯ

ಬೆಂಗಳೂರು

ಹೈದರಾಬಾದ್ ಕರ್ನಾಟಕ ಪ್ರಾದೇಶಿಕ ಸ್ಥಳೀಯ ಮೀಸಲಾತಿಯಿಂದ ಹಳೆ ಮೈಸೂರು, ಕಿತ್ತೂರು ಕರ್ನಾಟಕ, ಕರಾವಳಿ ಕರ್ನಾಟಕ ಭಾಗದ ನಿರುದ್ಯೋಗಿಗಳಿಗೆ ಮತ್ತು ನೌಕರರಿಗೆ ಆಗುತ್ತಿರುವ ಅನ್ಯಾಯ ಸರಿಪಡಿಸಬೇಕು ಎಂದು ರಾಜ್ಯ ಒಕ್ಕಲಿಗರ ಮೀಸಲಾತಿ ಹೋರಾಟ ಸಮಿತಿಯ ಪ್ರಧಾನ ಸಂಚಾಲಕ ಆಡಿಟರ್ ನಾಗರಾಜ್ ಯಲಚವಾಡಿ ಸರ್ಕಾರವನ್ನು ಒತ್ತಾಯಿಸಿದ್ದಾರೆ.

371ಜೆ 98ನೇ ಸಂವಿಧಾನ ತಿದ್ದುಪಡಿಯಲ್ಲಿ ಉದ್ಯೋಗ ಮೀಸಲಾತಿ ಮತ್ತು ಹೈದರಾಬಾದ್ ಕರ್ನಾಟಕ ಪ್ರದೇಶದ ಅಭಿವೃದ್ಧಿ ಎಂದು ವಿವರಿಸಲಾಗಿದೆ. ಇದರಿಂದ ಹೈದರಾಬಾದ್ ಕರ್ನಾಟಕ ಪ್ರಾದೇಶಿಕ ಸ್ಥಳೀಯ ವೃಂದದಲ್ಲಿ ಗ್ರೂಪ್ ಎ ಮತ್ತು ಬಿ ಹುದ್ದೆಗಳಲ್ಲಿ ಶೇಕಡ 75ರಷ್ಟು, ಗ್ರೂಪ್ ಸಿ ಹುದ್ದೆಗಳಲ್ಲಿ ಶೇಕಡ 80 ರಷ್ಟು, ಗ್ರೂಪ್ ಡಿ ಹುದ್ದೆಗಳಲ್ಲಿ ಶೇಕಡ 85 ರಷ್ಟು, ಮತ್ತು ರಾಜ್ಯ ಮಟ್ಟದ ಸ್ಥಳೀಯ ವೃಂದಗಳಲ್ಲಿ ಶೇಕಡಾ 8 ರಷ್ಟು ಹುದ್ದೆಗಳನ್ನು ಮೀಸಲಿಡಲಾಗಿದೆ.

ಹೈದರಾಬಾದ್ ಕರ್ನಾಟಕ ಪ್ರಾದೇಶಿಕ ಸ್ಥಳೀಯ ಅಭ್ಯರ್ಥಿಗಳಿಗೆ 1.57 ಲಕ್ಷ ಸರ್ಕಾರಿ ನೌಕರಿಯನ್ನು ಮತ್ತು ಶೇಕಡ 20ರಷ್ಟು ವಿದ್ಯಾಭ್ಯಾಸ ಪ್ರವೇಶಕ್ಕೆ ಮೀಸಲಿಡಲಾಗಿದೆ. ರಾಜ್ಯ ಸರ್ಕಾರಿ ಸೇವೆಯಲ್ಲಿದ್ದವರಲ್ಲಿ ಆದ್ಯತೆ ನೀಡಿದ ನೌಕರರನ್ನು ಮಾತ್ರ ಹೈದರಾಬಾದ್ ನೌಕರರ ಲೆಕ್ಕಕ್ಕೆ ತೆಗೆದುಕೊಂಡು, ಆದ್ಯತೆ ನೀಡದ ಹೈದರಾಬಾದ್ ಕರ್ನಾಟಕದ ಪ್ರಾದೇಶಿಕ ಸ್ಥಳೀಯ ನೌಕರರನ್ನು ಇತರ ಕರ್ನಾಟಕದ ಉಳಿಕೆ ವೃಂದದ ಲೆಕ್ಕಕ್ಕೆ ತೆಗೆದುಕೊಳ್ಳಲಾಗಿದೆ. ಇದರಿಂದ ಹೈದರಬಾದ್ ಕರ್ನಾಟಕ ಪ್ರದೇಶದ ಸ್ಥಳೀಯ ಅಭ್ಯರ್ಥಿಗಳಿಗೆ ನಿಗಧಿ ಪಡಿಸಿರುವ ಹುದ್ದೆಗಳಿಗಿಂತ ಹೆಚ್ಚುವರಿಯಾಗಿ ಆ ಪ್ರದೇಶದ ನೌಕರರು ನೇಮಕಗೊಳ್ಳುತ್ತಿದ್ದಾರೆ. ಇದರಿಂದಾಗಿ ಅನ್ಯಾಯವಾಗುತ್ತಿದೆ ಎಂದು ಹೇಳಿದ್ದಾರೆ.

ಹೈದರಾಬಾದ್ ಕರ್ನಾಟಕದ ಹುದ್ದೆಗಳನ್ನು ಪ್ರತ್ಯೇಕ ಯೂನಿಟ್ ಎಂದು ಪರಿಗಣಿಸಿರುವುದರಿಂದ ಹೈದರಾಬಾದ್ ಕರ್ನಾಟಕದವರಿಗೆ ಪ್ರತ್ಯೇಕ ನೇಮಕಾತಿ ಬಡ್ತಿ ಮತ್ತು ಇತರೆ ಸವಲತ್ತು ನೀಡುತ್ತಿರುವುದರಿಂದ ಇತರ ಕರ್ನಾಟಕದ ಭಾಗದ ಹಿರಿಯ ನೌಕರರಿಗೆ ಬಡ್ತಿಯಲ್ಲಿ ಅನ್ಯಾಯವಾಗುತ್ತಿದೆ.

ರಾಜ್ಯದ ವಿವಿಧ ಇಲಾಖೆಗಳ ಖಾಲಿ ಇರುವ ಹುದ್ದೆಗಳ ಪೈಕಿ ಕೇವಲ ಹೈದರಾಬಾದ್ ಕರ್ನಾಟಕದ ಎಲ್ಲಾ ಹುದ್ದೆಗಳನ್ನು ಮೊದಲೇ ಭರ್ತಿ ಮಾಡಿ ತದನಂತರ ಇತರ ಕರ್ನಾಟಕ ಭಾಗದ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವುದರಿಂದ ಹೈದರಾಬಾದ್ ಕರ್ನಾಟಕ ಭಾಗದ ನೌಕರರು ಜೇಷ್ಠತೆಯಲ್ಲಿ ಹಿರಿಯರಾಗಿ ಉಳಿಯುತ್ತಾರೆ ಇದರಿಂದಾಗಿ ಬಡ್ತಿ ಅವಕಾಶಗಳು ಹೈದರಾಬಾದ್ ಕರ್ನಾಟಕದ ನೌಕರರಿಗೆ ಹೆಚ್ಚಾಗಿರುತ್ತವೆ. ಹೈದರಾಬಾದ್ ಕರ್ನಾಟಕ ಭಾಗದ ಎಲ್ಲಾ ಹುದ್ದೆಗಳನ್ನು ಭರ್ತಿ ಮಾಡಿ ತದನಂತರ ಇತರ ಕರ್ನಾಟಕ ಭಾಗದ ಹುದ್ದೆಗಳನ್ನು ಭರ್ತಿ ಮಾಡಿದಲ್ಲಿ ಹೈದರಾಬಾದ್ ಕರ್ನಾಟಕ ನೌಕರರು ಇತರ ಕರ್ನಾಟಕ ಭಾಗದ ಹುದ್ದೆಗಳಲ್ಲಿ ಮತ್ತೊಮ್ಮೆ ಸ್ಪರ್ಧಿಸಲು ಅವಕಾಶ ನೀಡದಂತಾಗುತ್ತದೆ. ಹೈದರಾಬಾದ್ ಕರ್ನಾಟಕ ಮತ್ತು ಇತರ ಕರ್ನಾಟಕ ಭಾಗದ ಹುದ್ದೆಗಳನ್ನು ಪ್ರತ್ಯೇಕವಾಗಿ ನೇಮಕಾತಿ ಮಾಡಲಾಗುತ್ತಿದ್ದು, ನೇಮಕಾತಿಗೆ ಅರ್ಜಿ ಸಲ್ಲಿಸುವಾಗ ಯಾವ ವೃಂದದಲ್ಲಿ ಪರಿಗಣಿಸಬೇಕು ಎಂದು ಆಡಿಟರ್ ನಾಗರಾಜ್ ಯಲಚವಾಡಿ ಒತ್ತಾಯಿಸಿದ್ದಾರೆ.

ಹೈದಾರಬಾದ್ ಕರ್ನಾಟಕ ಭಾಗಕ್ಕೆ 371ಜೆ ಅನುಷ್ಠಾನಕ್ಕೆ ಉಪಸಮಿತಿ ರಚಿಸಲಾಗಿದ್ದು, ಈ ಸಮಿತಿಗೆ ಕೇವಲ ಹೈದರಾಬಾದ್ ಕರ್ನಾಟಕದ ಪ್ರದೇಶಕ್ಕೆ ಸೇರಿದ ಸಚಿವರನ್ನು ಮಾತ್ರ ಸದಸ್ಯರನ್ನಾಗಿ ಮಾಡಲಾಗಿದೆ. ಇವರು ಕೇವಲ ಹೈದರಾಬಾದ್ ಕರ್ನಾಟಕಕ್ಕೆ ಅನುಕೂಲವಾಗುವ ರೀತಿಯಲ್ಲಿ ಏಕಪಕ್ಷೀಯ ನಿರ್ಧಾರಗಳನ್ನು ತೆಗೆದುಕೊಳ್ಳುತ್ತಿದ್ದಾರೆ. ಇವರ ಸೂಚನೆಗಳನ್ನು ಸರ್ಕಾರವು ಯಾಥಾಸ್ಥಿತಿಯಲ್ಲಿ ಜಾರಿಗೊಳಿಸುತ್ತಿದೆ.

ಇದರಿಂದ ಇತರ ಕರ್ನಾಟಕ ಭಾಗದ ವಿದ್ಯಾರ್ಥಿಗಳು ಮತ್ತು ನಿರುದ್ಯೋಗಿಗಳಿಗೆ ಅನ್ಯಾಯವಾಗುತ್ತಿದೆ. ಹೈದರಾಬಾದ್ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣೆಗೆ ಜಾರಿಗೆ ತಂದಿರುವ ಮೀಸಲಾತಿಯನ್ನು ವಿರೋಧಿಸುತ್ತಿಲ್ಲ. ವಿವಿಧ ಇಲಾಖೆಗಳಲ್ಲಿ ಹೈದರಾಬಾದ್ ಕರ್ನಾಟಕ ಪ್ರದೇಶದ ನೌಕರರನ್ನು ಗಣನೆಗೆ ತೆಗೆದುಕೊಂಡು ಹೈದರಾಬಾದ್ ಕರ್ನಾಟಕಕ್ಕೆ ನಿಗಧಿಪಡಿಸಿದ ಹುದ್ದೆಗಳಲ್ಲಿ ಅವುಗಳನ್ನು ಕಳೆದು ಹೈದರಾಬಾದ್ ಕರ್ನಾಟಕ ವೃಂದಕ್ಕೆ ಉಳಿದ ನೌಕರರನ್ನು ನೇಮಕಾತಿ ಮಾಡಿಕೊಳ್ಳಬೇಕು ಹೈದರಾಬಾದ್ ಕರ್ನಾಟಕದ ಒಟ್ಟು ನೌಕರರನ್ನು ಶೇಕಡ 18.4ರಷ್ಟು ಮಿತಿಗೊಳಿಸಿ ಆದೇಶ ಹೊರಡಿಸಬೇಕು ಎಂದು ಹೇಳಿದ್ದಾರೆ.

# 'ಶೈಕ್ಷಣಿಕ ಪ್ರಗತಿಗೆ ಶಿಕ್ಷಕರು ಕೈಜೋಡಿಸಬೇಕು'

ಕುಣಿಗಲ್

ತಾಲೂಕಿನ ಶಿಕ್ಷಕರು ತಮ್ಮ ಕರ್ತವ್ಯವನ್ನು ಸಮರ್ಪಕವಾಗಿ ನಿರ್ವಹಿಸುವ ಮೂಲಕ ಶೈಕ್ಷಣಿಕ ಬದಲಾವಣೆ ಮತ್ತು ವಿದ್ಯಾರ್ಥಿಗಳ ಪ್ರಗತಿಗೆ ಸಹಕರಿಸಬೇಕು ಎಂದು ನೂತನ ಕ್ಷೇತ್ರ ಶಿಕ್ಷಣಾಧಿಕಾರಿ ಮಮತಾಮಣಿ ಕರೆ ನೀಡಿದರು.

ಕುಣಿಗಲ್ ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿಯಲ್ಲಿ ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಹಾಗೂ ಶಿಕ್ಷಕರ ಸೊಸೈಟಿ ವತಿಯಿಂದ ನೂತನ ಕ್ಷೇತ್ರ ಶಿಕ್ಷಣಾಧಿಕಾರಿಯಾಗಿ ಅಧಿಕಾರ ಸ್ವೀಕರಿಸಿದ ಮಮತಾಮಣಿ ಅವರಿಗೆ ಅಭಿನಂದನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಈ ವೇಳೆ ಮಾತನಾಡಿದ ಅವರು, "ಕಳೆದ 11 ವರ್ಷಗಳಿಂದ ಈ ಕ್ಷೇತ್ರದಲ್ಲೇ ವಿವಿಧ ಶಾಲೆಗಳಲ್ಲಿ ಕಾರ್ಯನಿರ್ವಹಿಸಿದ್ದೇನೆ. ಶಾಲೆಯಿಂದ ಹೊರಗುಳಿದಿರುವ ಮಕ್ಕಳನ್ನು ಮರಳಿ



ಶಿಕ್ಷಣದ ಮುಖ್ಯವಾಹಿನಿಗೆ ತರಲು ಶಿಕ್ಷಕರು ಹೆಚ್ಚಿನ ಪ್ರಯತ್ನ ಮಾಡಬೇಕು. ತಾಲೂಕಿನಲ್ಲಿ ಯಾವುದೇ ಮಗು ಶಿಕ್ಷಣದಿಂದ ವಂಚಿತವಾಗಬಾರದು" ಎಂದು ಹೇಳಿದರು.

ತಾಲೂಕಿನ ಶೈಕ್ಷಣಿಕ ಅಭಿವೃದ್ಧಿಗೆ ಶಿಕ್ಷಕರು ತಮ್ಮೊಂದಿಗೆ ಕೈಜೋಡಿಸಬೇಕು. ಉತ್ತಮ ಫಲಿತಾಂಶ ತರುವ ನಿಟ್ಟಿನಲ್ಲಿ ಶ್ರಮಿಸಬೇಕು. ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸುವುದರ ಜೊತೆಗೆ ಮೂಲಭೂತ ಸೌಲಭ್ಯಗಳು ಸಕಾಲದಲ್ಲಿ ದೊರೆಯುವಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

"ತಾಲೂಕಿನಲ್ಲಿ ಶಿಕ್ಷಕರ ಕೊರತೆ ಇದ್ದು, ಅದನ್ನು ಹಂತ ಹಂತವಾಗಿ ನಿವಾರಿಸುವ ಪ್ರಯತ್ನ ನಡೆಯಲಿದೆ. ವಿದ್ಯಾರ್ಥಿಗಳ ಜ್ಞಾನವರ್ಧನೆ ಮತ್ತು ಶೈಕ್ಷಣಿಕ ಬದುಕಿನ ಬದಲಾವಣೆಗೆ ಶಿಕ್ಷಕರು ಪ್ರಾಮಾಣಿಕವಾಗಿ ಕೆಲಸ ಮಾಡಬೇಕು" ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀನಿವಾಸ್.ಸಿ, ಶಿಕ್ಷಕರು ಕ್ಷೇತ್ರ ಶಿಕ್ಷಣಾಧಿಕಾರಿಗಳೊಂದಿಗೆ ಸಮನ್ವಯದಿಂದ ಕೆಲಸ ಮಾಡಿ ತಾಲೂಕಿನ ಶೈಕ್ಷಣಿಕ ಪ್ರಗತಿಗೆ ಕೈಜೋಡಿಸುವುದಾಗಿ ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ರಾಮಸ್ವಾಮಿ, ನಾಗರಾಜ್, ಕೃಷ್ಣ ಸೇರಿದಂತೆ ಶಿಕ್ಷಕರು ಹಾಗೂ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಸಾಗುವಳಿ ಚೀಟಿಗಾಗಿ ಆಗ್ರಹಿಸಿ ಕರ್ನಾಟಕ ಭೂ ಹಕ್ಕುದಾರರ ವೇದಿಕೆ ಪ್ರತಿಭಟನೆ

ಗುಡಿಬಂಡೆ



ಸುಮಾರು ವರ್ಷಗಳಿಂದ ಸಾಗುವಳಿ ಮಾಡುತ್ತಿರುವ ಭೂಮಿಯನ್ನು ರೈತರಿಗೆ ಮಂಜೂರು ಮಾಡುವಂತೆ ಆಗ್ರಹಿಸಿ ಕರ್ನಾಟಕ ಭೂ ಹಕ್ಕುದಾರರ ವೇದಿಕೆ ಸಾರಥ್ಯದಲ್ಲಿ ಬಗರ್ ಹುಕುಂ ಸಾಗುವಳಿದಾರರು ಪಟ್ಟಣದ ಅಂಬೇಡ್ಕರ್ ವೃತ್ತದಿಂದ ತಾಲೂಕು ಕಚೇರಿಯವರೆಗೆ ಮೆರವಣಿಗೆ ನಡೆಸಿ ತಹಸೀಲ್ದಾರ್ ರವರಿಗೆ ಮನವಿ ಸಲ್ಲಿಸಿದರು.

ಈ ವೇಳೆ ಕರ್ನಾಟಕ ಭೂ ಹಕ್ಕುದಾರರ ವೇದಿಕೆಯ ಅಧ್ಯಕ್ಷ ಶ್ರೀನಿವಾಸ್ ಮಾತನಾಡಿ, ರೈತರು ಕಳೆದ 30–40 ವರ್ಷಗಳಿಂದ ಜೀವನೋಪಾಯಕ್ಕಾಗಿ ಸರ್ಕಾರಿ ಭೂಮಿಯನ್ನು ನಂಬಿಕೊಂಡು ಸಾಗುವಳಿ ಮಾಡುತ್ತಿದ್ದಾರೆ.

ಭೂಮಿಯ ಹಕ್ಕು ಕೋರಿ ನಮೂನೆ 50, 53 ಮತ್ತು 57 ರ ಅಡಿಯಲ್ಲಿ ಅರ್ಜಿಗಳನ್ನು ಸಲ್ಲಿಸಿದ್ದರೂ, ಸರ್ಕಾರ ವರ್ಷಗಳಿಂದ ಅವುಗಳನ್ನು ಇತ್ಯರ್ಥಪಡಿಸದೆ ನೆನೆಗುದಿಗೆ ಇಟ್ಟಿದೆ. ನಮೂನೆ 57 ರ ಅಡಿಯಲ್ಲಿ ಅರ್ಜಿಗಳನ್ನು ಪಡೆದ ನಂತರ ಸಂಬಂಧಪಟ್ಟ ಇಲಾಖೆಯು ಯಾವುದೇ ಸಭೆಗಳನ್ನು ನಡೆಸುತ್ತಿಲ್ಲ. ಅಧಿಕಾರಿಗಳು ರೈತರ ಪರವಾಗಿ ನಿಲ್ಲುತ್ತಿಲ್ಲ ಎಂದು ಆರೋಪಿಸಿದರು.

ಪ್ರತಿಭಟನಾ ಸ್ಥಳಕ್ಕೆ ಆಗಮಿಸಿ ರೈತರಿಂದ ಮನವಿ ಸ್ವೀಕರಿಸಿದ ತಹಸಿಲ್ದಾರ್ ಅವರು ಮಾತನಾಡಿ, ನಮೂನೆ 53 ರ ಅಡಿಯಲ್ಲಿ ನಿಯಮಾನುಸಾರ ಸಲ್ಲಿಕೆಯಾಗಿರುವ ಅರ್ಜಿಗಳ ಪೈಕಿ ಈಗಾಗಲೇ 37 ಅರ್ಜಿಗಳು ಸಿದ್ಧವಾಗಿವೆ. ಕೇವಲ ಎರಡು ತಿಂಗಳ ಒಳಗಾಗಿ ಇವುಗಳನ್ನು ಸಂಪೂರ್ಣವಾಗಿ ಇತ್ಯರ್ಥಪಡಿಸಲಾಗುವುದು.

ಬಳಿಕ ನಮೂನೆ 57 ರ ಅಡಿಯಲ್ಲಿ ಬಂದಿರುವ ಅರ್ಜಿಗಳನ್ನು ಹಂತ ಹಂತವಾಗಿ ಪರಿಶೀಲಿಸಿ ಪ್ರಕ್ರಿಯೆಯನ್ನು ಮುಗಿಸಲಾಗುವುದು ಎಂದು ಭರವಸೆ ನೀಡಿದರು.

ಅಧಿಕಾರಿಗಳ ಈ ಭರವಸೆಯ ಬಳಿಕ ರೈತರು ಪ್ರತಿಭಟನೆಯನ್ನು ಹಿಂತೆಗೆದುಕೊಂಡರು. ಹೋರಾಟದಲ್ಲಿ ತಾಲೂಕಿನ ನೂರಾರು ಬಗರ್ ಹುಕಂ ಸಾಗುವಳಿದಾರರು ಹಾಗೂ ಕರ್ನಾಟಕ ಭೂ ಹಕ್ಕುದಾರರ ವೇದಿಕೆಯ ಪದಾಧಿಕಾರಿಗಳು ಭಾಗವಹಿಸಿದ್ದರು.

# ಬಂಗಾರಪೇಟೆ: 100 ಕೋಟಿ ವೆಚ್ಚದ ಚತುಷ್ಪಥ ಬೈಪಾಸ್ ರಸ್ತೆ ಯೋಜನೆ

ಬಂಗಾರಪೇಟೆ

ಕೋಲಾರ ಜಿಲ್ಲೆಯ ಬಂಗಾರಪೇಟೆ ನಗರವು ಇತ್ತೀಚಿನ ವರ್ಷಗಳಲ್ಲಿ ವೇಗವಾಗಿ ಬೆಳೆಯುತ್ತಿರುವ ಪ್ರಮುಖ ವಾಣಿಜ್ಯ, ಕೈಗಾರಿಕಾ ಹಾಗೂ ಸಂಚಾರ ಕೇಂದ್ರವಾಗಿ ಹೊರಹೊಮ್ಮುತ್ತಿದೆ. ಬೆಂಗಳೂರು–ಚೆನ್ನೈ ಸಂಪರ್ಕ ಮಾರ್ಗದ ಸಮೀಪದಲ್ಲಿರುವ ಈ ಪ್ರದೇಶವು ಕೋಲಾರ, ಮಾಲೂರು, ಕೆ.ಜಿ.ಎಫ್., ಆಂಧ್ರಪ್ರದೇಶ ಹಾಗೂ ತಮಿಳುನಾಡು ಸಂಪರ್ಕಿಸುವ ಪ್ರಮುಖ ಮಾರ್ಗವಾಗಿರುವುದರಿಂದ ಪ್ರತಿದಿನ ಸಾವಿರಾರು ವಾಹನಗಳ ಸಂಚಾರ ನಡೆಯುತ್ತಿದೆ. ಪರಿಣಾಮವಾಗಿ ನಗರದೊಳಗಿನ ವಾಹನ ದಟ್ಟಣೆ ದಿನೇದಿನೇ ಹೆಚ್ಚುತ್ತಿದ್ದು, ಸಾರ್ವಜನಿಕರು ಗಂಭೀರ ಸಂಚಾರ ಸಮಸ್ಯೆ ಎದುರಿಸುತ್ತಿದ್ದಾರೆ.

ಈ ಸಮಸ್ಯೆಗೆ ಶಾಶ್ವತ ಪರಿಹಾರ ಒದಗಿಸುವ ಉದ್ದೇಶದಿಂದ ಲೋಕೋಪಯೋಗಿ ಇಲಾಖೆಯ ವತಿಯಿಂದ ಸುಮಾರು 100 ಕೋಟಿ ರೂಪಾಯಿ ವೆಚ್ಚದಲ್ಲಿ ರಾಷ್ಟ್ರೀಯ ಹೆದ್ದಾರಿ–05 ರಿಂದ ರಾಷ್ಟ್ರೀಯ ಹೆದ್ದಾರಿ–95ಕ್ಕೆ ಸಂಪರ್ಕ ಕಲ್ಪಿಸುವ 6 ಕಿಲೋಮೀಟರ್ ಉದ್ದದ ಚತುಷ್ಪಥ ಬೈಪಾಸ್ ರಸ್ತೆ ನಿರ್ಮಾಣ ಯೋಜನೆ ಕೈಗೆತ್ತಿಕೊಳ್ಳಲಾಗಿದೆ.

ಈ ಮಹತ್ವಾಕಾಂಕ್ಷಿ ಯೋಜನೆ ಜಾರಿಯಾಗುವಲ್ಲಿ ಎಸ್.ಎನ್. ನಾರಾಯಣಸ್ವಾಮಿ ಅವರ ನಿರಂತರ ಪ್ರಯತ್ನ ಪ್ರಮುಖ ಪಾತ್ರ ವಹಿಸಿದೆ. ಬಂಗಾರಪೇಟೆ ನಗರದ ಸಂಚಾರ ಸಮಸ್ಯೆ, ಭವಿಷ್ಯದ ವಾಹನ ದಟ್ಟಣೆ ಹಾಗೂ ಕೈಗಾರಿಕಾ ಬೆಳವಣಿಗೆಯನ್ನು ಸರ್ಕಾರದ ಗಮನಕ್ಕೆ ತಂದ ಪರಿಣಾಮ



ಯೋಜನೆಗೆ ಅನುಮೋದನೆ ದೊರೆತಿದೆ ಎಂದು ತಿಳಿದುಬಂದಿದೆ.

ಪ್ರಸ್ತುತ ಕೋಲಾರ ಮತ್ತು ಮಾಲೂರು ಭಾಗಗಳಿಂದ ಆಂಧ್ರಪ್ರದೇಶ ಹಾಗೂ ತಮಿಳುನಾಡು ಗಡಿಭಾಗಗಳಿಗೆ ತೆರಳುವ ಬಹುತೇಕ ವಾಹನಗಳು ಬಂಗಾರಪೇಟೆ ನಗರದ ಮಧ್ಯಭಾಗದ ಮೂಲಕವೇ ಸಂಚರಿಸುತ್ತಿವೆ. ದಿನಕ್ಕೆ ಸುಮಾರು 18 ಸಾವಿರದಿಂದ 22 ಸಾವಿರಕ್ಕೂ ಹೆಚ್ಚು ವಾಹನಗಳ ಸಂಚಾರ ದಾಖಲಾಗುತ್ತಿದ್ದು, ನಗರದ ಪ್ರಮುಖ ರಸ್ತೆಗಳು ನಿರಂತರ ಟ್ರಾಫಿಕ್ ಒತ್ತಡಕ್ಕೆ ಒಳಗಾಗುತ್ತಿವೆ.

ವಿಶೇಷವಾಗಿ ಶಾಲಾ–ಕಾಲೇಜು ವಿದ್ಯಾರ್ಥಿಗಳು, ವ್ಯಾಪಾರಸ್ಥರು, ಸಾರ್ವಜನಿಕರು ಹಾಗೂ ಪಾದಚಾರಿಗಳು ಸಂಚಾರದಲ್ಲಿ ತೀವ್ರ ಸಮಸ್ಯೆ ಅನುಭವಿಸುತ್ತಿದ್ದಾರೆ. ಜೊತೆಗೆ ಬಿ.ಇ.ಎಂ.ಎಲ್. ಹಾಗೂ ಬಿ.ಜಿ.ಎಂ.ಎಲ್. ಸಂಸ್ಥೆಗಳಿಗೆ ಸಂಬಂಧಿಸಿದ ವಾಹನಗಳ ಸಂಚಾರವೂ ನಗರದಲ್ಲಿನ ವಾಹನ ದಟ್ಟಣೆಗೆ ಪ್ರಮುಖ ಕಾರಣವಾಗಿದೆ.

ಧಾರ್ಮಿಕ ಕ್ಷೇತ್ರಗಳಾದ ಕೋಟಿಲಿಂಗೇಶ್ವರ ದೇವಸ್ಥಾನ, ಲಕ್ಷ್ಮೀ ವೆಂಕಟರಮಣಸ್ವಾಮಿ ದೇವಸ್ಥಾನ ಹಾಗೂ ಬಂಗಾರು ತಿರುಪತಿ ವೆಂಕಟರಮಣಸ್ವಾಮಿ ದೇವಸ್ಥಾನಗಳಿಗೆ ಆಗಮಿಸುವ ಭಕ್ತರ ವಾಹನ ಸಂಚಾರವೂ ಟ್ರಾಫಿಕ್ ಸಮಸ್ಯೆ ಹೆಚ್ಚುವಂತೆ ಮಾಡುತ್ತಿದೆ.

ಮುಂದಿನ ದಿನಗಳಲ್ಲಿ ಸಾವಿರ ಎಕರೆ ಕೈಗಾರಿಕಾ ಪ್ರದೇಶ ನಿರ್ಮಾಣ ಹಾಗೂ ಬೆಂಗಳೂರು–ಚೆನ್ನೈ ಎಕ್ಸ್‌ಪ್ರೆಸ್ ಹೆದ್ದಾರಿಗೆ ಹೊಂದಿಕೊಂಡಂತೆ ಹೊಸ ಟೌನ್‌ಶಿಪ್ ಅಭಿವೃದ್ಧಿಯಾಗುತ್ತಿರುವ ಹಿನ್ನೆಲೆ ವಾಹನ ಸಂಚಾರ ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಇದೆ. ಈ ಎಲ್ಲಾ ಅಂಶಗಳನ್ನು ಪರಿಗಣಿಸಿ ಕಾರಹಳ್ಳಿ, ಯಳಬುರ್ಗಿ ಹಾಗೂ ನೆರ್ನಹಳ್ಳಿ ಗ್ರಾಮಗಳ ಮಧ್ಯೆ ಹಾದು ಹೋಗುವಂತೆ ಬೈಪಾಸ್ ರಸ್ತೆ ಯೋಜನೆ ರೂಪಿಸಲಾಗಿದೆ.

ಒಟ್ಟು 100 ಕೋಟಿ ರೂಪಾಯಿ ಅಂದಾಜು ವೆಚ್ಚದ ಯೋಜನೆಯಲ್ಲಿ ಸುಮಾರು 48 ಕೋಟಿ ರೂಪಾಯಿ ರಸ್ತೆ ನಿರ್ಮಾಣ ಕಾಮಗಾರಿಗೆ ಹಾಗೂ 52 ಕೋಟಿ ರೂಪಾಯಿ ಭೂಸ್ವಾಧೀನಕ್ಕೆ ಮೀಸಲಿರಿಸಲಾಗಿದೆ. ಬೈಪಾಸ್ ರಸ್ತೆ ನಿರ್ಮಾಣದಿಂದ ನಗರದಲ್ಲಿನ ಟ್ರಾಫಿಕ್ ದಟ್ಟಣೆ ಕಡಿಮೆಯಾಗುವುದರ ಜೊತೆಗೆ ಅಪಘಾತಗಳ ಪ್ರಮಾಣವೂ ಇಳಿಕೆಯಾಗಲಿದ್ದು, ಸಾರ್ವಜನಿಕರಿಗೆ ಸುರಕ್ಷಿತ ಹಾಗೂ ವೇಗವಾದ ಸಂಚಾರ ವ್ಯವಸ್ಥೆ ದೊರೆಯುವ ನಿರೀಕ್ಷೆಯಿದೆ.

ಭಾರತ ಸಾರಥಿ
BHARATHA SARATHI KANNADA DAILY NEWS PAPER
23/05/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ‘ದಾರಿ ತೋರಿಸುವುದು ದೇವರ ಕೆಲಸ, ಗುರಿ ತಲುಪುವುದು ನಮ್ಮ ಕೆಲಸ’

ಚಾಮರಾಜನಗರ

“ದೇವರು ಕಷ್ಟಕೊಡುತ್ತಾನೆ ಜೊತೆಗೆ ಅದನ್ನು ಎದುರಿಸುವ ಶಕ್ತಿಯನ್ನೂ ನೀಡುತ್ತಾನೆ. ದಾರಿ ತೋರಿಸುವುದು ದೇವರ ಕೆಲಸ, ಗುರಿ ತಲುಪಬೇಕಿರುವುದು ನಮ್ಮ ಕೆಲಸ. ದೇವರು ನೀಡುವ ಅವಕಾಶವನ್ನು ಬಳಸಿಕೊಳ್ಳಬೇಕು. ಅವಕಾಶ ಸಿಕ್ಕಾಗ ಕೈಯಿಂದ ದಾನ ಮಾಡಿ” ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ಕೊಳ್ಳೇಗಾಲ ತಾಲ್ಲೂಕಿನ ಶ್ರೀ ಜಗನ್ಮೋಹನ ರಂಗನಾಥಸ್ವಾಮಿ ದೇವಾಲಯ ಜೀರ್ಣೋದ್ಧಾರ ಪೂರಕ ಅಷ್ಟಬಂಧನ ದಿವ್ಯ ಮಹಾ ಕುಂಭಾಭಿಷೇಕ– ಸಂಪ್ರೋಕ್ಷಣ ಮಹೋತ್ಸವದಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್ ಮಾತನಾಡಿದರು.

“ಯಾವುದೇ ದೇವರಿಗೆ ಜಾತಿ, ಧರ್ಮ ಎಂಬುದು ಇರುವುದಿಲ್ಲ. ಧರ್ಮ ಯಾವುದಾದರೂ ತತ್ವವೊಂದೇ, ದೈವ ನೂರಾದರೂ ಭಕ್ತಿಯೊಂದೆ, ಕರ್ಮ ಹಲವಾದೂ ನಿಷ್ಠೆಯೊಂದೇ, ದೇವನೊಬ್ಬ ನಾಮ ಹಲವು. ಕಾವೇರಿ ನದಿ ಹಾಗೂ ರಂಗನಾಥನ ಮಧ್ಯೆ ದರ್ಗಾವಿದೆ. ಇದೇ ಈ ನೆಲದ ಸೌಹಾರ್ಧತೆ” ಎಂದರು.



ಚಾಮರಾಜನಗರ ದೇವರ ನಾಡು

“ಚಾಮರಾಜನಗೆ ಹಿಂದುಳಿದ ಜಿಲ್ಲೆಯಲ್ಲ. ಇದು ದೇವರ ನಾಡು. ಚಾಮರಾಜೇಶ್ವರ, ಬಿಳಿಗಿರಿ ರಂಗನಾಥ, ಹಿಮವದ್ ಗೋಪಾಲಸ್ವಾಮಿ, ಮಲೆ ಮಾದೇಶ್ವರ, ಮಧ್ಯರಂಗ ಹೀಗೆ ದೇವಾಲಯಗಳ ಬೀಡಾಗಿದೆ. ಕಾವೇರಿ ನದಿಯ ತಟದಲ್ಲಿ ರಂಗನಾಥಸ್ವಾಮಿ ನೆಲೆಸಿ ಹರಸುತ್ತಿದ್ದಾನೆ. ಮನುಷ್ಯ ಎಷ್ಟೇ ದೊಡ್ಡವನಾದರೂ ಅವನ ಧರ್ಮ, ಆಚರಣೆಗಳನ್ನು ಬಿಡಲು ಆಗುವುದಿಲ್ಲ ಎಂದು ಹಿರಿಯರು ಮಾರ್ಗದರ್ಶನ ಮಾಡಿದ್ದಾರೆ. ದೇವರ ದೇವ ರಂಗನಾಥನ ಪಾದಗಳಿಗೆ ನನ್ನ ಕುಟುಂಬ ಹಾಗೂ ಎಲ್ಲಾ ಭಕ್ತಾದಿಗಳ ಪರವಾಗಿ ಸಾಷ್ಟಾಂಗ ನಮಸ್ಕಾರ” ಎಂದರು.

“ಇದು ಭಾಗ್ಯ, ಇದು ಭಾಗ್ಯ, ಇದು ಭಾಗ್ಯವಯ್ಯಾ ಪದುಮನಾಭನ ಪಾದ ಭಜನೆ ಪರಮಸುಖವಯ್ಯಾ. ಎಎಂಆರ್ ಗ್ರೂಪಿನ ಮಹೇಶ್ ರೆಡ್ಡಿ ಅವರು ಹಾಗೂ ಕುಟುಂಬ ದೇವಾಲಯದ ಜೀರ್ಣೋದ್ಧಾರ ಮಾಡಿದ್ದಾರೆ. ಲಕ್ಷ್ಮೀ ರಂಗನಾಥಸ್ವಾಮಿಯ ಸೇವೆ ಮಾಡುವ ಭಾಗ್ಯ ಇವರಿಗೆ ಅವಕಾಶ ಸಿಕ್ಕಿದೆ. ಇನ್ನೂ ಹೆಚ್ಚಿನ ಶಕ್ತಿಯನ್ನು ದೇವರು ನೀಡಲಿ ಎಂದು ನಾನು ಪ್ರಾರ್ಥಿಸುತ್ತೇನೆ. ಅರ್ಚಕಸ್ಯ ಪ್ರಭಾವೇನ ಶಿಲಾಭವತಿ ಶಂಕರಃ ಅಂದರೆ ಅರ್ಚಕರ ಪ್ರಭಾವದಿಂದ ಶಿಲೆಯ್ಲಲೂ ಶಿವನನ್ನು ಕಾಣಬಹುದು. ದೇವರು, ದೇವಸ್ಥಾನ ಎಲ್ಲರ ಆಸ್ತಿ” ಎಂದು ತಿಳಿಸಿದರು.

# ಸರ್ಕಾರಿ ಕನ್ನಡ ಮಾಧ್ಯಮ ಶಾಲೆ ಮುಚ್ಚುವ ಪ್ರಯತ್ನ ಖಂಡನೀಯ

ದೊಡ್ಡಬಳ್ಳಾಪುರ

ನಗರದ ಕರೇನಳ್ಳಿಯಲ್ಲಿರುವ ಅನುದಾನಿತ ಮಂಗಳಾ ಶಿಕ್ಷಣ ಸಂಸ್ಥೆಯ ಕನ್ನಡ ಮಾಧ್ಯಮ ಶಾಲೆಯನ್ನು ಮುಚ್ಚುವ ಯತ್ನ ನಡೆಯುತ್ತಿದೆ ಎಂದು ಆರೋಪಿಸಿದ ಕನ್ನಡ ಪಕ್ಷದ ಮುಖಂಡರು, ಯಾವುದೇ ಕಾರಣಕ್ಕೂ ಸರ್ಕಾರಿ ಕನ್ನಡ ಮಾಧ್ಯಮ ಶಾಲೆ ಮುಚ್ಚಲು ಅವಕಾಶ ನೀಡುವುದಿಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ.

ನಗರದ ಪ್ರವಾಸಿ ಮಂದಿರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಡಿ.ಪಿ. ಆಂಜನೇಯ, “ಮಂಗಳಾ ಶಿಕ್ಷಣ ಸಂಸ್ಥೆಯವರು ಇಂಗ್ಲಿಷ್ ಮಾಧ್ಯಮ ಶಾಲೆ ಆರಂಭಿಸುವುದಕ್ಕೆ ನಮ್ಮ ವಿರೋಧವಿಲ್ಲ. ಆದರೆ ಸರ್ಕಾರಿ ಶಾಲೆ ಹೆಸರಿನಲ್ಲಿ ದಾನಿಗಳಿಂದ ಪಡೆದ ಭೂಮಿ, ಸರ್ಕಾರ ಹಾಗೂ ವಿವಿಧ ಸಂಸ್ಥೆಗಳಿಂದ ಪಡೆದ ಅನುದಾನವನ್ನು ಹಿಂದಿರುಗಿಸಿ, ತಮ್ಮ ಸ್ವಂತ ಜಾಗದಲ್ಲಿ ಶಾಲೆ ಆರಂಭಿಸಲಿ” ಎಂದು ಹೇಳಿದರು.

“ಚೆನ್ನಾಗಿ ನಡೆಯುತ್ತಿರುವ ಸರ್ಕಾರಿ ಕನ್ನಡ ಮಾಧ್ಯಮ ಶಾಲೆಯನ್ನು ಮುಚ್ಚುವ ಹುನ್ನಾರ ನಡೆಸಿದರೆ ಕನ್ನಡ ಪಕ್ಷದ ಹೋರಾಟವನ್ನು ಎದುರಿಸಬೇಕಾಗುತ್ತದೆ” ಎಂದು ಅವರು ಎಚ್ಚರಿಕೆ ನೀಡಿದರು.

ಕರೇನಳ್ಳಿಯ ಅನುದಾನಿತ ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಮಾಧ್ಯಮ ಶಾಲೆಯಲ್ಲಿ ಸುಮಾರು 273 ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿದ್ದು, ಇವರು ಬಹುತೇಕ ಕರೇನಳ್ಳಿ, ದರ್ಗಾಜೋಗಿಹಳ್ಳಿ ಹಾಗೂ ಇಸ್ಲಾಂಪುರ ಭಾಗದ ಬಡ, ಹಿಂದುಳಿದ, ದಲಿತ ಹಾಗೂ ಶ್ರಮಿಕ ವರ್ಗದ ಕುಟುಂಬಗಳಿಗೆ ಸೇರಿದವರು ಎಂದು ಹೇಳಿದರು.

ಶಾಲೆಯಲ್ಲಿ ಸರ್ಕಾರದಿಂದ ನೇಮಕಗೊಂಡ ಐವರು ಶಿಕ್ಷಕರು, ಮೂರು ಮಂದಿ ಬಿಸಿಯೂಟ ಸಿಬ್ಬಂದಿ ಹಾಗೂ ಆಡಳಿತ ಮಂಡಳಿ ನೇಮಿಸಿರುವ ನಾಲ್ವರು ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ. ಇಂತಹ ಶಾಲೆಯನ್ನು ಮುಚ್ಚಲು ನಡೆಸುತ್ತಿರುವ ಪ್ರಯತ್ನವನ್ನು ತಕ್ಷಣ ಕೈಬಿಡಬೇಕು ಎಂದು ಆಗ್ರಹಿಸಿದರು.

ಈ ವೇಳೆ ಮಾತನಾಡಿದ ಸಂಜೀವ್ ನಾಯಕ್, “ಸರ್ಕಾರದ ಸವಲತ್ತುಗಳು ಹಾಗೂ ದಾನಿಗಳ ನೆರವಿನಿಂದ ನಡೆಸುತ್ತಿರುವ ಶಾಲೆಯನ್ನು ಇದೀಗ ಅನುದಾನ ರಹಿತ ಇಂಗ್ಲಿಷ್ ಮಾಧ್ಯಮ ಶಾಲೆಯಾಗಿ ಪರಿವರ್ತಿಸಲು ಯತ್ನಿಸಲಾಗುತ್ತಿದೆ. ಈ ಸಂಬಂಧ ಸರ್ಕಾರಿ ಶಿಕ್ಷಕರ ವರ್ಗಾವಣೆಗೆ ಅಧಿಕಾರಿಗಳಿಗೆ ಪತ್ರ ಬರೆಯಲಾಗಿದೆ” ಎಂದು ಆರೋಪಿಸಿದರು.

“2026–27ನೇ ಸಾಲಿನಿಂದ ಕನ್ನಡ ಮಾಧ್ಯಮ ಇರುವುದಿಲ್ಲ ಎಂದು ಹೇಳಿ ವಿದ್ಯಾರ್ಥಿಗಳಿಗೆ ವರ್ಗಾವಣೆ ಪತ್ರ ನೀಡಲು ಮುಂದಾಗಿರುವುದು ಬಡ ವಿದ್ಯಾರ್ಥಿಗಳ ಭವಿಷ್ಯದೊಂದಿಗೆ ಚೆಲ್ಲಾಟವಾಡಿದಂತಾಗಿದೆ. ಮಂಗಳಾ ಶಿಕ್ಷಣ ಸಮಿತಿಯ ವಿರುದ್ಧ ಕಾನೂನು ಕ್ರಮ ಕೈಗೊಂಡು ಆಡಳಿತ ಮಂಡಳಿಯನ್ನು ರದ್ದುಗೊಳಿಸಬೇಕು” ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ವೆಂಕಟೇಶ್, ಮುತ್ತೇಗೌಡ ಸೇರಿದಂತೆ ಕನ್ನಡ ಪಕ್ಷದ ಹಲವು ಪದಾಧಿಕಾರಿಗಳು ಮತ್ತು ಮುಖಂಡರು ಉಪಸ್ಥಿತರಿದ್ದರು.

# ವೇಶ್ಯಾವಾಟಿಕೆ ಅಡ್ಡೆ ಮೇಲೆ ದಾಳಿ



ಕೋಲಾರ

ನಗರದ ಹೊರವಲಯದ ಎಪಿಎಂಸಿ ಸಮೀಪದ ಕೃಷ್ಣ ಲಾಡ್ಜ್‌ನಲ್ಲಿ ಅಕ್ರಮವಾಗಿ ನಡೆಯುತ್ತಿದ್ದ ವೇಶ್ಯಾವಾಟಿಕೆ ಅಡ್ಡೆ ಮೇಲೆ ಕೋಲಾರ ನಗರ ಪೊಲೀಸರು ದಾಳಿ ನಡೆಸಿ ಮೂವರನ್ನು ಬಂಧಿಸಿ, ನಾಲ್ವರು ಮಹಿಳೆಯರನ್ನು ರಕ್ಷಿಸಿದ್ದಾರೆ.

ಬಂಧಿತರನ್ನು ಚಂದ್ರೇಗೌಡ, ನಾಗರಾಜ್ ಹಾಗೂ ಮೊಹಮ್ಮದ್ ಅಶ್ರಫ್ ಎಂದು ಗುರುತಿಸಲಾಗಿದೆ. ಆರೋಪಿಗಳು ಲಾಡ್ಜ್‌ನಲ್ಲಿ ಅಕ್ರಮವಾಗಿ ವೇಶ್ಯಾವಾಟಿಕೆ ನಡೆಸುತ್ತಿದ್ದರು ಎನ್ನಲಾಗಿದೆ. ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿದ ಪೊಲೀಸರು ಸ್ಥಳದಲ್ಲಿದ್ದ ನಾಲ್ವರು ಮಹಿಳೆಯರನ್ನು ರಕ್ಷಣೆಗೊಳಪಡಿಸಿದ್ದು, ಆರೋಪಿಗಳನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.

ಈ ಸಂಬಂಧ ಕೋಲಾರ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರಿದಿದೆ.

ನಗರ ಹಾಗೂ ಹೊರವಲಯ ಪ್ರದೇಶಗಳಲ್ಲಿ ಈ ರೀತಿಯ ಅಕ್ರಮ ಚಟುವಟಿಕೆಗಳು ಪದೇ ಪದೇ ನಡೆಯುತ್ತಿರುವ ಹಿನ್ನೆಲೆಯಲ್ಲಿ ಪೊಲೀಸರು ಕಟ್ಟುನಿಟ್ಟಿನ ನಿಗಾವಹಿಸಿ ಇಂತಹ ಕೃತ್ಯಗಳಿಗೆ ಕಡಿವಾಣ ಹಾಕಬೇಕೆಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

# ‘ರಿಯಲ್ ಎಸ್ಟೇಟ್ ದಂಧೆ ಸರ್ಕಾರದ ಪ್ರಮುಖ ಅಜೆಂಡಾ’

ಬೆಂಗಳೂರು



ರಾಜಧಾನಿಯ ಅಕ್ಕಪಕ್ಕದ ಜಿಲ್ಲೆಗಳಿಗೆ ಬೆಂಗಳೂರು ಹೆಸರು ಅಂಟಿಸಿ ರಿಯಲ್ ಎಸ್ಟೇಟ್ ದಂಧೆ ವಿಸ್ತರಿಸುವುದರಲ್ಲಿ ತೋರಿಸುತ್ತಿರುವ ಆಸಕ್ತಿಯ ಅರ್ಧದಷ್ಟಾದರೂ ಬೆಂಗಳೂರಿನ ಸುರಕ್ಷತೆ, ಕಾನೂನು ಸುವ್ಯವಸ್ಥೆ ಬಗ್ಗೆ ಈ ಕಾಂಗ್ರೆಸ್ ಸರ್ಕಾರಕ್ಕಿದ್ದಿದ್ದರೆ ಇಂದು ಸಿಲಿಕಾನ್ ಸಿಟಿ ಅಪರಾಧಗಳ ನಗರ ಆಗುತ್ತಿರಲಿಲ್ಲ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಬೇಸರ ಹೊರಹಾಕಿದ್ದಾರೆ.

ತಮ ಸಾಮಾಜಿಕ ಜಾಲತಾಣ ಎಕ್ ನಲ್ಲಿ ಪೋಸ್ಟ್ ಮಾಡಿರುವ ಅವರು, ಬೆಂಗಳೂರಿನ ಅಕ್ಕಪಕ್ಕದ ಜಿಲ್ಲೆಗಳಿಗೆ ಬೆಂಗಳೂರು ಹೆಸರು ತಳಕು ಹಾಕಿ, ಜಮೀನಿನ ಬೆಲೆ ಏರಿಸಿ ರಿಯಲ್ ಎಸ್ಟೇಟ್ ಲಾಬಿಯ ಜೇಬು ತುಂಬಿಸುವುದನ್ನೇ ಏಕೈಕ ಅಜೆಂಡಾ ಮಾಡಿಕೊಂಡಿರುವ ಕಾಂಗ್ರೆಸ್ ಸರ್ಕಾರ ಬೆಂಗಳೂರಿನ ಅಭಿವೃದ್ಧಿ, ಕಾನೂನು ಸುವ್ಯವಸ್ಥೆಯನ್ನು ಸಂಪೂರ್ಣವಾಗಿ ನಿರ್ಲಕ್ಷ್ಯ ಮಾಡಿದೆ ಎಂದು ಆರೋಪಿಸಿದ್ದಾರೆ.

ಇದರ ಪರಿಣಾಮವಾಗಿ ನಮ ಹೆಮೆಯ ಸಿಲಿಕಾನ್ ಸಿಟಿ, ಕ್ರೈಮ್ ಸಿಟಿಯಾಗಿ ಮಾರ್ಪಟ್ಟಿದೆ. ಆವಿಷ್ಕಾರದ ರಾಜಧಾನಿ, ಅಪರಾಧಗಳ ರಾಜಧಾನಿಯಾಗಿ ಮಾರ್ಪಟ್ಟಿದೆ ಎಂದು ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

2024ರಲ್ಲಿ ಬೆಂಗಳೂರಿನಲ್ಲಿ 176 ಕೊಲೆ ಪ್ರಕರಣಗಳು ದಾಖಲು. ಮಹಾನಗರಗಳ ಅಪರಾಧ ಪಟ್ಟಿಯಲ್ಲಿ ಬೆಂಗಳೂರು ಟಾಪ್ ನಗರಗಳಲ್ಲಿ ಒಂದಾಗಿದೆ.ಮಹಿಳೆಯರ ಮೇಲಿನ ದೌರ್ಜನ್ಯ 4,748 ಪ್ರಕರಣಗಳು, ಅದರಲ್ಲೂ 16 ಗ್ಯಾಂಗ್ ರೇಪ್ ಪ್ರಕರಣಗಳು ದಾಖಲಾಗಿವೆ. ಇದೇನಾ ಬ್ರ್ಯಾಂಡ್ ಬೆಂಗಳೂರು? ಎಂದು ಪರೋಕ್ಷವಾಗಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಪ್ರಶ್ನಿಸಿದ್ದಾರೆ.

ಒಂದೇ ವರ್ಷದಲ್ಲಿ 17,561 ಸೈಬರ್ ಅಪರಾಧ ಪ್ರಕರಣಗಳು ದಾಖಲಾಗಿವೆ. ಜನರ ಬೆವರಿನ ಹಣವನ್ನು ಸೈಬರ್ ಕಳ್ಳರು ಲೂಟಿ ಮಾಡುತ್ತಿದ್ದಾರೆ. ಗಾಂಜಾ, ಹೆರಾಯಿನ್ ಸೇರಿ 98.69 ಕೋಟಿ ಮೌಲ್ಯದ ಮಾದಕ ವಸ್ತುಗಳು ವಶಪಡಿಸಿಕೊಳ್ಳಲಾಗಿದೆ. ಆದರೆ ಡ್ರಗ್ಸ್ ಮಾಫಿಯಾ ಮಾತ್ರ ನಿರ್ಭಯವಾಗಿ ಓಡಾಡುತ್ತಿದೆ ಎಂದು ಆರೋಪಿಸಿದ್ದಾರೆ.

ಹಿರಿಯರನ್ನು ಗುರಿಯಾಗಿಸಿ 671 ಪ್ರಕರಣಗಳು ದಾಖಲಾಗಿವೆ. ಅಪ್ರಾಪ್ತರ ಅಪರಾಧ ಪ್ರಕರಣಗಳಲ್ಲಿ ಭಾರೀ ಏರಿಕೆಯಾಗಿದೆ. 2022ರಲ್ಲಿ 200 ಇದ್ದ ಪ್ರಕರಣಗಳು 2023ರಲ್ಲಿ 427ಕ್ಕೆ ಏರಿಕೆಯಾಗಿದೆ. 2024ರಲ್ಲಿ ಕೂಡ 386 ಪ್ರಕರಣಗಳು ದಾಖಲಾಗಿವೆ. ಇದೇನಾ ಸಾಧನಾ ಸಮಾವೇಶದ ಸಾಧನೆ? ಇದೇನಾ ನಿಮ ಬ್ರ್ಯಾಂಡ್ ಬೆಂಗಳೂರು? ಎಂದು ತರಾಟೆಗೆ ತೆಗೆದುಕೊಂಡಿದ್ದಾರೆ.

# ವಿವಿಧ ಗ್ರಾಮಗಳಲ್ಲಿ ಕಾಮಗಾರಿಗೆ ಸುರೇಶ್‌ಗೌಡ ಚಾಲನೆ



ತುಮಕೂರು

ತುಮಕೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಊರ್ಡಿಗೆರೆ ಹೋಬಳಿಯ, ಹಿರೇಹಳ್ಳಿ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ವಿವಿಧ ಗ್ರಾಮಗಳಲ್ಲಿ ಮುಖ್ಯಮಂತ್ರಿಗಳ ವಿಶೇಷ ಅನುದಾನದಲ್ಲಿ ಶಾಸಕ ಬಿ. ಸುರೇಶ್‌ಗೌಡರು ರಸ್ತೆ, ಚರಂಡಿ ಕಾಮಗಾರಿಗಳಿಗೆ ಗುರುವಾರ ಭೂಮಿಪೂಜೆ ನೆರವೇರಿಸಿದರು.

ಮಂಚಕಲ್ಲುಕುಪ್ಪೆ, ಕೋಳಿಹಳ್ಳಿ, ಹಿರೇಹಳ್ಳಿ, ದೊಡ್ಡತಿಮ್ಮಯ್ಯನಪಾಳ್ಯ ಗ್ರಾಮಗಳಲ್ಲಿ ಸುಮಾರು 1.15 ಕೋಟಿ ರೂ, ಗಳ ವೆಚ್ಚದ ಅನುದಾನದಲ್ಲಿ ಸಿ.ಸಿ. ರಸ್ತೆ ಹಾಗೂ ಸಿ.ಸಿ. ಚರಂಡಿ ಕಾಮಗಾರಿಗೆ ಚಾಲನೆ ನೀಡಿದರು.

ಕಾಮಗಾರಿಯ ಗುಣಮಟ್ಟ ಕಾಪಾಡಿಕೊಂಡು, ನಿಗಧಿತ ಅವಧಿಯಲ್ಲಿ ರಸ್ತೆ, ಚರಂಡಿ ಕಾಮಗಾರಿ ಪೂರ್ಣಗೊಳಿಸಿ ಗ್ರಾಮಸ್ಥರ ಬಳಕೆಗೆ ಬಿಟ್ಟುಕೊಡಬೇಕು ಎಂದು ಶಾಸಕ ಸುರೇಶ್‌ಗೌಡರು ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಹಿರೇಹಳ್ಳಿ ಗ್ರಾಮ ಪಂಚಾಯ್ತಿಯ ಮಾಜಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರುಗಳು, ಮುಖಂಡರಾದ ದಯಾನಂದ್, ರಾಜೇಶ್, ಮದನ್, ಗೋಪಾಲ್, ರಂಗಸ್ವಾಮಿ, ನರಸಿಂಹರಾಜು, ಭೋಜಣ್ಣ, ಪಾಪಯ್ಯ, ಚೇತನ್, ಮಾರುತಿ, ಮಂಜುನಾಥ್, ಸಂಪತ್, ಮೂಡಲಗಿರಿಯಪ್ಪ, ಶಿಲ್ಪಾ ಮದನ್, ಸಂಗಳಾಪುರ ಸತೀಶ್, ಗ್ರಾಮ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ ಲತಾ, ಕಾರ್ಯದರ್ಶಿ ಕೃಷ್ಣಪ್ಪ ಹಾಜರಿದ್ದರು.

# ಅಂತರ್ ರಾಜ್ಯ ಕಳ್ಳನ ಬಂಧನ



ಕೋಲಾರ

ಬ್ಯಾಂಕ್ ಗ್ರಾಹಕನ ಗಮನ ಬೇರೆಡೆಗೆ ಸೆಳೆದು ರೂ. 1,20,000 ನಗದು ಕಳವು ಮಾಡಿದ್ದ ಅಂತರ್ ರಾಜ್ಯದ ಕಳ್ಳನನ್ನು ಹಿಡಿಯುವಲ್ಲಿ ಕೋಲಾರ ಜಿಲ್ಲಾ ಪೊಲೀಸ್ ವ್ಯಾಪ್ತಿಯ ಗೌನಿಪಲ್ಲಿ ಪೋಲೀಸ್ ಠಾಣೆ ಪೊಲೀಸರು ಯಶಸ್ವಿಯಾಗಿದ್ದಾರೆ.

ಗೌನಿಪಲ್ಲಿ ಗ್ರಾಮದ ಎಸ್‌ಬಿಐ ಬ್ಯಾಂಕ್‌ನಲ್ಲಿ ತಮ್ಮ ತಾಯಿಯ ಒಡವೆಗಳನ್ನು ಅಡವಿಟ್ಟು ರೂ. 1.20,000 ಹಣವನ್ನು ಪಡೆದ ಗ್ರಾಹಕರು ಮನೆಗೆ ಮರಳುತ್ತಿದ್ದ ವೇಳೆ ಅಪರಿಚಿತನೊಬ್ಬ “ರಸ್ತೆಯಲ್ಲಿ ಹಣ ಬಿದ್ದಿದೆ” ಎಂದು ನಂಬಿಸಿ ಅವರ ಗಮನವನ್ನು ಬೇರೆಡೆ ಸೆಳೆದು ದ್ವಿಚಕ್ರವಾಹನದ ಬಾಕ್ಸ್‌ಲ್ಲಿ ಇಟ್ಟಿದ್ದ ನಗದನ್ನು ಕಳವು ಮಾಡಿಕೊಂಡು ಪರಾರಿಯಾಗಿದ್ದ. ಈ ಪ್ರಕರಣವನ್ನು ಗೌನಿಪಲ್ಲಿ ಪೊಲೀಸ್ ಠಾಣೆಯಲ್ಲಿ ದಾಖಲಿಸಲಾಗಿತ್ತು.

ವಿಶೇಷ ಪೊಲೀಸ್ ತಂಡದ ಕಾರ್ಯಾಚರಣೆ ನಡೆಸಿದ ಜಿಲ್ಲಾ ಪೊಲೀಸ್ ಇಲಾಖೆಯು, ಸಾರ್ವಜನಿಕರಲ್ಲಿ ಆತಂಕ ಮೂಡಿಸಿದ್ದ ಈ ಪ್ರಕರಣವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ ಅಂತರ್ ರಾಜ್ಯ ಕಳ್ಳನನ್ನು ಕೊನೆಗೂ ಪತ್ತೆ ಹಚ್ಚಿ ಬಂಧಿಸುವಲ್ಲಿ ಯಶಸ್ವಿಯಾಗಿದೆ. ಬಂಧಿತ ವ್ಯಕ್ತಿ ಜಿ.ಗಿರಿ ಬಿನ್ ಲೇಟ್ ಜಯರಾಮ್(38) ವರ್ಷ ದಾಸರಿ ಜನಾಂಗದವನಾಗಿದ್ದಾನೆ. ಆಂಧ್ರಪ್ರದೇಶದ ಚಿತ್ತೂರು ಜಿಲ್ಲೆಯ ಎಂ.ಜಿ. ಕುಪ್ಪಂ ಗ್ರಾಮದವನೆಂದು ಪೊಲೀಸರು ತಿಳಿಸಿದ್ದಾರೆ.

ಕೋಲಾರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕನ್ನಿಕಾ ಸಿಕ್ರಿವಾಲ್, ಹೆಚ್ಚುವರಿ ಪೊಲೀಸ್ ಅಧೀಕ್ಷಕರುಗಳಾದ ರವಿಶಂಕರ್ ಹಾಗೂ ಜಗದೀಶ್ ರವರ ಮಾರ್ಗದರ್ಶನದಲ್ಲಿ ಕುಮಾರಿ ಮನಿಷಾ ಮುಳಬಾಗಿಲು ಉಪವಿಭಾಗದ ಸಹಾಯಕ ಪೊಲೀಸ್ ಅಧೀಕ್ಷಕರು ಮತ್ತು ಶಿವಕುಮಾರ್ ಸಿ.ಪಿ.ಐ. ಗೌನಿಪಲ್ಲಿ ರವರ ನೇತೃತ್ವದಲ್ಲಿ ವಿಶೇಷ ಪೊಲೀಸ್ ತಂಡವನ್ನು ರಚಿಸಲಾಗಿತ್ತು. ಆಧುನಿಕ ತಂತ್ರಜ್ಞಾನ ಹಾಗೂ ಗುಪ್ತ ಮಾಹಿತಿದಾರರಿಂದ ಬಂದ ಖಚಿತ ಮಾಹಿತಿಯ ಆಧಾರದ ಮೇಲೆ ತಂಡವು ಕಳ್ಳನನ್ನು ಹಿಡಿಯುವಲ್ಲಿ ಸಕ್ಸಸ್ ಕಂಡಿದೆ.

ತಂಡದಲ್ಲಿ ಭಾಗವಹಿಸಿದ್ದ ಪಿ.ಎಸ್.ಐ. ಶಶಿಕಲಾ, ಗೌನಿಪಲ್ಲಿ ಪೊಲೀಸ್ ಠಾಣೆ ಮತ್ತು ಸಿಬ್ಬಂದಿಯವರಾದ ವಿಶ್ವನಾಥ್, ಕೃಷ್ಣಮೂರ್ತಿ ಹಾಗೂ ಜಿಲ್ಲಾ ತಾಂತ್ರಿಕ ವಿಭಾಗದ ಮುರಳಿ ಮತ್ತು ಸಂತೋಷ್ ಹಾಗೂ ಠಾಣಾ ಸಿಬ್ಬಂದಿ ವರ್ಗದವರನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.



ಮಾಲೂರು ತಾಲೂಕಿನ ಮಾಸ್ತಿ ಹೋಬಳಿಯಲ್ಲಿ ಸಂಜೆ ಬಿರುಗಾಳಿ ಸಮೇತ ಮಳೆಯಿಂದಾಗಿ ಮರಗಳು ಬೆಸ್ಕಾಂ ಇಲಾಖೆಯ ವಿದ್ಯುತ್ ಕಂಬಗಳು ತಂತಿಗಳ ಮೇಲೆ ಉರಳಿ ಬಿದ್ದ ಪರಿಣಾಮ, ತಿಪ್ಪಸಂದ್ರ, ಎಂ.ಹೊಸಹಳ್ಳಿ ಕ್ರಾಸ್, ಸೊಣ್ಣಪನಹಟ್ಟಿ, ದೊಡ್ಡಕಲ್ಲಹಳ್ಳಿ, ಹಸಂಡಹಳ್ಳಿ, ಕುಪ್ಪೂರು, ತೊರಲಕ್ಕಿ, ಗೊಲ್ಲಹಳ್ಳಿ, ಬೆಡ್‌ಶೆಟ್ಟಹಳ್ಳಿ ಗ್ರಾಮಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತಯ ಉಂಟಾಗಿದೆ. ವಿದ್ಯುತ್ ಸರಬಾರಜು ಸ್ಥಗಿತಗೊಳಿಸಲಾಗಿದೆ. ಗ್ರಾಮಸ್ಥರು ಸಹಕರಿಸುವಂತೆ ಹೇಳಿದ ಅವರು ಬೆಸ್ಕಾಂನ ಸಿಬ್ಬಂದಿಗಳು ಸ್ಥಳಕ್ಕೆ ಭೇಟಿ ನೀಡಿ ದುರಸ್ತಿಯಲ್ಲಿ ತೊಡಗಿದ್ದಾರೆ ಎಂದು ಬೆಸ್ಕಾಂನ ಸಹಾಯಕ ಕಾರ್ಯ ಪಾಲಕ ಅಭಿಯಂತರ ಆನ್ಸರ್ ಭಾಷಾ ತಿಳಿಸಿದ್ದಾರೆ.

# ಸಾಂಸ್ಕೃತಿಕ ಕಾರ್ಯಕ್ರಮಗಳಿಂದ ವಿದ್ಯಾರ್ಥಿಗಳ ಕ್ರಿಯಾಶೀಲತೆ ವೃದ್ಧಿ

ತಿಪಟೂರು

ವಿದ್ಯಾರ್ಥಿಗಳು ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ಮೂಲಕ ತಮ್ಮ ಪಠ್ಯೇತರ ಕೌಶಲ್ಯಗಳನ್ನು ವೃದ್ಧಿಸಿಕೊಳ್ಳಬೇಕು.

ಕಾಲೇಜು ಹಂತದಿಂದಲೇ ವಿವಿಧ ಸ್ಪರ್ಧೆಗಳಲ್ಲಿ ಪಾಲ್ಗೊಳ್ಳುವ ಮೂಲಕ ಕ್ರಿಯಾಶೀಲತೆಯನ್ನು ಮೈಗೂಡಿಸಿಕೊಳ್ಳಬೇಕು ಎಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ. ಶಶಿಕುಮಾರ್ ಎಚ್.ಸಿ ಸಲಹೆ ನೀಡಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆವರಣದ ರಂಗಮಂದಿರದಲ್ಲಿ ಮಂಗಳವಾರ ಆಯೋಜಿಸಿದ್ದ “ಸಾಂಸ್ಕೃತಿಕ ಸಂಭ್ರಮ 2026” ಸಾಂಪ್ರದಾಯಿಕ ದಿನ ಹಾಗೂ ಜಾನಪದ ಉತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಾರ್ಯಕ್ರಮವನ್ನು ಅದ್ದೂರಿಯಾಗಿ ಆಯೋಜಿಸಿದ ಪ್ರಾಧ್ಯಾಪಕ ವೃಂದಕ್ಕೆ ಹಾಗೂ ವಿವಿಧ ಸ್ಪರ್ಧೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಿದ ವಿದ್ಯಾರ್ಥಿಗಳಿಗೆ ಅವರು ಅಭಿನಂದನೆ ಸಲ್ಲಿಸಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಕನ್ನಡ ವಿಭಾಗದ ಮುಖ್ಯಸ್ಥರಾದ ಸ್ಮಿತಾ ಅವರು, ಜಾನಪದ ಉತ್ಸವದಂತಹ



ಅರ್ಥಪೂರ್ಣ ಕಾರ್ಯಕ್ರಮಕ್ಕೆ ಉದ್ಘಾಟಕರಾಗಿ ಆಯ್ಕೆ ಮಾಡಿರುವುದು ಸಂತಸ ತಂದಿದೆ ಎಂದರು. ಜನಪದ ಸಾಹಿತ್ಯದಲ್ಲಿ ಹೆಣ್ಣಿನ ಸ್ಥಾನಕ್ಕೆ ವಿಶೇಷ ಗೌರವವಿದ್ದು, ಹೆಣ್ಣಿನ ಸೌಂದರ್ಯ, ಪ್ರೀತಿ ಮತ್ತು ಮೌಲ್ಯಗಳನ್ನು ಜನಪದರು ಹಾಡಿ ಹೊಗಳಿದ್ದಾರೆ ಎಂದು ಹೇಳಿದರು.

ಕಾರ್ಯಕ್ರಮ ಆಯೋಜಕರು ಹೆಣ್ಣು ಉದ್ಘಾಟಕೆಯನ್ನು ಆಯ್ಕೆ ಮಾಡಿರುವುದು ಜಾನಪದ ಸಂಸ್ಕೃತಿಗೆ ತಕ್ಕದ್ದಾಗಿದೆ ಎಂದು ಅಭಿಪ್ರಾಯಪಟ್ಟ ಅವರು, ಜ್ಞಾನ ಮತ್ತು ವಿಷಯದ ಅರಿವು ಇದ್ದರೆ ಸಾಕು, ಹೊರಗಿನವರೇ ಶ್ರೇಷ್ಠ ಎಂಬ ಭಾವನೆ ಸರಿಯಲ್ಲ ಎಂದು ತಿಳಿಸಿದರು. ಬಳಿಕ ಜಾನಪದ ಗೀತೆಯೊಂದನ್ನು ಹಾಡುವ ಮೂಲಕ ತಮ್ಮ ಉದ್ಘಾಟನಾ ಭಾಷಣವನ್ನು ಪೂರ್ಣಗೊಳಿಸಿದರು.

ಕಾರ್ಯಕ್ರಮದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳ ಸಂಯೋಜಕರಾದ ಸುಭದ್ರಮ್ಮ ಎಂ., ವಾಣಿಜ್ಯ ಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ಲೆಫ್ಟಿನೆಂಟ್ ಡಾ. ವಿರೂಪಾಕ್ಷ ಜೆ.ಡಿ., ಮನಃಶಾಸ್ತ್ರ ವಿಭಾಗದ ಮುಖ್ಯಸ್ಥ ಬಾಗಪ್ಪ ಛಲವಾದಿ, ಇತಿಹಾಸ ವಿಭಾಗದ ಮುಖ್ಯಸ್ಥ ಶಿವಕುಮಾರ್ ಸಿ.ಜಿ. ಸೇರಿದಂತೆ ವಿವಿಧ ವಿಭಾಗಗಳ ಮುಖ್ಯಸ್ಥರು, ಪ್ರಾಧ್ಯಾಪಕರು, ಅತಿಥಿ ಉಪನ್ಯಾಸಕರು, ಕಾಲೇಜು ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ದ್ವಿತೀಯ ಪಿಯು–2 ಫಲಿತಾಂಶ ಪ್ರಕಟ: ಕ್ರೋಢೀಕೃತ ಫಲಿತಾಂಶವು ಶೇ.92.25ಕ್ಕೆ ಏರಿಕೆ

ಬೆಂಗಳೂರು

ದ್ವಿತೀಯ ಪಿಯುಸಿ ಪರೀಕ್ಷೆ –2ರ ಫಲಿತಾಂಶವನ್ನು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಇಂದು ಪ್ರಕಟಿಸಿದೆ. ರಾಜ್ಯದ ಎರಡೂ ಪರೀಕ್ಷೆಗಳ ಒಟ್ಟು ಯಾಗಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಎಸ್.ಮಧುಬಂಗಾರಪ್ಪ ತಿಳಿಸಿದ್ದಾರೆ.

ಫಲಿತಾಂಶ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ದ್ವಿತೀಯ ಪರೀಕ್ಷೆ–1ರಲ್ಲಿ ಶೇ.86.52ರಷ್ಟು ಫಲಿತಾಂಶ ಬಂದಿತ್ತು. ಕಳೆದ ವರ್ಷದ ಶೇ.85.19 ಫಲಿತಾಂಶಕ್ಕೆ ಹೋಲಿಸಿದರೆ ಇದು ಶೇ.7.06ರಷ್ಟು ಮಹತ್ವದ ಏರಿಕೆಯಾಗಿದೆ. ಇದು ಕರ್ನಾಟಕದ ಇತಿಹಾಸದಲ್ಲೇ ದೊಡ್ಡ ಸಾಧನೆಯಾಗಿದೆ ಎಂದು ಬಣ್ಣಿಸಿದ್ದಾರೆ.

ಈ ವರ್ಷ ದ್ವಿತೀಯ ಪಿಯುಸಿ ಪರೀಕ್ಷೆ –1ರಲ್ಲೇ ರಾಜ್ಯವು ಸಾರ್ವಕಾಲಿಕ ದಾಖಲೆಯ ಫಲಿತಾಂಶ ಸಾಧಿಸಿದ್ದು,ಇದೀಗ ಪರೀಕ್ಷೆ 2ರ ನಂತರ ಈ ದಾಖಲೆಯನ್ನು ಮತ್ತೊಮೆ ಸುಧಾರಿಸಿ ಹೊಸ ಇತಿಹಾಸ ನಿರ್ಮಿಸಿರುವುದು ನಮಗೆ ಹೆಮೆಯ ವಿಷಯವಾಗಿದೆ ಎಂದಿದ್ದಾರೆ.

ದೇಶದಲ್ಲೇ ಈ ಎರಡು ಪರೀಕ್ಷೆಯ ವಿಧಾನವನ್ನು ಕರ್ನಾಟಕ ಸರ್ಕಾರ ಮೊದಲ ಬಾರಿಗೆ ಜಾರಿಗೆ ತಂದಿದೆ. ಇದರಿಂದ ತಮ ಅಂಕಗಳನ್ನು ಹೆಚ್ಚಿಸಿಕೊಳ್ಳಲು ಬಯಸಿದ ವಿದ್ಯಾರ್ಥಿಗಳಿಗೆ ಅನುಕೂಲವಾಗಿದೆ. ಪರೀಕ್ಷೆ 2ರಲ್ಲಿ ಅಂಥ ವಿದ್ಯಾರ್ಥಿಗಳಿಗೆ ಅವಕಾಶ ಕಲ್ಪಿಸಲಾಗಿತ್ತು.

ಎರಡೂ ಪರೀಕ್ಷೆಗಳಲ್ಲಿ ಯಾವುದರಲ್ಲಿ ಗರಿಷ್ಠ ಅಂಕ ಪಡೆದಿರುತ್ತಾರೋ ಅದನ್ನು ಪರಿಗಣಿಸುವುದರಿಂದ ಕೇವಲ ಒಟ್ಟಾರೆ ಉತ್ತೀರ್ಣರಾಗಿರುವ ವಿದ್ಯಾರ್ಥಿಗಳ ಸಂಖ್ಯೆಯಷ್ಟೇ ಹೆಚ್ಚುವುದಲ್ಲ. ಅವರು ಉತ್ತೀರ್ಣಗೊಂಡಿರುವ ಅಂಕಗಳಲ್ಲೂ ಹೆಚ್ಚಳವಾಗಿದೆ ಎಂದು ಅವರು ಹೇಳಿದ್ದಾರೆ.

ಕಲಾ, ವಾಣಿಜ್ಯ ಮತ್ತು ವಿಜ್ಞಾನ ವಿಭಾಗಗಳಲ್ಲೂ ಗಮನಾರ್ಹ ಸಾಧನೆ ದಾಖಲಾಗಿದೆ. ಕಲಾ ವಿಭಾಗದ ಫಲಿತಾಂಶ ಕಳೆದ ವರ್ಷದ ಶೇ.69.47ರಿಂದ ಶೇ.83.31ಕ್ಕೆ, ವಾಣಿಜ್ಯ ವಿಭಾಗದ ಫಲಿತಾಂಶ ಶೇ.87.83ರಿಂದ ಶೇ.92.84ಕ್ಕೆ ಹಾಗೂ ವಿಜ್ಞಾನ ವಿಭಾಗದ ಫಲಿತಾಂಶ ಶೇ.91.88ರಿಂದ ಶೇ.96.01ಕ್ಕೆ ಏರಿಕೆಯಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಈ ಬಾರಿ ವಿಶೇಷ ಸಾಧನೆ ಮಾಡಿದ್ದು, ಶೇ.92.77ರಷ್ಟು ಗ್ರಾಮಾಂತರ ಪ್ರದೇಶದ ಫಲಿತಾಂಶ ದಾಖಲಾಗಿದೆ. ನಗರ ಪ್ರದೇಶದ ಫಲಿತಾಂಶ ಶೇ.92.01ರಷ್ಟಾಗಿದೆ.

ಕಳೆದ ವರ್ಷ ಗ್ರಾಮೀಣ ಭಾಗದ ಫಲಿತಾಂಶ ಶೇ.84.94ರಷ್ಟು ಬಂದಿತ್ತು. ಈ ಬಾರಿ ಗ್ರಾಮೀಣ ವಿದ್ಯಾರ್ಥಿಗಳ ಫಲಿತಾಂಶದಲ್ಲೂ ಸುಧಾರಣೆಯಾಗಿದೆ ಎಂದು ಹೇಳಿದ್ದಾರೆ.

## ಮಳೇ ಅಬ್ಬರ: ಜನತೆ ತತ್ತರ

ಬೆಂಗಳೂರು

ಹವಾಮಾನ ವೈಪರೀತ್ಯದಿಂದಾಗಿ ತಾತ್ಕಾಲಿಕ ವಿದ್ಯುತ್ ವ್ಯತ್ಯಯ ಉಂಟಾಯಿತು. ಅಲ್ಲಲ್ಲಿ ಮರದ ಕೊಂಬೆಗಳು ಉರುಳಿ ಬಿದ್ದವು. ಬೆಳೆಗಳಿಗೆ ಸಣ್ಣಪುಟ್ಟ ಹಾನಿಯಾಗುವ ಸಾಧ್ಯತೆ ಇದೆ ಎಂದು ಐಎಂಡಿ ಎಚ್ಚರಿಸಿದೆ. ನಿವಾಸಿಗಳು ಸಾಧ್ಯವಾದಷ್ಟು ಮನೆಯೊಳಗೆ ಇದ್ದು, ತೀವ್ರ ಮಳೆಯ ಸಮಯದಲ್ಲಿ ಅನಗತ್ಯ ಪ್ರಯಾಣವನ್ನು ತಪ್ಪಿಸುವಂತೆ ಸೂಚನೆ ನೀಡಿದೆ.

ಜನರು ಮರಗಳ ಕೆಳಗೆ ಆಶ್ರಯ ಪಡೆಯಬಾರದು. ಮಿಂಚಿನ ಸಮಯದಲ್ಲಿ ವಿದ್ಯುತ್ ಕಂಬಗಳು ಮತ್ತು ಇತರ ವಸ್ತುಗಳಿಂದ ದೂರವಿರಬೇಕು ಎಂದು ಹವಾಮಾನ ಇಲಾಖೆ ಎಚ್ಚರಿಸಿದೆ. ನಾಗರಿಕರು ಮುನ್ನೆಚ್ಚರಿಕೆಯಾಗಿ ಎಲೆಕ್ಟ್ರಾನಿಕ್ ಉಪಕರಣಗಳನ್ನು ಅನ್‌ಪ್ಲಗ್ ಮಾಡಬೇಕು. ರಸ್ತೆಗಳಲ್ಲಿ ಎಚ್ಚರಿಕೆಯಿಂದ ವಾಹನ ಚಲಾಯಿಸುವಂತೆ ತಿಳಿಸಿದೆ. ಅಗತ್ಯವಿದ್ದರೆ ಕೆರೆಗಳು ಮತ್ತು ತಗ್ಗು ಪ್ರದೇಶಗಳ ಬಳಿ ವಾಸಿಸುವ ಜನರು ಸುರಕ್ಷಿತ ಸ್ಥಳಗಳಿಗೆ ತೆರಳುವಂತೆಯೂ ಸೂಚಿಸಲಾಗಿದೆ.

## ಕೈಕೊಟ್ಟ ನಮ್ಮ ಮೆಟ್ರೋ

ಬೆಂಗಳೂರು

ಸುರಕ್ಷಿತವಾಗಿ ರೈಲುಗಳನ್ನು ಕಾರ್ಯಾಚರಣೆ ಮಾಡಬೇಕಿರುವುದರಿಂದ ವೇಳಾಪಟ್ಟಿಯಲ್ಲಿ ಕೊಂಚ ಏರುಪೇರಾಗಿದೆ. ಪರಿಸ್ಥಿತಿ ತಿಳಿಯಾಗುವವರೆಗೆ ಸಾರ್ವಜನಿಕರು ಮತ್ತು ಪ್ರಯಾಣಿಕರು ಸಿಬ್ಬಂದಿಯೊಂದಿಗೆ ಸಹಕರಿಸಬೇಕಾಗಿ ಕೋರಿದೆ.

## ಅಮೆರಿಕಾ–ಇಸ್ರೇಲ್ ನಡುವೆ ಬಿರುಕು

ಬೆಂಗಳೂರು

ಯುದ್ಧವನ್ನು ಅಧಿಕೃತವಾಗಿ ಕೊನೆಗೊಳಿಸಲು ಮತ್ತು ಇರಾನ್‌ನ ಪರಮಾಣು ಕಾರ್ಯಕ್ರಮ ಹಾಗೂ ಹೊರ್ಮುಜ್ ಜಲಸಂಧಿಯನ್ನು ಮುಕ್ತಗೊಳಿಸುವ ಕುರಿತು 30 ದಿನಗಳ ಕಾಲ ಮಾತುಕತೆ ನಡೆಸಲು ಒಪ್ಪಂದದ ಪತ್ರವೊಂದನ್ನು ಸಿದ್ಧಪಡಿಸುವತ್ತ ಗಮನ ಹರಿಸಿದ್ದಾರೆನ್ನಲಾಗುತ್ತಿದೆ.

ಗಲ್ಫ್ ಭಾಗದ ಮಿತ್ರ ರಾಷ್ಟ್ರಗಳಾದ ಸೌದಿ ಅರೇಬಿಯಾ, ಯುಎಇ ಮತ್ತು ಕತಾರ್ ನೀಡಿದ ರಾಜತಾಂತ್ರಿಕ ಸಲಹೆಗಳ ಮೇರೆಗೆ ಟ್ರಂಪ್ ಅವರು, ಇರಾನ್ ಮೇಲಿನ ನಿಗದಿತ ದಾಳಿಗಳನ್ನು ಸದ್ಯಕ್ಕೆ ಸ್ಥಗಿತಗೊಳಿಸಿದ್ದಾರೆ. ಆದರೆ, ಟ್ರಂಪ್ ಅವರ ಈ ನಿರ್ಧಾರ ಇಸ್ರೇಲ್ ನಾಯಕತ್ವದಲ್ಲಿ ತೀವ್ರ ಅಸಮಾಧಾನ ಮೂಡಿಸಿದೆ ಎನ್ನಲಾಗಿದೆ.

ಇಸ್ರೇಲ್ ಆಡಳಿತದೊಳಗೂ ಇದೇ ಅಭಿಪ್ರಾಯ ಬಲವಾಗಿ ಕೇಳಿಬರುತ್ತಿದ್ದು, ಇರಾನ್ ಮಾತುಕತೆ ಹೆಸರಿನಲ್ಲಿ ಕಾಲಹರಣ ಮಾಡುತ್ತಿದೆ ಎಂಬ ಅನುಮಾನ ಅಲ್ಲಿನ ನಾಯಕರಲ್ಲಿ ಹೆಚ್ಚುತ್ತಿದೆ ಎನ್ನಲಾಗಿದೆ. ಈ ನಡುವೆ ಆಂತರಿಕವಾಗಿ ಭಿನ್ನಾಭಿಪ್ರಾಯಗಳು ತೀವ್ರವಾಗಿದ್ದರೂ, ಟ್ರಂಪ್ ಅವರು ಸಾರ್ವಜನಿಕವಾಗಿ ಇಸ್ರೇಲ್ ಮತ್ತು ಅಮೆರಿಕ ನಡುವೆ ಎಲ್ಲವೂ ಸರಿ

## 23ಕ್ಕೆ ಡಿಸಿಇಟಿ, ಎಂ.ಟೆಕ್ ಪ್ರವೇಶ ಪರೀಕ್ಷೆ

ಬೆಂಗಳೂರು

ಎಂಜಿನಿಯರಿಂಗ್ ಕೋರ್ಸ್ ನ ಮೂರನೇ ಸೆಮಿಸ್ಟರ್ ಅಥವಾ ಎರಡನೇ ವರ್ಷಕ್ಕೆ ಪ್ರವೇಶ ಕಲ್ಪಿಸುವ ಡಿಸಿಇಟಿ ಹಾಗೂ ಎಂ.ಟೆಕ್/ಎಂಇ ಪ್ರವೇಶ ಪರೀಕ್ಷೆಗಳು ಮೇ 23ರಂದು ನಡೆಯಲಿದ್ದು ಸಕಲ ತಯಾರಿ ಮಾಡಿಕೊಳ್ಳಲಾಗಿದೆ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ತಿಳಿಸಿದ್ದಾರೆ.

ಈ ಎರಡೂ ಪರೀಕ್ಷೆಗಳು ಅಂದು ಬೆಂಗಳೂರು, ಬಳ್ಳಾರಿ, ಬಾಗಲಕೋಟೆ, ದಾವಣಗೆರೆ, ಧಾರವಾಡ, ಕಲ್ಬುರ್ಗಿ, ಮೈಸೂರು ಮತ್ತು ತುಮಕೂರು ಕೇಂದ್ರಗಳಲ್ಲಿ ನಡೆಯಲಿವೆ ಎಂದು ಅವರು ವಿವರಿಸಿದ್ದಾರೆ.

ಡಿಸಿಇಟಿ ಪರೀಕ್ಷೆಯನ್ನು 51 ಕೇಂದ್ರಗಳಲ್ಲಿ ಒಟ್ಟು 21,095 ಹಾಗೂ ಎಂ.ಟೆಕ್ ಪರೀಕ್ಷೆಯನ್ನು 26 ಕೇಂದ್ರಗಳಲ್ಲಿ ಒಟ್ಟು 12,116 ಅಭ್ಯರ್ಥಿಗಳು ಬರೆಯುತ್ತಿದ್ದಾರೆ. ಈ ಎರಡೂ ಕೋರ್ಸ್ ಗಳಿಂದ ಒಟ್ಟು 34,211 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದು ಬಿಗಿ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ..

ಇದಲ್ಲದೇ ಹೊರನಾಡು, ಗಡಿನಾಡು ಅಭ್ಯರ್ಥಿಗಳಿಗೆ ಕಡ್ಡಾಯ ಕನ್ನಡ ಪರೀಕ್ಷೆ ಕೂಡ ಬೆಂಗಳೂರಿನಲ್ಲಿ ಅಂದು ನಡೆಯಲಿದೆ ಎಂದು ಅವರು ವಿವರಿಸಿದ್ದಾರೆ.

## ಕೆಇಎ: ನೇಮಕಾತಿಗೆ ಅರ್ಜಿ ಆಹ್ವಾನ

ಬೆಂಗಳೂರು

ಕೃಷಿ ಮಾರಾಟ, ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ಮತ್ತು ಬೆಂಗಳೂರು ಜಲಮಂಡಲಿಯಲ್ಲಿ ಖಾಲಿ ಇರುವ ವಿವಿಧ ರೀತಿಯ ಒಟ್ಟು 37 ಎಂಜಿನಿಯರ್ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಿದ್ದು, ಅರ್ಜಿ ಸಲ್ಲಿಸಲು ಜೂನ್ 4 ಕೊನೆ ದಿನ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ತಿಳಿಸಿದ್ದಾರೆ.

ಪರಿಶಿಷ್ಟ ಜಾತಿಯ ಒಳ ಮೀಸಲಾತಿ ನಿಗದಿ ನಂತರ ಪರೀಕ್ಷೆ ನಡೆಸದೇ ಇರುವ ನೇಮಕಾತಿ ಪ್ರಕ್ರಿಯೆಯನ್ನು ತಡೆ ಹಿಡಿದು, ಮರು ಅಧಿಸೂಚನೆ ಹೊರಡಿಸಲು ಸರ್ಕಾರ ಸೂಚಿಸಿತ್ತು. ಆ ಪ್ರಕಾರ ಸಂಬಂಧಪಟ್ಟ ಇಲಾಖೆಗಳಿಂದ ಒಳ ಮೀಸಲಾತಿ ಅಳವಡಿಸಿಕೊಂಡು ಮರು ಅಧಿಸೂಚನೆ ಹೊರಡಿಸಿದ ನಂತರ ಅರ್ಜಿ ಕರೆದಿದ್ದು, ಈ ಹಿಂದೆ ಅರ್ಜಿ ಸಲ್ಲಿಸಿದವರು ಪುನಃ ಅರ್ಜಿ ಸಲ್ಲಿಸುವ ಅಗತ್ಯ ಇಲ್ಲ ಎಂದು ಅವರು ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಪರಿಶಿಷ್ಟ ಜಾತಿಯ ಎ, ಬಿ ಮತ್ತು ಸಿ ವರ್ಗ ಗಳ ಆರ್ ಡಿ ಸಂಖ್ಯೆ ದಾಖಲು ಮಾಡದವರು ಕೂಡ ಈ ಹಿಂದಿನ ಅರ್ಜಿಯಲ್ಲೇ ಎಡಿಟ್ ಮಾಡಿ, ದಾಖಲಿಸಬಹುದು ಎಂದು ಅವರು ವಿವರಿಸಿದ್ದಾರೆ.

ಹೊಸದಾಗಿ ಅರ್ಜಿ ಸಲ್ಲಿಸುವವರು ಕೂಡ ಅರ್ಜಿ ಸಲ್ಲಿಸಬಹುದು. ಆದರೆ ಈ ಹುದ್ದೆಗಳಿಗೆ ಈ ಮೊದಲು ಅರ್ಜಿ ಸಲ್ಲಿಸಿದ್ದು, ಪುನಃ ಸಲ್ಲಿಸುವ ಅಗತ್ಯ ಇರುವುದಿಲ್ಲ ಎಂದು ಅವರು ತಿಳಿಸಿದರು.

# ‘ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಜವಾಬ್ದಾರಿಯನ್ನು ಪ್ರಧಾನಿಗಳು ಹಾಗೂ ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ್ ಹೊರಬೇಕು’

ಬೆಂಗಳೂರು

ವೈದ್ಯಕೀಯ ಕಾಲೇಜುಗಳಿಗೆ ಪರೀಕ್ಷೆ ನಡೆಸುವ ಸಿ ಇ ಟಿ ವ್ಯವಸ್ಥೆಯನ್ನು ನಡೆಸಲು ರಾಜ್ಯಗಳಿಗೇ ಅವಕಾಶ ನೀಡಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಒತ್ತಾಯಿಸಿದರು.

ಅವರು ಫ್ರೀಡಂ ಪಾರ್ಕ್ ನಲ್ಲಿ ಯುವ ಕಾಂಗ್ರೆಸ್ ಆಯೋಜಿಸಿದ್ದ ನೀಟ್ ಪರೀಕ್ಷಾ ಅಕ್ರಮಗಳ ವಿರುದ್ಧದ ಪ್ರತಿಭಟನೆಯಲ್ಲಿ ಮಾತನಾಡಿದರು.

ನೀಟ್ ಪರೀಕ್ಷೆಯ ಪ್ರಶ್ನೆ ಸೋರಿಕೆಯಾಗಿದ್ದು, ಇದಕ್ಕೆ ಜವಾಬ್ದಾರರಾಗಿರುವ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರಾಗಲಿ ಅಥವಾ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರಾಗಲಿ ಜವಾಬ್ದಾರಿಯನ್ನು ಹೊತ್ತುಕೊಂಡಿಲ್ಲ. ಧರ್ಮೇಂದ್ರ ಪ್ರಧಾನ್ ಅವರು ನೀಟ್ ಪರೀಕ್ಷೆಗೆ ಮತ್ತೊಂದು ದಿನಾಂಕ ನಿಗದಿ ಮಾಡಿ ಕೈ ತೊಳೆದುಕೊಂಡಿದ್ದು , ಈ ಜವಾಬ್ದಾರಿಯನ್ನು ಧರ್ಮೇಂದ್ರ ಪ್ರಧಾನ್ ಹಾಗೂ ಪ್ರಧಾನಿ ನರೇಂದ್ರ ಮೋದಿಯವರು ಹೊರಬೇಕು ಎಂದರು.

ಕರ್ನಾಟಕ ಮತ್ತಿತರೆ ರಾಜ್ಯಗಳಲ್ಲಿ ವೈದ್ಯಕೀಯ ಶಿಕ್ಷಣಕ್ಕೆ ಪ್ರವೇಶ ಬಯಸುವವರಿಗೆ ಸಿಇ ಟಿ ಪರೀಕ್ಷೆ ಪಾರದರ್ಶಕವಾಗಿ ನಡೆಯುತ್ತಿತ್ತು. ನರೇಂದ್ರ ಮೋದಿಯವರು 2014 ರಲ್ಲಿ ಪ್ರಧಾನಿಗಳಾದ ನಂತರ ಹಿಂದೆ ಇದ್ದ ಪದ್ಧತಿಯನ್ನು ಬದಲಾಯಿಸಿ 2016 ರಲ್ಲಿ ನೀಟ್ ಪರೀಕ್ಷೆಯನ್ನು ಜಾರಿಗೆ ತಂದರು. ಹತ್ತು ವರ್ಷಗಳಲ್ಲಿ ಐದು ಬಾರಿ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿದೆ. ನೀಟ್ ಪರೀಕ್ಷೆ ಬರೆಯಲು ವಿದ್ಯಾರ್ಥಿಗಳು ಒಂದು ವರ್ಷದಿಂದ ತಯಾರಿ ಮಾಡಿಕೊಂಡಿರುತ್ತಾರೆ. ಅನೇಕರು ಕೋಚಿಂಗ್ ಸೆಂಟರ್ ಗಳಲ್ಲಿ ತರಬೇತಿ ಪಡೆಯಲು ಸಾವಿರಾರು ರೂ ವೆಚ್ಚ ಮಾಡಿರುತ್ತಾರೆ. ಹಣವಿದ್ದವರು ಕೋಚಿಂಗ್



ಪಡೆಯುತ್ತಾರೆ, ಹಣ ಇಲ್ಲದ ಬಡವರು, ಗ್ರಾಮೀಣ ಪ್ರದೇಶದ ಮಕ್ಕಳು ಕೋಚಿಂಗ್ ಪಡೆಯಲಾಗುವುದಿಲ್ಲ ಎಂದರು.

ಮೋದಿ ಸರ್ಕಾರ ಬಂದ ನಂತರ ಬೇಧಭಾವ ಉಂಟು ಮಾಡುತ್ತಿದ್ದಾರೆ. ಬಡವರು, ದಲಿತರು, ಹಿಂದುಳಿದವರು, ಅಲ್ಪಸಂಖ್ಯಾತರ ಮಕ್ಕಳ ಬಗ್ಗೆ ಅಲಕ್ಷ್ಯ ಮಾಡುತ್ತಿದ್ದಾರೆ ಎನ್ನಲು ಇದು ಸಾಕ್ಷಿ ಎಂದರು.

ಶಿಕ್ಷಣ ಸಮವರ್ತಿ ಪಟ್ಟಿಯಲ್ಲಿರುವ ವಿಷಯ. ಒಕ್ಕೂಟದ ವ್ಯವಸ್ಥೆಯಲ್ಲಿ ಆಯಾ ರಾಜ್ಯಗಳಿಗೆ ಸ್ವಾತಂತ್ರ್ಯ ನೀಡಬೇಕು. ಅದು ಬಿಟ್ಟು ಕೇಂದ್ರೀಕರಿಸುವ ಕೆಲಸ ಮಾಡಬಾರದು ಎಂದರು.

ಕಳೆದ ಬಿಜೆಪಿ ಸರ್ಕಾರದ ಯಡಿಯೂರಪ್ಪ, ಬಸವರಾಜ ಬೊಮ್ಮಾಯಿಯವರ ಅವಧಿಯಲ್ಲಿ ಇಂಜಿನಿಯರ್, ಸಬ್ ಇನ್ಸೆಕ್ಟರ್ ನೇಮಕಾತಿ ಯ ಪರೀಕ್ಷೆಯಲ್ಲಿ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿತ್ತು. ಈ ಸಂಬಂಧ ಎಡಿಜಿಪಿಯಾಗಿದ್ದ ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ಜೈಲಿಗೆ ಹೋಗಿರುವುದು ಕರ್ನಾಟಕದ ಇತಿಹಾಸದಲ್ಲಿ ಎಂದಿಗೂ ನಡೆದಿರಲಿಲ್ಲ. ಕೇಂದ್ರ ಹಾಗೂ ರಾಜ್ಯದಲ್ಲಿ ಬಿಜೆಪಿ ಅಧಿಕಾರದಲ್ಲಿದ್ದಾಗ ಇಂತಹ ಪ್ರಶ್ನೆ ಪತ್ರಿಕೆ ಸೋರಿಕೆಗಳು ಬಹಳಷ್ಟು ನಡೆದಿವೆ. ಇದರ ಹೊಣೆಗಾರಿಕೆಯನ್ನು ಪ್ರಧಾನಿ ಮೋದಿಯವರು ಹೊರಬೇಕಿದೆ. ಆದರೆ ಅವರು ಪ್ರಸ್ತುತ ಇಟಲಿ ದೇಶಕ್ಕೆ ವಿದೇಶ ಪ್ರವಾಸದಲ್ಲಿದ್ದಾರೆ ಎಂದರು.

ದೇಶದ ಜನರಿಗೆ ಚಿನ್ನ ಖರೀದಿಸಬೇಡಿ, ಪೆಟ್ರೋಲ್ ಡೀಸೆಲ್ ಮಿತವ್ಯಯ ಮಾಡಿ, ವಿದೇಶ ಪ್ರವಾಸ ಮಾಡಬೇಡಿ ಎಂದು ಕರೆ ನೀಡಿ, ತಾವು ಮಾತ್ರ ಐದು ದೇಶಗಳ ವಿದೇಶಿ ಪ್ರವಾಸದಲ್ಲಿದ್ದಾರೆ. ದೇಶದಲ್ಲಿ 20 ರಿಂದ 29 ವಯೋಮಾನದ ಯುವಕ ಯುವತಿಯರಲ್ಲಿ ಶೇ. 67 ರಷ್ಟು ಯುವಜನತೆ ನಿರುದ್ಯೋಗಿಗಳಾಗಿದ್ದಾರೆ. ಪ್ರತಿ ವರ್ಷ 2 ಕೋಟಿ ಉದ್ಯೋಗ ಒದಗಿಸುವ ಮೂಲಕ ಕಳೆದ 12 ವರ್ಷಗಳ ಪ್ರಧಾನಿ ಮೋದಿಯವರ ಆಡಳಿತದಲ್ಲಿ 24 ಕೋಟಿ ಉದ್ಯೋಗಗಳು ಸೃಷ್ಟಿಯಾಗಬೇಕಿತ್ತು. ಆದರೆ ಈವರೆಗೆ 2 ಕೋಟಿಯಷ್ಟೂ ಉದ್ಯೋಗವನ್ನು ಕೊಡಲಾಗಲಿಲ್ಲ ಎಂದರು.

ಸಮಾಜದಲ್ಲಿ ಹಿಂದುಮುಸ್ಲಿಂ ನಡುವೆ ದ್ವೇಷ ಹುಟ್ಟುಹಾಕುವ ವ್ಯವಸ್ಥಿತವಾದ ಹುನ್ನಾರವನ್ನು ಬಿಜೆಪಿ, ಆರ್ ಎಸ್ ಎಸ್ ಹಾಗೂ ಎಬಿವಿಪಿ ಮಾಡುತ್ತಿದೆ. ದೇಶದಲ್ಲಿ 2016 ರಿಂದ ಇಲ್ಲಿಯವರೆಗೆ 5 ಬಾರಿ ಪ್ರಶ್ನೆಪತ್ರಿಕೆ ಸೋರಿಕೆಯಾಗಿದೆ. ಆದ್ದರಿಂದ ಕೇಂದ್ರ ಶಿಕ್ಷಣ ಸಚಿವರಾದ ಧರ್ಮೇಂದ್ರ ಪ್ರಧಾನ್ ಅವರು ಕೇವಲ ನೀಟ್ ಪರೀಕ್ಷೆಯನ್ನು ಮುಂದೂಡುವ ಜೊತೆಗೆ, ಪ್ರಕರಣದ ಹೊಣೆಹೊತ್ತು ರಾಜೀನಾಮೆಯನ್ನು ಹೊರಬೇಕು. ಆದರೆ ಬಿಜೆಪಿಯವರು ಭಂಡತನ ಪ್ರದರ್ಶಿಸಿ ರಾಜಿನಾಮೆ ಕೊಡಲು ಮನಸ್ಸು ಮಾಡುತ್ತಿಲ್ಲ. ಕೇಂದ್ರ ಶಿಕ್ಷಣ ಸಚಿವರು ಹೊಣೆಗಾರಿಕೆ ಹೊತ್ತು ರಾಜೀನಾಮೆ ನೀಡುವವರೆಗೂ ಇಲ್ಲಿನ ಹೋರಾಟವನ್ನು ಮುಂದುವರೆಸಬೇಕು ಎಂದರು.

ಸತತ ಪರಿಶ್ರಮ ನೀಡಿದ್ದ ವಿದ್ಯಾರ್ಥಿಗಳು, ನೀಟ್ ಪ್ರಶ್ನೆಪತ್ರಿಕೆ ಸೋರಿಕೆಯ ಪ್ರಕರಣದಿಂದ ಹತಾಶರಾಗಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಆತ್ಮಹತ್ಯೆ ಮಾಡಿಕೊಂಡ ವಿದ್ಯಾರ್ಥಿಗಳ ಕುಟುಂಬಕ್ಕೆ ಪರಿಹಾರ ನೀಡುವುದು ಕೇಂದ್ರ ಸರ್ಕಾರದ ಜವಾಬ್ದಾರಿಯಾಗಿತ್ತು. ಅವರು ರಾಜಿನಾಮೆಯನ್ನು ಕೊಡಬೇಕೆಂದು ಒತ್ತಾಯ ಮಾಡಿದರು. ವಿದ್ಯಾರ್ಥಿಗಳ ಆತ್ಮಹತ್ಯೆಗೆ ಕಾರಣರಾದ ಪ್ರಕರಣದ ರೂವಾರಿಗಳನ್ನು ಕೊಲೆಗಾರರೆಂದು ಪರಿಗಣಿಸಿ ಶಿಕ್ಷೆ ನೀಡಬೇಕು. ಪ್ರಧಾನಿ ಮೋದಿಯವರು ತಮ್ಮ ವಿದೇಶಿ ಪ್ರವಾಸವನ್ನು ಮೊಟಕುಗೊಳಿಸಿ, ನೀಟ್ ಪರೀಕ್ಷೆ ಬರೆದ ಯುವಜನರ ಬೇಷರತ್ ಕ್ಷಮೆ ಯಾಚಿಸಬೇಕು ಎಂದರು.

ಇನ್ನುಮುಂದೆ ಕೇಂದ್ರಸರ್ಕಾರ ನೀಟ್ ಪರೀಕ್ಷೆಗಳನ್ನು ನಡೆಸದೇ, ಈ ಜವಾಬ್ದಾರಿಯನ್ನು ಆಯಾ ರಾಜ್ಯಗಳಿಗೆ ಪರೀಕ್ಷೆ ನಡೆಸುವ ಅಧಿಕಾರವನ್ನು ಕೊಡಬೇಕೆನ್ನುವ ಒತ್ತಾಯ ಮಾಡುವುದಾಗಿ ತಿಳಿಸಿದರು. ಇಂದು ರಾಜೀವ್ ಗಾಂಧಿಯವರ 35 ಪುಣ್ಯತಿಥಿಯಾಗಿದ್ದು, ಅವರ ಆದರ್ಶಗಳನ್ನು ಎಲ್ಲರೂ ಪಾಲನೆ ಮಾಡಬೇಕಿದೆ ಎಂದರು.

ಎ ಐಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ಕನಾಟಕ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲಾ, ಕಾರ್ಯದರ್ಶಿ ಅಭಿಷೇಕ್ ದತ್ತಾ, ರಾಷ್ಟೀಯ ಯುವ ಕಾಂಗ್ರೆಸ್ಸಿನ ಅಧ್ಯಕ್ಷ ಉದಯ ಬಾನು, ರಾಜ್ಯ ಯುವ ಕಾಂಗ್ರೆಸ್ ಅಧ್ಯಕ್ಷ ಮಂಜುನಾಥ್ ಗೌಡ, ಸಚಿವರು, ಶಾಸಕರು, ಉಪಸ್ಥಿತರಿದ್ದರು.

# ಚೆಂಜಿಮಲೆ ಗೌಡನ ಕೆರೆ ಪುನಶ್ಚೇತನ ಕಾಮಗಾರಿಗೆ ಚಾಲನೆ

ಬೆಂಗಳೂರು

ಜಿಲ್ಲೆಯ ವೇಮಗಲ್ ಯೋಜನಾ ಕಚೇರಿ ವ್ಯಾಪ್ತಿಯ ಚಂಜಿಮಲೆ ಗ್ರಾಮದ ಗೌಡನಕೆರೆಯನ್ನು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಹಾಗೂ ಸೀತಿ ಗ್ರಾಮ ಪಂಚಾಯತ್ ಸಹಯೋಗದೊಂದಿಗೆ ‘ನಮ್ಮೂರು ನಮ್ಮ ಕೆರೆ’ ಕಾರ್ಯಕ್ರಮದಡಿ ಅಭಿವೃದ್ಧಿಪಡಿಸುವ ಕಾಮಗಾರಿಗೆ ಧರ್ಮಸ್ಥಳ ಯೋಜನೆಯ ಜಿಲ್ಲಾ ನಿರ್ದೇಶಕ ಶಿವನಂದಾಚಾರ್ಯ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ರಾಜ್ಯದಲ್ಲಿ ಸಾವಿರಕ್ಕೂ ಹೆಚ್ಚು ಕೆರೆಗಳನ್ನು ಅಭಿವೃದ್ಧಿಪಡಿಸಿದ ಕೀರ್ತಿಗೆ ಭಾಜನವಾಗಿದೆ, ಕೆರೆಗಳ ಹೂಳೆತ್ತುವುದು, ಕಟ್ಟೆ ಅಭಿವೃದ್ಧಿಯಿಂದ ಕೆರೆಗಳ ಸಂರಕ್ಷಣೆಗೆ ಯೋಜನೆ ಬದ್ದವಾಗಿದೆ ಎಂದು ತಿಳಿಸಿದರು.

ಕೋಲಾರ ಜಿಲ್ಲೆಯಲ್ಲೂ ನಮ್ಮೂರು ನಮ್ಮ ಕೆರೆ ಕಾರ್ಯಕ್ರಮದಡಿ ಅರಾಭಿಕೊತ್ತನೂರು ಸೇರಿದಂತೆ ಹಲವಾರು ಕೆರೆಗಳನ್ನು ಅಭಿವೃದ್ಧಿಪಡಿಸಲಾಗಿದೆ, ಈಗ ಆ ಕೆರೆಗಳಲ್ಲಿ ನೀರು ಸಂಗ್ರಹವಾಗಿದ್ದು, ಸುತ್ತಮುತ್ತಲ ಪ್ರದೇಶಗಳಲ್ಲಿ ಅಂತರ್ಜಲ ವೃದ್ದಿಗೆ ಸಹಕಾರಿಯಾಗಿದೆ ಎಂದರು.

ಕೆರೆಗಳ ಅಭಿವೃದ್ಧಿಯ ಮೂಲಕ ಕೃಷಿ, ಜನ ಜಾನುವಾರು ಪ್ರಾಣಿಪಕ್ಷಿಗಳ ಬದುಕಿಗೆ ಕೆರೆ ಕಟ್ಟೆಗಳು ಆಧಾರವಾಗಿದೆ ಎಂಬ ಮಹತ್ವದ ಸಂದೇಶವನ್ನು ಜನಸಾಮಾನ್ಯರಿಗೆ ತಲುಪಿಸುವ ಕೆಲಸ ಮಾಡಲಾಗಿದೆ ಎಂದ ಅವರು, ಯೋಜನೆಯ ಇತರೆ ಕಾರ್ಯಕ್ರಮಗಳ ಬಗ್ಗೆ ಸವಿಸ್ತಾರವಾಗಿ ಮಾಹಿತಿ ನೀಡಿದರು.

ಇಂತಹ ಕೆರೆಗಳನ್ನು ಉಳಿಸುವುದು ನಮ್ಮಂತ ಪ್ರಜ್ಞಾವಂತ ನಾಗರಿಕರ ಹೊಣೆಗಾರಿಕೆಯಾಗಿದೆ ಎಂದ ಅವರು, ಧರ್ಮಸ್ಥಳ ಯೋಜನೆಯು ಜಿಲ್ಲೆಯಲ್ಲಿ ಅನೇಕ ಜನಪರ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ನಡೆಸಿಕೊಂಡು ಬಂದಿದೆ ಎಂದರು.

ಅನಾಥರಿಗೆ,ವೃದ್ದರಿಗೆ ಮಾಸಿಕ ವೇತನದ ನೆರವು, ಸೂರಿಲ್ಲದವರಿಗೆ ಸೂರು ಕಲ್ಪಿಸುವ ಪ್ರಯತ್ನ, ಜ್ಞಾನದೀಪಿಗೆಯಡಿ ಶಾಲೆಗಳಿಗೆ ಶಿಕ್ಷಕರ ನೇಮಕ, ಶುದ್ದ ನೀರಿನ ಘಟಕಗಳ ಸ್ಥಾಪನೆ, ದೇವಾಲಯಗಳ ಜೀರ್ಣೋದ್ದಾರಕ್ಕೆ ನೆರವು ಮತ್ತಿತರ ಹಲವಾರು ಕಾರ್ಯಕ್ರಮಗಳನ್ನು ನಡೆಸಿಕೊಂಡು ಬಂದಿರುವುದಾಗಿ ತಿಳಿಸಿದರು.

ಧರ್ಮಸ್ಥಳದ ಪೂಜ್ಯರಾದ ವೀರೇಂದ್ರ ಹೆಗ್ಗಡೆಯವರ ಆಶೀರ್ವಾದದಿಂದ ಕೆರೆಗಳು ಮಾತ್ರವಲ್ಲ ಪರಿಸರವನ್ನು ಉಳಿಸುವ ಕೆಲಸ ಮಾಡುತ್ತಿದ್ದು, ಗಿಡಗಳನ್ನು ನೆಡುವ ಕಾಯಕದಲ್ಲೂ ಮುಂದಿದ್ದೇವೆ ಎಂದು ತಿಳಿಸಿದರು.

ವೇಮಗಲ್ ಪೊಲೀಸ್ ಠಾಣೆಯ ಪಿಎಸ್ಐ ಸುನೀತಾದೇವಿ ಮಾತನಾಡಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಜನಕಲ್ಯಾಣ ಕಾರ್ಯಗಳ ಕುರಿತು ಶ್ಲಾಘಿಸಿ, ಒಂದು ಸರ್ಕಾರದ ರೀತಿ ಜನೋಪಯೋಗಿ ಕೆಲಸಗಳನ್ನು ಮಾಡುತ್ತಿದ್ದು, ಧರ್ಮಸ್ಥಳದ ಮಂಜುನಾಥಸ್ವಾಮಿಯ ಆಶೀರ್ವಾದ ಕೋಲಾರ ಜಿಲ್ಲೆಯ ಜನರಿಗೂ ಲಭಿಸಿದೆ ಎಂದು ತಿಳಿಸಿದರು.

ಕೆರೆಗಳ ಪುನಶ್ಚೇತನ ಸುಲಭದ ಮಾತಲ್ಲ, ಅಂತಹ ಮಹತ್ಕಾರ್ಯಕ್ಕೆ ಕೈಹಾಕಿದ್ದು, ಈಗಾಗಲೇ ಹಲವು ಕೆರೆಗಳ ಅಭಿವೃದ್ದಿಯ ಮೂಲಕ ಸಮಾಜಕ್ಕೆ ತಮ್ಮ ಸಾಧನೆಯನ್ನು ಸಾಕ್ಷೀಕರಿಸಿದ್ದಾರೆ ಎಂದು ತಿಳಿಸಿ ಈ ಕಾಮಗಾರಿ ಶೀಘ್ರ ಮುಗಿಯಲು ಎಂದು ಶುಭ ಹಾರೈಸಿದರು.

# ಕುಡಿಯುವ ನೀರಿನ ಸಮಸ್ಯೆ ಬಗೆಹರಿಸದ ನಗರಸಭೆ ವಿರುದ್ಧ ನಿವಾಸಿಗಳ ಆಕ್ರೋಶ

ಬೆಂಗಳೂರು

ನಗರದ ಹೌಸಿಂಗ್ ಬೋರ್ಡ್ ಬಡಾವಣೆಯಲ್ಲಿ ತೀವ್ರ ಕುಡಿಯುವ ನೀರಿನ ಸಮಸ್ಯೆ ಉಂಟಾಗಿದ್ದರೂ ನಗರಸಭೆ ಅಧಿಕಾರಿಗಳು ಬೇಜವಾಬ್ದಾರಿಯಿಂದ ವರ್ತಿಸುತ್ತಿದ್ದಾರೆ ಎಂದು ಸ್ಥಳೀಯ ನಿವಾಸಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬಡಾವಣೆಯಲ್ಲಿ ಕಳೆದ ಕೆಲವು ದಿನಗಳಿಂದ ನೀರಿನ ಸಮಸ್ಯೆ ಗಂಭೀರ ಸ್ವರೂಪ ಪಡೆದುಕೊಂಡಿದ್ದು, ಇಲ್ಲಿನ ಐದು ಕೊಳವೆ ಬಾವಿಗಳಲ್ಲಿ ಒಂದು ಅಂತರ್ಜಲ ಬತ್ತಿದ್ದು, ಮತ್ತೊಂದರ ಮೋಟರ್ ಸುಟ್ಟಿದೆ. ಇನ್ನೊಂದು ಕೊಳವೆ ಬಾವಿಯ ಕೇಸಿಂಗ್ ತೂತು ಬಿದ್ದ ಪರಿಣಾಮ ಯುಜಿಡಿ ನೀರು ಸೇರಿ ನೀರು ಕಲುಷಿತಗೊಂಡಿದೆ. ಉಳಿದ ಎರಡು ಕೊಳವೆ ಬಾವಿಗಳ ಪೈಕಿ ಒಂದರ ಕೇಬಲ್ ಮೂರು ದಿನಗಳ ಹಿಂದೆ ಸುಟ್ಟಿರುವುದರಿಂದ ಸದ್ಯಕ್ಕೆ ಕೇವಲ ಒಂದು ಕೊಳವೆ ಬಾವಿಯಿಂದಲೇ ಸುಮಾರು 400 ಮನೆಗಳಿಗೆ ನೀರು ಪೂರೈಕೆ ಮಾಡುವ ಪರಿಸ್ಥಿತಿ ನಿರ್ಮಾಣವಾಗಿದೆ.

ಈ ಮೊದಲು ಐದು ಕೊಳವೆ ಬಾವಿಗಳಿಂದ ಸಮರ್ಪಕವಾಗಿ ನೀರು ಪೂರೈಕೆ ಆಗುತ್ತಿತ್ತು. ಆದರೆ ಈಗ ಒಂದೇ ಕೊಳವೆ ಬಾವಿಯಿಂದ ಇಡೀ ಬಡಾವಣೆಗೆ ನೀರು ಒದಗಿಸಲು ಸಾಧ್ಯವಾಗದೆ ನಿವಾಸಿಗಳು ಸಂಕಷ್ಟ ಅನುಭವಿಸುತ್ತಿದ್ದಾರೆ. ಕನಿಷ್ಠ ಮಟ್ಟದಲ್ಲಾದರೂ ಟ್ಯಾಂಕರ್ ಮೂಲಕ ಪ್ರತಿದಿನ



ನೀರು ಪೂರೈಕೆ ಮಾಡಿದರೆ ಸಮಸ್ಯೆ ಸ್ವಲ್ಪ ಮಟ್ಟಿಗೆ ನಿವಾರಣೆಯಾಗಬಹುದು ಎಂದು ನಿವಾಸಿಗಳು ಅಭಿಪ್ರಾಯಪಟ್ಟಿದ್ದಾರೆ.

ಆದರೆ ನಗರಸಭೆ ಅಧಿಕಾರಿಗಳು ಕೆಟ್ಟಿರುವ ಮೋಟರ್ ದುರಸ್ತಿ ಮಾಡಿಸುವುದು, ಸುಟ್ಟಿರುವ ಕೇಬಲ್ ಬದಲಾಯಿಸುವುದು ಹಾಗೂ ಕಲುಷಿತ ನೀರು ಸೇರುತ್ತಿರುವ ಕೊಳವೆ ಬಾವಿಯನ್ನು ಸರಿಪಡಿಸುವುದರಲ್ಲಿ ನಿರ್ಲಕ್ಷ್ಯ ತೋರುತ್ತಿದ್ದಾರೆ ಎಂದು ನಿವಾಸಿಗಳು ಆರೋಪಿಸಿದ್ದಾರೆ.

ನೀರಿಗಾಗಿ ಪರದಾಡುವ ಸ್ಥಿತಿ ನಿರ್ಮಾಣವಾಗಿದ್ದರೂ ಸಂಬಂಧಪಟ್ಟ ಅಧಿಕಾರಿಗಳು ನಮ್ಮ ಸಮಸ್ಯೆಗೆ ಸ್ಪಂದಿಸುತ್ತಿಲ್ಲ. ನಾವು ನಗರಸಭೆ ವ್ಯಾಪ್ತಿಯಲ್ಲಿದ್ದೇವೋ ಇಲ್ಲವೋ ಎಂಬ ಅನುಮಾನ ಮೂಡುತ್ತಿದೆ. ಕನಿಷ್ಠ ಕುಡಿಯುವ ನೀರನ್ನೂ ಸಮರ್ಪಕವಾಗಿ ಪೂರೈಕೆ ಮಾಡದಿದ್ದರೆ ನಗರಸಭೆಯಿಂದ ಇನ್ನೇನು ನಿರೀಕ್ಷಿಸಬೇಕು ಎಂದು ನಿವಾಸಿಗಳು ಪ್ರಶ್ನಿಸಿದ್ದಾರೆ.

ಕೆಟ್ಟಿರುವ ಕೊಳವೆ ಬಾವಿಗಳನ್ನು ತಕ್ಷಣ ಸರಿಪಡಿಸುವಂತೆ ಅಧಿಕಾರಿಗಳಿಗೆ ಹಲವು ಬಾರಿ ಮನವಿ ಮಾಡಿದ್ದರೂ ಯಾವುದೇ ಕ್ರಮ ಕೈಗೊಂಡಿಲ್ಲ. ಮೇಲಾಧಿಕಾರಿಗಳಿಗೆ ದೂರು ನೀಡಲು ನಗರಸಭೆಯಲ್ಲಿ ಮುಖ್ಯಾಧಿಕಾರಿಯೇ ಇಲ್ಲದ ಸ್ಥಿತಿ ಇದೆ. ನಮ್ಮ ಸಮಸ್ಯೆಯನ್ನು ಶೀಘ್ರ ಪರಿಹರಿಸದಿದ್ದರೆ ನಗರಸಭೆಗೆ ಮುತ್ತಿಗೆ ಹಾಕುವ ಹೋರಾಟ ನಡೆಸಬೇಕಾಗುತ್ತದೆ ಎಂದು ನಿವಾಸಿಗಳು ಎಚ್ಚರಿಕೆ ನೀಡಿದ್ದಾರೆ.

## ರಾಜ್ಯಮಟ್ಟದ ಕಂದಾಯ ಸೇವಾ ಪ್ರಶಸ್ತಿ ಪ್ರದಾನ

ಬೆಂಗಳೂರು

ತಾಲೂಕು ದಂಡಾಧಿಕಾರಿ ಹಾಗೂ ಜನಸ್ನೇಹಿ ಅಧಿಕಾರಿ ಎಂದೇ ಗುರುತಿಸಿಕೊಂಡಿರುವ ತಹಸೀಲ್ದಾರ್ ಮೋಹನ್ ಕುಮಾರ್ ಅವರಿಗೆ ಈ ಬಾರಿ ರಾಜ್ಯಮಟ್ಟದ ಪ್ರತಿಷ್ಠಿತ ಕಂದಾಯ ಸೇವಾ ಪ್ರಶಸ್ತಿ ಲಭಿಸಿದೆ.

ತುಮಕೂರಿನಲ್ಲಿ ನಡೆದ ರಾಜ್ಯ ಸರ್ಕಾರದ ಮೂರನೇ ವರ್ಷದ ಸಾಧನಾ ಸಮಾವೇಶದಲ್ಲಿ ಸಾರ್ವಜನಿಕರಿಗೆ ಕಂದಾಯ ಸೇವೆಗಳನ್ನು ಅತ್ಯಂತ ದಕ್ಷತೆಯಿಂದ ಹಾಗೂ ಶೀಘ್ರವಾಗಿ ತಲುಪಿಸಿದ ಹಿನ್ನೆಲೆಯಲ್ಲಿ ಈ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು.

ತಿಪಟೂರು ತಾಲೂಕಿನ ಸಾರ್ವಜನಿಕರಿಗೆ ಕಂದಾಯ ಗ್ರಾಮ ಹಕ್ಕುಪತ್ರ, ಈ–ಸ್ವತ್ತು ನೋಂದಣಿ, ದರಖಾಸ್ತು ಪೋಡಿ, ಪಹಣಿ, ಪಿಂಚಣಿ ಸೇರಿದಂತೆ ವಿವಿಧ ಸೇವೆಗಳನ್ನು ಸಮರ್ಪಕವಾಗಿ ಹಾಗೂ ವೇಗವಾಗಿ ಒದಗಿಸಿದ ಸೇವೆಯನ್ನು ಪರಿಗಣಿಸಿ ರಾಜ್ಯ ಸರ್ಕಾರವು ಮೋಹನ್ ಕುಮಾರ್ ಅವರನ್ನು ರಾಜ್ಯಮಟ್ಟದ ಅತ್ಯುತ್ತಮ ಕಂದಾಯ ಸೇವಾ ಪ್ರಶಸ್ತಿಗೆ ಆಯ್ಕೆ ಮಾಡಿದೆ.

ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಶಸ್ತಿ ಪತ್ರ ಹಾಗೂ ಸ್ಮರಣಿಕೆ ನೀಡಿ ಮೋಹನ್ ಕುಮಾರ್ ಅವರನ್ನು ಸನ್ಮಾನಿಸಿದರು. ತಿಪಟೂರು ತಾಲೂಕಿನಲ್ಲಿ ಸುಮಾರು 4,261 ಫಲಾನುಭವಿಗಳಿಗೆ ಕಂದಾಯ ಗ್ರಾಮ ಹಕ್ಕುಪತ್ರ ವಿತರಣೆ ಸೇರಿದಂತೆ ಹಲವು ಜನಪರ ಸೇವೆಗಳನ್ನು ಯಶಸ್ವಿಯಾಗಿ ಜಾರಿಗೆ ತಂದಿರುವುದು ವಿಶೇಷವಾಗಿದೆ. ಕೇವಲ ಒಂದು ವರ್ಷದ ಹಿಂದೆ ತಾಲೂಕಿಗೆ ವರ್ಗಾವಣೆಯಾಗಿದ್ದರೂ ಸಾರ್ವಜನಿಕರ ವಿಶ್ವಾಸ ಗಳಿಸಿ ಪರಿಣಾಮಕಾರಿ ಆಡಳಿತ ನೀಡಿರುವುದು ಗಮನಾರ್ಹವಾಗಿದೆ.

ತಾಲೂಕಿನಲ್ಲಿ ಇಂತಹ ಸೇವಾ ಮನೋಭಾವದ ಅಧಿಕಾರಿಗೆ ರಾಜ್ಯಮಟ್ಟದ ಗೌರವ ದೊರೆತಿರುವುದು ಸಾರ್ವಜನಿಕರಲ್ಲಿ ಸಂತಸ ಮೂಡಿಸಿದೆ.

ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಗೃಹ ಸಚಿವ ಡಾ. ಜಿ. ಪರಮೇಶ್ವರ್, ಕಂದಾಯ ಸಚಿವ ಕೃಷ್ಣ ಬೈರೇಗೌಡ, ಶಾಸಕ ಕೆ. ಷಡಕ್ಷರಿ, ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಉಪವಿಭಾಗಾಧಿಕಾರಿ ಸಪ್ತಶ್ರೀ ಬಿ.ಕೆ. ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

# ‘ಮಾದಕವಸ್ತುಗಳ ವಿರುದ್ಧ ಎಚ್ಚರಿಕೆವಹಿಸಲು ಸಾರ್ವಜನಿಕರ ಸಹಕಾರ ಅಗತ್ಯ’

ಬೆಂಗಳೂರು

ಅಪರಾಧಗಳನ್ನು ತಡೆಗಟ್ಟುವಲ್ಲಿ ಪೊಲೀಸರಷ್ಟೇ ಅಲ್ಲದೆ ಸಾರ್ವಜನಿಕರ ಸಹಕಾರವೂ ಅತ್ಯಂತ ಮುಖ್ಯವಾಗಿದೆ. ಪ್ರತಿಯೊಬ್ಬ ನಾಗರಿಕ ಕಾನೂನು ಅರಿವು ಹೊಂದಿದ್ದರೆ ಮಾತ್ರ ಸುರಕ್ಷಿತ ಸಮಾಜ ನಿರ್ಮಾಣ ಸಾಧ್ಯ ಎಂದು ಬೂದಿಕೋಟೆ ಪೊಲೀಸ್ ಠಾಣೆಯ ಪಿಎಸ್ಐ ಗುರುರಾಜ್ ಚಿಂತಕಲ್ ಹೇಳಿದರು.

ಬೂದಿಕೋಟೆ ಪೊಲೀಸ್ ಠಾಣೆ ವ್ಯಾಪ್ತಿಯ ಮಾಗೊಂದಿ ಗ್ರಾಮದಲ್ಲಿ ಆಯೋಜಿಸಿದ್ದ ಬೀಟ್ ಸಭೆ ಹಾಗೂ ಕಾನೂನು ಅರಿವು ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಬಾಲ್ಯ ವಿವಾಹ, ಸಂಚಾರ ನಿಯಮಗಳು, ಸೈಬರ್ ಅಪರಾಧಗಳು ಹಾಗೂ ಮಾದಕವಸ್ತು ಬಳಕೆಯಿಂದಾಗುವ ದುಷ್ಪರಿಣಾಮಗಳ ಕುರಿತು ಗ್ರಾಮಸ್ಥರಿಗೆ ಜಾಗೃತಿ ಮೂಡಿಸಿದರು.

ಬಾಲ್ಯ ವಿವಾಹವು ಮಕ್ಕಳ ಹಕ್ಕುಗಳನ್ನು ಕಸಿದುಕೊಳ್ಳುವ ಗಂಭೀರ ಸಾಮಾಜಿಕ ಅಪರಾಧವಾಗಿದ್ದು, ಇದು ಬಾಲಕಿಯರ ಶಿಕ್ಷಣ, ಆರೋಗ್ಯ ಮತ್ತು ಭವಿಷ್ಯದ ಮೇಲೆ ದುಷ್ಪರಿಣಾಮ ಬೀರುತ್ತದೆ. ಇಂತಹ ಘಟನೆಗಳ ಮಾಹಿತಿ ದೊರೆತ ತಕ್ಷಣವೇ ಪೊಲೀಸರಿಗೆ ಅಥವಾ ಸಂಬಂಧಿತ ಅಧಿಕಾರಿಗಳಿಗೆ ತಿಳಿಸಬೇಕು ಎಂದು ಮನವಿ ಮಾಡಿದರು.




ಸಂಚಾರ ನಿಯಮಗಳ ಬಗ್ಗೆ ಮಾತನಾಡಿದ ಅವರು, ಕ್ಷಣಿಕ ನಿರ್ಲಕ್ಷ್ಯವೇ ಜೀವಹಾನಿಗೆ ಕಾರಣವಾಗಬಹುದು ಎಂದು ಎಚ್ಚರಿಸಿದರು. ಹೆಲ್ಮೆಟ್ ಧರಿಸುವುದು, ಸೀಟ್ ಬೆಲ್ಟ್ ಬಳಕೆ ಮಾಡುವುದು, ಮದ್ಯಪಾನ ಮಾಡಿ ವಾಹನ ಚಲಾಯಿಸದಿರುವುದು ಹಾಗೂ ವಾಹನ ಚಾಲನೆಯ ವೇಳೆ ಮೊಬೈಲ್ ಬಳಸದೇ ಇರುವುದು ಪ್ರತಿಯೊಬ್ಬರ ಜವಾಬ್ದಾರಿ ಎಂದು ಹೇಳಿದರು.

ಸೈಬರ್ ಅಪರಾಧಗಳ ಕುರಿತು ವಿಶೇಷ ಎಚ್ಚರಿಕೆ ನೀಡಿದ ಅವರು, ಒಟಿಪಿ, ಬ್ಯಾಂಕ್ ಖಾತೆ ವಿವರಗಳು, ಎಟಿಎಂ ಪಿನ್ ಸೇರಿದಂತೆ ವೈಯಕ್ತಿಕ ಮಾಹಿತಿಯನ್ನು ಯಾರೊಂದಿಗೂ ಹಂಚಿಕೊಳ್ಳಬಾರದು ಎಂದು ತಿಳಿಸಿದರು. ಅಪರಿಚಿತ ಕರೆಗಳು, ನಕಲಿ ಲಿಂಕ್‌ಗಳು ಹಾಗೂ ಆನ್‌ಲೈನ್ ಮೋಸಗಳಿಂದ ಎಚ್ಚರಿಕೆಯಿಂದಿರಬೇಕು ಎಂದು ಸಲಹೆ ನೀಡಿದರು.

ಮಾದಕವಸ್ತುಗಳ ದುಷ್ಪರಿಣಾಮಗಳ ಕುರಿತು ಮಾತನಾಡಿದ ಪಿಎಸ್ಐ ಗುರುರಾಜ್ ಚಿಂತಕಲ್, ಮಾದಕ ವಸ್ತುಗಳು ಯುವಜನತೆಯ ಬದುಕನ್ನೇ ಹಾಳುಮಾಡುವ ಅಪಾಯಕಾರಿ ವ್ಯಸನವಾಗಿದ್ದು, ಕುಟುಂಬದ ಶಾಂತಿ ಹಾಗೂ ಸಮಾಜದ ನೆಮ್ಮದಿಯನ್ನು ಕದಡುತ್ತದೆ ಎಂದು ಹೇಳಿದರು. ಯುವಕರು ದುಶ್ಚಟಗಳಿಂದ ದೂರವಿದ್ದು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಗ್ರಾಮದಲ್ಲಿ ಯಾವುದೇ ಅನುಮಾನಾಸ್ಪದ ಚಟುವಟಿಕೆಗಳು, ಕಾನೂನುಬಾಹಿರ ಕೃತ್ಯಗಳು ಅಥವಾ ಸಾಮಾಜಿಕ ಅಶಾಂತಿಗೆ ಕಾರಣವಾಗುವ ಘಟನೆಗಳು ಕಂಡುಬಂದರೆ ತಕ್ಷಣ ಪೊಲೀಸರಿಗೆ ಮಾಹಿತಿ ನೀಡುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಎಎಸ್ಐ ಶಿವಣ್ಣ, ಪೊಲೀಸ್ ಸಿಬ್ಬಂದಿ ಸುಬ್ರಮಣಿ, ಗ್ರಾಮಸ್ಥರು ಹಾಗೂ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

23/05/2026
# ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ‘ದಾರಿ ತೋರಿಸುವುದು ದೇವರ ಕೆಲಸ, ಗುರಿ ತಲುಪುವುದು ನಮ್ಮ ಕೆಲಸ’

ಚಾಮರಾಜನಗರ

“ದೇವರು ಕಷ್ಟಕೊಡುತ್ತಾನೆ ಜೊತೆಗೆ ಅದನ್ನು ಎದುರಿಸುವ ಶಕ್ತಿಯನ್ನೂ ನೀಡುತ್ತಾನೆ. ದಾರಿ ತೋರಿಸುವುದು ದೇವರ ಕೆಲಸ, ಗುರಿ ತಲುಪಬೇಕಿರುವುದು ನಮ್ಮ ಕೆಲಸ. ದೇವರು ನೀಡುವ ಅವಕಾಶವನ್ನು ಬಳಸಿಕೊಳ್ಳಬೇಕು. ಅವಕಾಶ ಸಿಕ್ಕಾಗ ಕೈಯಿಂದ ದಾನ ಮಾಡಿ” ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ಕೊಳ್ಳೇಗಾಲ ತಾಲ್ಲೂಕಿನ ಶ್ರೀ ಜಗನ್ಮೋಹನ ರಂಗನಾಥಸ್ವಾಮಿ ದೇವಾಲಯ ಜೀರ್ಣೋದ್ಧಾರ ಪೂರಕ ಅಷ್ಟಬಂಧನ ದಿವ್ಯ ಮಹಾ ಕುಂಭಾಭಿಷೇಕ– ಸಂಪ್ರೋಕ್ಷಣ ಮಹೋತ್ಸವದಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್ ಮಾತನಾಡಿದರು.

“ಯಾವುದೇ ದೇವರಿಗೆ ಜಾತಿ, ಧರ್ಮ ಎಂಬುದು ಇರುವುದಿಲ್ಲ. ಧರ್ಮ ಯಾವುದಾದರೂ ತತ್ವವೊಂದೇ, ದೈವ ನೂರಾದರೂ ಭಕ್ತಿಯೊಂದೆ, ಕರ್ಮ ಹಲವಾದೂ ನಿಷ್ಠೆಯೊಂದೇ, ದೇವನೊಬ್ಬ ನಾಮ ಹಲವು. ಕಾವೇರಿ ನದಿ ಹಾಗೂ ರಂಗನಾಥನ ಮಧ್ಯೆ ದರ್ಗಾವಿದೆ. ಇದೇ ಈ ನೆಲದ ಸೌಹಾರ್ದತೆ” ಎಂದರು.



ಚಾಮರಾಜನಗರ ದೇವರ ನಾಡು

“ಚಾಮರಾಜನಗೆ ಹಿಂದುಳಿದ ಜಿಲ್ಲೆಯಲ್ಲ. ಇದು ದೇವರ ನಾಡು. ಚಾಮರಾಜೇಶ್ವರ, ಬಿಳಿಗಿರಿ ರಂಗನಾಥ, ಹಿಮವದ್ ಗೋಪಾಲಸ್ವಾಮಿ, ಮಲೆ ಮಾದೇಶ್ವರ, ಮಧ್ಯರಂಗ ಹೀಗೆ ದೇವಾಲಯಗಳ ಬೀಡಾಗಿದೆ. ಕಾವೇರಿ ನದಿಯ ತಟದಲ್ಲಿ ರಂಗನಾಥಸ್ವಾಮಿ ನೆಲೆಸಿ ಹರಸುತ್ತಿದ್ದಾನೆ. ಮನುಷ್ಯ ಎಷ್ಟೇ ದೊಡ್ಡವನಾದರೂ ಅವನ ಧರ್ಮ, ಆಚರಣೆಗಳನ್ನು ಬಿಡಲು ಆಗುವುದಿಲ್ಲ ಎಂದು ಹಿರಿಯರು ಮಾರ್ಗದರ್ಶನ ಮಾಡಿದ್ದಾರೆ. ದೇವರ ದೇವ ರಂಗನಾಥನ ಪಾದಗಳಿಗೆ ನನ್ನ ಕುಟುಂಬ ಹಾಗೂ ಎಲ್ಲಾ ಭಕ್ತಾಧಿಗಳ ಪರವಾಗಿ ಸಾಷ್ಟಾಂಗ ನಮಸ್ಕಾರ” ಎಂದರು.

“ಇದು ಭಾಗ್ಯ, ಇದು ಭಾಗ್ಯ, ಇದು ಭಾಗ್ಯವಯ್ಯಾ ಪದುಮನಾಭನ ಪಾದ ಭಜನೆ ಪರಮಸುಖವಯ್ಯಾ. ಎಎಂಆರ್ ಗ್ರೂಪಿನ ಮಹೇಶ್ ರೆಡ್ಡಿ ಅವರು ಹಾಗೂ ಕುಟುಂಬ ದೇವಾಲಯದ ಜೀರ್ಣೋದ್ಧಾರ ಮಾಡಿದ್ದಾರೆ. ಲಕ್ಷ್ಮೀ ರಂಗನಾಥಸ್ವಾಮಿಯ ಸೇವೆ ಮಾಡುವ ಭಾಗ್ಯ ಇವರಿಗೆ ಅವಕಾಶ ಸಿಕ್ಕಿದೆ. ಇನ್ನೂ ಹೆಚ್ಚಿನ ಶಕ್ತಿಯನ್ನು ದೇವರು ನೀಡಲಿ ಎಂದು ನಾನು ಪ್ರಾರ್ಥಿಸುತ್ತೇನೆ. ಅರ್ಚಕಸ್ಯ ಪ್ರಭಾವೇನ ಶಿಲಾಭವತಿ ಶಂಕರಃ ಅಂದರೆ ಅರ್ಚಕರ ಪ್ರಭಾವದಿಂದ ಶಿಲೆಯ್ಲಲೂ ಶಿವನನ್ನು ಕಾಣಬಹುದು. ದೇವರು, ದೇವಸ್ಥಾನ ಎಲ್ಲರ ಆಸ್ತಿ” ಎಂದು ತಿಳಿಸಿದರು.

## ಸರ್ಕಾರಿ ಕನ್ನಡ ಮಾಧ್ಯಮ ಶಾಲೆ ಮುಚ್ಚುವ ಪ್ರಯತ್ನ ಖಂಡನೀಯ

ದೊಡ್ಡಬಳ್ಳಾಪುರ

ನಗರದ ಕರೇನಹಳ್ಳಿಯಲ್ಲಿರುವ ಅನುದಾನಿತ ಮಂಗಳಾ ಶಿಕ್ಷಣ ಸಂಸ್ಥೆಯ ಕನ್ನಡ ಮಾಧ್ಯಮ ಶಾಲೆಯನ್ನು ಮುಚ್ಚುವ ಯತ್ನ ನಡೆಯುತ್ತಿದೆ ಎಂದು ಆರೋಪಿಸಿದ ಕನ್ನಡ ಪಕ್ಷದ ಮುಖಂಡರು, ಯಾವುದೇ ಕಾರಣಕ್ಕೂ ಸರ್ಕಾರಿ ಕನ್ನಡ ಮಾಧ್ಯಮ ಶಾಲೆ ಮುಚ್ಚಲು ಅವಕಾಶ ನೀಡುವುದಿಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ.

ನಗರದ ಪ್ರವಾಸಿ ಮಂದಿರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಡಿ.ಪಿ. ಆಂಜನೇಯ, “ಮಂಗಳಾ ಶಿಕ್ಷಣ ಸಂಸ್ಥೆಯವರು ಇಂಗ್ಲಿಷ್ ಮಾಧ್ಯಮ ಶಾಲೆ ಆರಂಭಿಸುವುದಕ್ಕೆ ನಮ್ಮ ವಿರೋಧವಿಲ್ಲ. ಆದರೆ ಸರ್ಕಾರಿ ಶಾಲೆ ಹೆಸರಿನಲ್ಲಿ ದಾನಿಗಳಿಂದ ಪಡೆದ ಭೂಮಿ, ಸರ್ಕಾರ ಹಾಗೂ ವಿವಿಧ ಸಂಸ್ಥೆಗಳಿಂದ ಪಡೆದ ಅನುದಾನವನ್ನು ಹಿಂದಿರುಗಿಸಿ, ತಮ್ಮ ಸ್ವಂತ ಜಾಗದಲ್ಲಿ ಶಾಲೆ ಆರಂಭಿಸಲಿ” ಎಂದು ಹೇಳಿದರು.

“ಚೆನ್ನಾಗಿ ನಡೆಯುತ್ತಿರುವ ಸರ್ಕಾರಿ ಕನ್ನಡ ಮಾಧ್ಯಮ ಶಾಲೆಯನ್ನು ಮುಚ್ಚುವ ಹುನ್ನಾರ ನಡೆಸಿದರೆ ಕನ್ನಡ ಪಕ್ಷದ ಹೋರಾಟವನ್ನು ಎದುರಿಸಬೇಕಾಗುತ್ತದೆ” ಎಂದು ಅವರು ಎಚ್ಚರಿಕೆ ನೀಡಿದರು.

ಕರೇನಹಳ್ಳಿಯ ಅನುದಾನಿತ ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಮಾಧ್ಯಮ ಶಾಲೆಯಲ್ಲಿ ಸುಮಾರು 273 ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿದ್ದು, ಇವರು ಬಹುತೇಕ ಕರೇನಹಳ್ಳಿ, ದರ್ಗಾಜೋಗಿಹಳ್ಳಿ ಹಾಗೂ ಇಸ್ಲಾಂಪುರ ಭಾಗದ ಬಡ, ಹಿಂದುಳಿದ, ದಲಿತ ಹಾಗೂ ಶ್ರಮಿಕ ವರ್ಗದ ಕುಟುಂಬಗಳಿಗೆ ಸೇರಿದವರು ಎಂದು ಹೇಳಿದರು.

ಶಾಲೆಯಲ್ಲಿ ಸರ್ಕಾರದಿಂದ ನೇಮಕಗೊಂಡ ಐವರು ಶಿಕ್ಷಕರು, ಮೂರು ಮಂದಿ ಬಿಸಿಯೂಟ ಸಿಬ್ಬಂದಿ ಹಾಗೂ ಆಡಳಿತ ಮಂಡಳಿ ನೇಮಿಸಿರುವ ನಾಲ್ವರು ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ. ಇಂತಹ ಶಾಲೆಯನ್ನು ಮುಚ್ಚಲು ನಡೆಸುತ್ತಿರುವ ಪ್ರಯತ್ನವನ್ನು ತಕ್ಷಣ ಕೈಬಿಡಬೇಕು ಎಂದು ಆಗ್ರಹಿಸಿದರು.

ಈ ವೇಳೆ ಮಾತನಾಡಿದ ಸಂಜೀವ್ ನಾಯಕ್, “ಸರ್ಕಾರದ ಸವಲತ್ತುಗಳು ಹಾಗೂ ದಾನಿಗಳ ನೆರವಿನಿಂದ ನಡೆಸುತ್ತಿರುವ ಶಾಲೆಯನ್ನು ಇದೀಗ ಅನುದಾನ ರಹಿತ ಇಂಗ್ಲಿಷ್ ಮಾಧ್ಯಮ ಶಾಲೆಯಾಗಿ ಪರಿವರ್ತಿಸಲು ಯತ್ನಿಸಲಾಗುತ್ತಿದೆ. ಈ ಸಂಬಂಧ ಸರ್ಕಾರಿ ಶಿಕ್ಷಕರ ವರ್ಗಾವಣೆಗೆ ಅಧಿಕಾರಿಗಳಿಗೆ ಪತ್ರ ಬರೆಯಲಾಗಿದೆ” ಎಂದು ಆರೋಪಿಸಿದರು.

“2026–27ನೇ ಸಾಲಿನಿಂದ ಕನ್ನಡ ಮಾಧ್ಯಮ ಇರುವುದಿಲ್ಲ ಎಂದು ಹೇಳಿ ವಿದ್ಯಾರ್ಥಿಗಳಿಗೆ ವರ್ಗಾವಣೆ ಪತ್ರ ನೀಡಲು ಮುಂದಾಗಿರುವುದು ಬಡ ವಿದ್ಯಾರ್ಥಿಗಳ ಭವಿಷ್ಯದೊಂದಿಗೆ ಚೆಲ್ಲಾಟವಾಡಿದಂತಾಗಿದೆ. ಮಂಗಳಾ ಶಿಕ್ಷಣ ಸಮಿತಿಯ ವಿರುದ್ಧ ಕಾನೂನು ಕ್ರಮ ಕೈಗೊಂಡು ಆಡಳಿತ ಮಂಡಳಿಯನ್ನು ರದ್ದುಗೊಳಿಸಬೇಕು” ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ವೆಂಕಟೇಶ್, ಮುತ್ತೇಗೌಡ ಸೇರಿದಂತೆ ಕನ್ನಡ ಪಕ್ಷದ ಹಲವು ಪದಾಧಿಕಾರಿಗಳು ಮತ್ತು ಮುಖಂಡರು ಉಪಸ್ಥಿತರಿದ್ದರು.

## ವೇಶ್ಯಾವಾಟಿಕೆ ಅಡ್ಡೆ ಮೇಲೆ ದಾಳಿ



ಕೋಲಾರ

ನಗರದ ಹೊರವಲಯದ ಎಪಿಎಂಸಿ ಸಮೀಪದ ಕೃಷ್ಣ ಲಾಡ್ಜ್‌ನಲ್ಲಿ ಅಕ್ರಮವಾಗಿ ನಡೆಯುತ್ತಿದ್ದ ವೇಶ್ಯಾವಾಟಿಕೆ ಅಡ್ಡೆ ಮೇಲೆ ಕೋಲಾರ ನಗರ ಪೊಲೀಸರು ದಾಳಿ ನಡೆಸಿ ಮೂವರನ್ನು ಬಂಧಿಸಿ, ನಾಲ್ವರು ಮಹಿಳೆಯರನ್ನು ರಕ್ಷಿಸಿದ್ದಾರೆ.

ಬಂಧಿತರನ್ನು ಚಂದ್ರೇಗೌಡ, ನಾಗರಾಜ್ ಹಾಗೂ ಮೊಹಮ್ಮದ್ ಅಶ್ರಫ್ ಎಂದು ಗುರುತಿಸಲಾಗಿದೆ. ಆರೋಪಿಗಳು ಲಾಡ್ಜ್‌ನಲ್ಲಿ ಅಕ್ರಮವಾಗಿ ವೇಶ್ಯಾವಾಟಿಕೆ ನಡೆಸುತ್ತಿದ್ದರು ಎನ್ನಲಾಗಿದೆ. ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿದ ಪೊಲೀಸರು ಸ್ಥಳದಲ್ಲಿದ್ದ ನಾಲ್ವರು ಮಹಿಳೆಯರನ್ನು ರಕ್ಷಣೆಗೊಳಪಡಿಸಿದ್ದು, ಆರೋಪಿಗಳನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.

ಈ ಸಂಬಂಧ ಕೋಲಾರ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರಿದಿದೆ.

ನಗರ ಹಾಗೂ ಹೊರವಲಯ ಪ್ರದೇಶಗಳಲ್ಲಿ ಈ ರೀತಿಯ ಅಕ್ರಮ ಚಟುವಟಿಕೆಗಳು ಪದೇ ಪದೇ ನಡೆಯುತ್ತಿರುವ ಹಿನ್ನೆಲೆಯಲ್ಲಿ ಪೊಲೀಸರು ಕಟ್ಟುನಿಟ್ಟಿನ ನಿಗಾವಹಿಸಿ ಇಂತಹ ಕೃತ್ಯಗಳಿಗೆ ಕಡಿವಾಣ ಹಾಕಬೇಕೆಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

## ‘ರಿಯಲ್ ಎಸ್ಟೇಟ್ ದಂಧೆ ಸರ್ಕಾರದ ಪ್ರಮುಖ ಅಜೆಂಡಾ’

ಬೆಂಗಳೂರು



ರಾಜಧಾನಿಯ ಅಕ್ಕಪಕ್ಕದ ಜಿಲ್ಲೆಗಳಿಗೆ ಬೆಂಗಳೂರು ಹೆಸರು ಅಂಟಿಸಿ ರಿಯಲ್ ಎಸ್ಟೇಟ್ ದಂಧೆ ವಿಸ್ತರಿಸುವುದರಲ್ಲಿ ತೋರಿಸುತ್ತಿರುವ ಆಸಕ್ತಿಯ ಅರ್ಧದಷ್ಟಾದರೂ ಬೆಂಗಳೂರಿನ ಸುರಕ್ಷತೆ, ಕಾನೂನು ಸುವ್ಯವಸ್ಥೆ ಬಗ್ಗೆ ಈ ಕಾಂಗ್ರೆಸ್ ಸರ್ಕಾರಕ್ಕಿದ್ದಿದ್ದರೆ ಇಂದು ಸಿಲಿಕಾನ್ ಸಿಟಿ ಅಪರಾಧಗಳ ನಗರ ಆಗುತ್ತಿರಲಿಲ್ಲ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಬೇಸರ ಹೊರಹಾಕಿದ್ದಾರೆ.

ತಮ ಸಾಮಾಜಿಕ ಜಾಲತಾಣ ಎಕ್ ನಲ್ಲಿ ಪೋಸ್ಟ್ ಮಾಡಿರುವ ಅವರು, ಬೆಂಗಳೂರಿನ ಅಕ್ಕಪಕ್ಕದ ಜಿಲ್ಲೆಗಳಿಗೆ ಬೆಂಗಳೂರು ಹೆಸರು ತಳಕು ಹಾಕಿ, ಜಮೀನಿನ ಬೆಲೆ ಏರಿಸಿ ರಿಯಲ್ ಎಸ್ಟೇಟ್ ಲಾಬಿಯ ಜೇಬು ತುಂಬಿಸುವುದನ್ನೇ ಏಕೈಕ ಅಜೆಂಡಾ ಮಾಡಿಕೊಂಡಿರುವ ಕಾಂಗ್ರೆಸ್ ಸರ್ಕಾರ ಬೆಂಗಳೂರಿನ ಅಭಿವೃದ್ಧಿ, ಕಾನೂನು ಸುವ್ಯವಸ್ಥೆಯನ್ನು ಸಂಪೂರ್ಣವಾಗಿ ನಿರ್ಲಕ್ಷ್ಯ ಮಾಡಿದೆ ಎಂದು ಆರೋಪಿಸಿದ್ದಾರೆ.

ಇದರ ಪರಿಣಾಮವಾಗಿ ನಮ ಹೆಮೆಯ ಸಿಲಿಕಾನ್ ಸಿಟಿ, ಕ್ರೈಮ್ ಸಿಟಿಯಾಗಿ ಮಾರ್ಪಟ್ಟಿದೆ. ಆವಿಷ್ಕಾರದ ರಾಜಧಾನಿ, ಅಪರಾಧಗಳ ರಾಜಧಾನಿಯಾಗಿ ಮಾರ್ಪಟ್ಟಿದೆ ಎಂದು ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

2024ರಲ್ಲಿ ಬೆಂಗಳೂರಿನಲ್ಲಿ 176 ಕೊಲೆ ಪ್ರಕರಣಗಳು ದಾಖಲು. ಮಹಾನಗರಗಳ ಅಪರಾಧ ಪಟ್ಟಿಯಲ್ಲಿ ಬೆಂಗಳೂರು ಟಾಪ್ ನಗರಗಳಲ್ಲಿ ಒಂದಾಗಿದೆ.ಮಹಿಳೆಯರ ಮೇಲಿನ ದೌರ್ಜನ್ಯ 4,748 ಪ್ರಕರಣಗಳು, ಅದರಲ್ಲೂ 16 ಗ್ಯಾಂಗ್ ರೇಪ್ ಪ್ರಕರಣಗಳು ದಾಖಲಾಗಿವೆ. ಇದೇನಾ ಬ್ರ್ಯಾಂಡ್ ಬೆಂಗಳೂರು? ಎಂದು ಪರೋಕ್ಷವಾಗಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಪ್ರಶ್ನಿಸಿದ್ದಾರೆ.

ಒಂದೇ ವರ್ಷದಲ್ಲಿ 17,561 ಸೈಬರ್ ಅಪರಾಧ ಪ್ರಕರಣಗಳು ದಾಖಲಾಗಿವೆ. ಜನರ ಬೆವರಿನ ಹಣವನ್ನು ಸೈಬರ್ ಕಳ್ಳರು ಲೂಟಿ ಮಾಡುತ್ತಿದ್ದಾರೆ. ಗಾಂಜಾ, ಹೆರಾಯಿನ್ ಸೇರಿ 98.69 ಕೋಟಿ ಮೌಲ್ಯದ ಮಾದಕ ವಸ್ತುಗಳು ವಶಪಡಿಸಿಕೊಳ್ಳಲಾಗಿದೆ. ಆದರೆ ಡ್ರಗ್ಸ್ ಮಾಫಿಯಾ ಮಾತ್ರ ನಿರ್ಭಯವಾಗಿ ಓಡಾಡುತ್ತಿದೆ ಎಂದು ಆರೋಪಿಸಿದ್ದಾರೆ.

ಹಿರಿಯರನ್ನು ಗುರಿಯಾಗಿಸಿ 671 ಪ್ರಕರಣಗಳು ದಾಖಲಾಗಿವೆ. ಅಪ್ರಾಪ್ತರ ಅಪರಾಧ ಪ್ರಕರಣಗಳಲ್ಲಿ ಭಾರೀ ಏರಿಕೆಯಾಗಿದೆ. 2022ರಲ್ಲಿ 200 ಇದ್ದ ಪ್ರಕರಣಗಳು 2023ರಲ್ಲಿ 427ಕ್ಕೆ ಏರಿಕೆಯಾಗಿದೆ. 2024ರಲ್ಲಿ ಕೂಡ 386 ಪ್ರಕರಣಗಳು ದಾಖಲಾಗಿವೆ. ಇದೇನಾ ಸಾಧನಾ ಸಮಾವೇಶದ ಸಾಧನೆ? ಇದೇನಾ ನಿಮ ಬ್ರ್ಯಾಂಡ್ ಬೆಂಗಳೂರು? ಎಂದು ತರಾಟೆಗೆ ತೆಗೆದುಕೊಂಡಿದ್ದಾರೆ.

## ವಿವಿಧ ಗ್ರಾಮಗಳಲ್ಲಿ ಕಾಮಗಾರಿಗೆ ಸುರೇಶ್‌ಗೌಡ ಚಾಲನೆ



ತುಮಕೂರು

ತುಮಕೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಊರ್ಡಿಗೆರೆ ಹೋಬಳಿಯ, ಹಿರೇಹಳ್ಳಿ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ವಿವಿಧ ಗ್ರಾಮಗಳಲ್ಲಿ ಮುಖ್ಯಮಂತ್ರಿಗಳ ವಿಶೇಷ ಅನುದಾನದಲ್ಲಿ ಶಾಸಕ ಬಿ. ಸುರೇಶ್‌ಗೌಡರು ರಸ್ತೆ, ಚರಂಡಿ ಕಾಮಗಾರಿಗಳಿಗೆ ಗುರುವಾರ ಭೂಮಿಪೂಜೆ ನೆರವೇರಿಸಿದರು.

ಮಂಚಕಲ್ಲುಕುಪ್ಪೆ, ಕೋಳಿಹಳ್ಳಿ, ಹಿರೇಹಳ್ಳಿ, ದೊಡ್ಡತಿಮ್ಮಯ್ಯನಪಾಳ್ಯ ಗ್ರಾಮಗಳಲ್ಲಿ ಸುಮಾರು 1.15 ಕೋಟಿ ರೂ, ಗಳ ವೆಚ್ಚದ ಅನುದಾನದಲ್ಲಿ ಸಿ.ಸಿ. ರಸ್ತೆ ಹಾಗೂ ಸಿ.ಸಿ. ಚರಂಡಿ ಕಾಮಗಾರಿಗೆ ಚಾಲನೆ ನೀಡಿದರು.

ಕಾಮಗಾರಿಯ ಗುಣಮಟ್ಟ ಕಾಪಾಡಿಕೊಂಡು, ನಿಗಧಿತ ಅವಧಿಯಲ್ಲಿ ರಸ್ತೆ, ಚರಂಡಿ ಕಾಮಗಾರಿ ಪೂರ್ಣಗೊಳಿಸಿ ಗ್ರಾಮಸ್ಥರ ಬಳಕೆಗೆ ಬಿಟ್ಟುಕೊಡಬೇಕು ಎಂದು ಶಾಸಕ ಸುರೇಶ್‌ಗೌಡರು ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಹಿರೇಹಳ್ಳಿ ಗ್ರಾಮ ಪಂಚಾಯ್ತಿಯ ಮಾಜಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರುಗಳು, ಮುಖಂಡರಾದ ದಯಾನಂದ್, ರಾಜೇಶ್, ಮದನ್, ಗೋಪಾಲ್, ರಂಗಸ್ವಾಮಿ, ನರಸಿಂಹರಾಜು, ಭೋಜಣ್ಣ, ಪಾಪಯ್ಯ, ಚೇತನ್, ಮಾರುತಿ, ಮಂಜುನಾಥ್, ಸಂಪತ್, ಮೂಡಲಗಿರಿಯಪ್ಪ, ಶಿಲ್ಪಾ ಮದನ್, ಸಂಗಳಾಪುರ ಸತೀಶ್, ಗ್ರಾಮ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ ಲತಾ, ಕಾರ್ಯದರ್ಶಿ ಕೃಷ್ಣಪ್ಪ ಹಾಜರಿದ್ದರು.

## ಅಂತರ್ ರಾಜ್ಯ ಕಳ್ಳನ ಬಂಧನ



ಕೋಲಾರ

ಬ್ಯಾಂಕ್ ಗ್ರಾಹಕನ ಗಮನ ಬೇರೆಡೆಗೆ ಸೆಳೆದು ರೂ. 1,20,000 ನಗದು ಕಳವು ಮಾಡಿದ್ದ ಅಂತರ್ ರಾಜ್ಯದ ಕಳ್ಳನನ್ನು ಹಿಡಿಯುವಲ್ಲಿ ಕೋಲಾರ ಜಿಲ್ಲಾ ಪೊಲೀಸ್ ವ್ಯಾಪ್ತಿಯ ಗೌನಿಪಲ್ಲಿ ಪೊಲೀಸ್ ಠಾಣೆ ಪೊಲೀಸರು ಯಶಸ್ವಿಯಾಗಿದ್ದಾರೆ.

ಗೌನಿಪಲ್ಲಿ ಗ್ರಾಮದ ಎಸ್‌ಬಿಐ ಬ್ಯಾಂಕ್‌ನಲ್ಲಿ ತಮ್ಮ ತಾಯಿಯ ಒಡವೆಗಳನ್ನು ಅಡವಿಟ್ಟು ರೂ. 1.20,000 ಹಣವನ್ನು ಪಡೆದ ಗ್ರಾಹಕರು ಮನೆಗೆ ಮರಳುತ್ತಿದ್ದ ವೇಳೆ ಅಪರಿಚಿತನೊಬ್ಬ “ರಸ್ತೆಯಲ್ಲಿ ಹಣ ಬಿದ್ದಿದೆ” ಎಂದು ನಂಬಿಸಿ ಅವರ ಗಮನವನ್ನು ಬೇರೆಡೆ ಸೆಳೆದು ದ್ವಿಚಕ್ರವಾಹನದ ಬಾಕ್ಸ್‌ನಲ್ಲಿ ಇಟ್ಟಿದ್ದ ನಗದನ್ನು ಕಳವು ಮಾಡಿಕೊಂಡು ಪರಾರಿಯಾಗಿದ್ದ. ಈ ಪ್ರಕರಣವನ್ನು ಗೌನಿಪಲ್ಲಿ ಪೊಲೀಸ್ ಠಾಣೆಯಲ್ಲಿ ದಾಖಲಿಸಲಾಗಿತ್ತು.

ವಿಶೇಷ ಪೊಲೀಸ್ ತಂಡದ ಕಾರ್ಯಾಚರಣೆ ನಡೆಸಿದ ಜಿಲ್ಲಾ ಪೊಲೀಸ್ ಇಲಾಖೆಯು, ಸಾರ್ವಜನಿಕರಲ್ಲಿ ಆತಂಕ ಮೂಡಿಸಿದ್ದ ಈ ಪ್ರಕರಣವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ ಅಂತರ್ ರಾಜ್ಯ ಕಳ್ಳನನ್ನು ಕೊನೆಗೂ ಪತ್ತೆ ಹಚ್ಚಿ ಬಂಧಿಸುವಲ್ಲಿ ಯಶಸ್ವಿಯಾಗಿದೆ. ಬಂಧಿತ ವ್ಯಕ್ತಿ ಜಿ.ಗಿರಿ ಬಿನ್ ಲೇಟ್ ಜಯರಾಮ್(38) ವರ್ಷ ದಾಸರಿ ಜನಾಂಗದವನಾಗಿದ್ದಾನೆ. ಆಂಧ್ರಪ್ರದೇಶದ ಚಿತ್ತೂರು ಜಿಲ್ಲೆಯ ಎಂ.ಜಿ. ಕುಪ್ಪಂ ಗ್ರಾಮದವನೆಂದು ಪೊಲೀಸರು ತಿಳಿಸಿದ್ದಾರೆ.

ಕೋಲಾರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕನ್ನಿಕಾ ಸಿಕ್ರಿವಾಲ್, ಹೆಚ್ಚುವರಿ ಪೊಲೀಸ್ ಅಧೀಕ್ಷಕರುಗಳಾದ ರವಿಶಂಕರ್ ಹಾಗೂ ಜಗದೀಶ್ ರವರ ಮಾರ್ಗದರ್ಶನದಲ್ಲಿ ಕುಮಾರಿ ಮನಿಷಾ ಮುಳಬಾಗಿಲು ಉಪವಿಭಾಗದ ಸಹಾಯಕ ಪೊಲೀಸ್ ಅಧೀಕ್ಷಕರು ಮತ್ತು ಶಿವಕುಮಾರ್ ಸಿ.ಪಿ.ಐ. ಗೌನಿಪಲ್ಲಿ ರವರ ನೇತೃತ್ವದಲ್ಲಿ ವಿಶೇಷ ಪೊಲೀಸ್ ತಂಡವನ್ನು ರಚಿಸಲಾಗಿತ್ತು. ಆಧುನಿಕ ತಂತ್ರಜ್ಞಾನ ಹಾಗೂ ಗುಪ್ತ ಮಾಹಿತಿದಾರರಿಂದ ಬಂದ ಖಚಿತ ಮಾಹಿತಿಯ ಆಧಾರದ ಮೇಲೆ ತಂಡವು ಕಳ್ಳನನ್ನು ಹಿಡಿಯುವಲ್ಲಿ ಸಕ್ಸಸ್ ಕಂಡಿದೆ.

ತಂಡದಲ್ಲಿ ಭಾಗವಹಿಸಿದ್ದ ಪಿ.ಎಸ್.ಐ. ಶಶಿಕಲಾ, ಗೌನಿಪಲ್ಲಿ ಪೊಲೀಸ್ ಠಾಣೆ ಮತ್ತು ಸಿಬ್ಬಂದಿಯವರಾದ ವಿಶ್ವನಾಥ್, ಕೃಷ್ಣಮೂರ್ತಿ ಹಾಗೂ ಜಿಲ್ಲಾ ತಾಂತ್ರಿಕ ವಿಭಾಗದ ಮುರಳಿ ಮತ್ತು ಸಂತೋಷ್ ಹಾಗೂ ಠಾಣಾ ಸಿಬ್ಬಂದಿ ವರ್ಗದವರನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.



ಮಾಲೂರು ತಾಲೂಕಿನ ಮಾಸ್ತಿ ಹೋಬಳಿಯಲ್ಲಿ ಸಂಜೆ ಬಿರುಗಾಳಿ ಸಮೇತ ಮಳೆಯಿಂದಾಗಿ ಮರಗಳು ಬೆಸ್ಕಾಂ ಇಲಾಖೆಯ ವಿದ್ಯುತ್ ಕಂಬಗಳು ತಂತಿಗಳ ಮೇಲೆ ಉರಳಿ ಬಿದ್ದ ಪರಿಣಾಮ, ತಿಪ್ಪಸಂದ್ರ, ಎಂ.ಹೊಸಹಳ್ಳಿ ಕ್ರಾಸ್, ಸೊಣ್ಣಪನಹಟ್ಟಿ, ದೊಡ್ಡಕಲ್ಲಹಳ್ಳಿ, ಹಸಂಡಹಳ್ಳಿ, ಕುಪ್ಪೂರು, ತೊರಲಕ್ಕಿ, ಗೊಲ್ಲಹಳ್ಳಿ, ಬೆಡ್‌ಶೆಟ್ಟಹಳ್ಳಿ ಗ್ರಾಮಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತಯ ಉಂಟಾಗಿದೆ. ವಿದ್ಯುತ್ ಸರಬಾರಜು ಸ್ಥಗಿತಗೊಳಿಸಲಾಗಿದೆ. ಗ್ರಾಮಸ್ಥರು ಸಹಕರಿಸುವಂತೆ ಹೇಳಿದ ಅವರು ಬೆಸ್ಕಾಂನ ಸಿಬ್ಬಂದಿಗಳು ಸ್ಥಳಕ್ಕೆ ಭೇಟಿ ನೀಡಿ ದುರಸ್ತಿಯಲ್ಲಿ ತೊಡಗಿದ್ದಾರೆ ಎಂದು ಬೆಸ್ಕಾಂನ ಸಹಾಯಕ ಕಾರ್ಯ ಪಾಲಕ ಅಭಿಯಂತರ ಆನ್ಸರ್ ಭಾಷಾ ತಿಳಿಸಿದ್ದಾರೆ.

## ಸಾಂಸ್ಕೃತಿಕ ಕಾರ್ಯಕ್ರಮಗಳಿಂದ ವಿದ್ಯಾರ್ಥಿಗಳ ಕ್ರಿಯಾಶೀಲತೆ ವೃದ್ಧಿ

ತಿಪಟೂರು

ವಿದ್ಯಾರ್ಥಿಗಳು ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ಮೂಲಕ ತಮ್ಮ ಪಠ್ಯೇತರ ಕೌಶಲ್ಯಗಳನ್ನು ವೃದ್ಧಿಸಿಕೊಳ್ಳಬೇಕು.

ಕಾಲೇಜು ಹಂತದಿಂದಲೇ ವಿವಿಧ ಸ್ಪರ್ಧೆಗಳಲ್ಲಿ ಪಾಲ್ಗೊಳ್ಳುವ ಮೂಲಕ ಕ್ರಿಯಾಶೀಲತೆಯನ್ನು ಮೈಗೂಡಿಸಿಕೊಳ್ಳಬೇಕು ಎಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ. ಶಶಿಕುಮಾರ್ ಎಚ್.ಸಿ ಸಲಹೆ ನೀಡಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆವರಣದ ರಂಗಮಂದಿರದಲ್ಲಿ ಮಂಗಳವಾರ ಆಯೋಜಿಸಿದ್ದ “ಸಾಂಸ್ಕೃತಿಕ ಸಂಭ್ರಮ 2026” ಸಾಂಪ್ರದಾಯಿಕ ದಿನ ಹಾಗೂ ಜಾನಪದ ಉತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಾರ್ಯಕ್ರಮವನ್ನು ಅದ್ದೂರಿಯಾಗಿ ಆಯೋಜಿಸಿದ ಪ್ರಾಧ್ಯಾಪಕ ವೃಂದಕ್ಕೆ ಹಾಗೂ ವಿವಿಧ ಸ್ಪರ್ಧೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಿದ ವಿದ್ಯಾರ್ಥಿಗಳಿಗೆ ಅವರು ಅಭಿನಂದನೆ ಸಲ್ಲಿಸಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಕನ್ನಡ ವಿಭಾಗದ ಮುಖ್ಯಸ್ಥರಾದ ಸ್ಮಿತಾ ಅವರು, ಜಾನಪದ ಉತ್ಸವದಂತಹ ಅರ್ಥಪೂರ್ಣ ಕಾರ್ಯಕ್ರಮಕ್ಕೆ ಉದ್ಘಾಟಕರಾಗಿ ಆಯ್ಕೆ ಮಾಡಿರುವುದು ಸಂತಸ ತಂದಿದೆ ಎಂದರು. ಜನಪದ ಸಾಹಿತ್ಯದಲ್ಲಿ ಹೆಣ್ಣಿನ ಸ್ಥಾನಕ್ಕೆ ವಿಶೇಷ ಗೌರವವಿದ್ದು, ಹೆಣ್ಣಿನ ಸೌಂದರ್ಯ, ಪ್ರೀತಿ ಮತ್ತು ಮೌಲ್ಯಗಳನ್ನು ಜನಪದರು ಹಾಡಿ ಹೊಗಳಿದ್ದಾರೆ ಎಂದು ಹೇಳಿದರು.



ಕಾರ್ಯಕ್ರಮ ಆಯೋಜಕರು ಹೆಣ್ಣು ಉದ್ಘಾಟಕೆಯನ್ನು ಆಯ್ಕೆ ಮಾಡಿರುವುದು ಜಾನಪದ ಸಂಸ್ಕೃತಿಗೆ ತಕ್ಕದ್ದಾಗಿದೆ ಎಂದು ಅಭಿಪ್ರಾಯಪಟ್ಟ ಅವರು, ಜ್ಞಾನ ಮತ್ತು ವಿಷಯದ ಅರಿವು ಇದ್ದರೆ ಸಾಕು, ಹೊರಗಿನವರೇ ಶ್ರೇಷ್ಠ ಎಂಬ ಭಾವನೆ ಸರಿಯಲ್ಲ ಎಂದು ತಿಳಿಸಿದರು. ಬಳಿಕ ಜಾನಪದ ಗೀತೆಯೊಂದನ್ನು ಹಾಡುವ ಮೂಲಕ ತಮ್ಮ ಉದ್ಘಾಟನಾ ಭಾಷಣವನ್ನು ಪೂರ್ಣಗೊಳಿಸಿದರು.

ಕಾರ್ಯಕ್ರಮದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳ ಸಂಯೋಜಕರಾದ ಸುಭದ್ರಮ್ಮ ಎಂ., ವಾಣಿಜ್ಯ ಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ಲೆಫ್ಟಿನೆಂಟ್ ಡಾ. ವಿರೂಪಾಕ್ಷ ಜೆ.ಡಿ., ಮನಃಶಾಸ್ತ್ರ ವಿಭಾಗದ ಮುಖ್ಯಸ್ಥ ಬಾಗಪ್ಪ ಛಲವಾದಿ, ಇತಿಹಾಸ ವಿಭಾಗದ ಮುಖ್ಯಸ್ಥ ಶಿವಕುಮಾರ್ ಸಿ.ಜಿ. ಸೇರಿದಂತೆ ವಿವಿಧ ವಿಭಾಗಗಳ ಮುಖ್ಯಸ್ಥರು, ಪ್ರಾಧ್ಯಾಪಕರು, ಅತಿಥಿ ಉಪನ್ಯಾಸಕರು, ಕಾಲೇಜು ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ದ್ವಿತೀಯ ಪಿಯು–2 ಫಲಿತಾಂಶ ಪ್ರಕಟ: ಕ್ರೋಢೀಕೃತ ಫಲಿತಾಂಶವು ಶೇ.92.25ಕ್ಕೆ ಏರಿಕೆ

ಬೆಂಗಳೂರು

ದ್ವಿತೀಯ ಪಿಯುಸಿ ಪರೀಕ್ಷೆ –2ರ ಫಲಿತಾಂಶವನ್ನು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಇಂದು ಪ್ರಕಟಿಸಿದೆ. ರಾಜ್ಯದ ಎರಡೂ ಪರೀಕ್ಷೆಗಳ ಒಟ್ಟು ಯಾಗಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಎಸ್.ಮಧುಬಂಗಾರಪ್ಪ ತಿಳಿಸಿದ್ದಾರೆ.

ಫಲಿತಾಂಶ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ದ್ವಿತೀಯ ಪರೀಕ್ಷೆ–1ರಲ್ಲಿ ಶೇ.86.52ರಷ್ಟು ಫಲಿತಾಂಶ ಬಂದಿತ್ತು. ಕಳೆದ ವರ್ಷದ ಶೇ.85.19 ಫಲಿತಾಂಶಕ್ಕೆ ಹೋಲಿಸಿದರೆ ಇದು ಶೇ.7.06ರಷ್ಟು ಮಹತ್ವದ ಏರಿಕೆಯಾಗಿದೆ. ಇದು ಕರ್ನಾಟಕದ ಇತಿಹಾಸದಲ್ಲೇ ದೊಡ್ಡ ಸಾಧನೆಯಾಗಿದೆ ಎಂದು ಬಣ್ಣಿಸಿದ್ದಾರೆ.

ಈ ವರ್ಷ ದ್ವಿತೀಯ ಪಿಯುಸಿ ಪರೀಕ್ಷೆ –1ರಲ್ಲೇ ರಾಜ್ಯವು ಸಾರ್ವಕಾಲಿಕ ದಾಖಲೆಯ ಫಲಿತಾಂಶ ಸಾಧಿಸಿದ್ದು,ಇದೀಗ ಪರೀಕ್ಷೆ 2ರ ನಂತರ ಈ ದಾಖಲೆಯನ್ನು ಮತ್ತೊಮೆ ಸುಧಾರಿಸಿ ಹೊಸ ಇತಿಹಾಸ ನಿರ್ಮಿಸಿರುವುದು ನಮಗೆ ಹೆಮೆಯ ವಿಷಯವಾಗಿದೆ ಎಂದಿದ್ದಾರೆ.

ದೇಶದಲ್ಲೇ ಈ ಎರಡು ಪರೀಕ್ಷೆಯ ವಿಧಾನವನ್ನು ಕರ್ನಾಟಕ ಸರ್ಕಾರ ಮೊದಲ ಬಾರಿಗೆ ಜಾರಿಗೆ ತಂದಿದೆ. ಇದರಿಂದ ತಮ ಅಂಕಗಳನ್ನು ಹೆಚ್ಚಿಸಿಕೊಳ್ಳಲು ಬಯಸಿದ ವಿದ್ಯಾರ್ಥಿಗಳಿಗೆ ಅನುಕೂಲವಾಗಿದೆ. ಪರೀಕ್ಷೆ 2ರಲ್ಲಿ ಅಂಥ ವಿದ್ಯಾರ್ಥಿಗಳಿಗೆ ಅವಕಾಶ ಕಲ್ಪಿಸಲಾಗಿತ್ತು.

ಎರಡೂ ಪರೀಕ್ಷೆಗಳಲ್ಲಿ ಯಾವುದರಲ್ಲಿ ಗರಿಷ್ಠ ಅಂಕ ಪಡೆದಿರುತ್ತಾರೋ ಅದನ್ನು ಪರಿಗಣಿಸುವುದರಿಂದ ಕೇವಲ ಒಟ್ಟಾರೆ ಉತ್ತೀರ್ಣರಾಗಿರುವ ವಿದ್ಯಾರ್ಥಿಗಳ ಸಂಖ್ಯೆಯಷ್ಟೇ ಹೆಚ್ಚುವುದಲ್ಲ. ಅವರು ಉತ್ತೀರ್ಣಗೊಂಡಿರುವ ಅಂಕಗಳಲ್ಲೂ ಹೆಚ್ಚಳವಾಗಿದೆ ಎಂದು ಅವರು ಹೇಳಿದ್ದಾರೆ.

ಕಲಾ, ವಾಣಿಜ್ಯ ಮತ್ತು ವಿಜ್ಞಾನ ವಿಭಾಗಗಳಲ್ಲೂ ಗಮನಾರ್ಹ ಸಾಧನೆ ದಾಖಲಾಗಿದೆ. ಕಲಾ ವಿಭಾಗದ ಫಲಿತಾಂಶ ಕಳೆದ ವರ್ಷದ ಶೇ.69.47ರಿಂದ ಶೇ.83.31ಕ್ಕೆ, ವಾಣಿಜ್ಯ ವಿಭಾಗದ ಫಲಿತಾಂಶ ಶೇ.87.83ರಿಂದ ಶೇ.92.84ಕ್ಕೆ ಹಾಗೂ ವಿಜ್ಞಾನ ವಿಭಾಗದ ಫಲಿತಾಂಶ ಶೇ.91.88ರಿಂದ ಶೇ.96.01ಕ್ಕೆ ಏರಿಕೆಯಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಈ ಬಾರಿ ವಿಶೇಷ ಸಾಧನೆ ಮಾಡಿದ್ದು, ಶೇ.92.77ರಷ್ಟು ಗ್ರಾಮಾಂತರ ಪ್ರದೇಶದ ಫಲಿತಾಂಶ ದಾಖಲಾಗಿದೆ. ನಗರ ಪ್ರದೇಶದ ಫಲಿತಾಂಶ ಶೇ.92.01ರಷ್ಟಾಗಿದೆ.

ಕಳೆದ ವರ್ಷ ಗ್ರಾಮೀಣ ಭಾಗದ ಫಲಿತಾಂಶ ಶೇ.84.94ರಷ್ಟು ಬಂದಿತ್ತು. ಈ ಬಾರಿ ಗ್ರಾಮೀಣ ವಿದ್ಯಾರ್ಥಿಗಳ ಫಲಿತಾಂಶದಲ್ಲೂ ಸುಧಾರಣೆಯಾಗಿದೆ ಎಂದು ಹೇಳಿದ್ದಾರೆ.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy